ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
ಸಂಪುಟ: 21, ಸಂಚಿಕೆ: 164, ಪುಟಗಳು: 8, ಶನಿವಾರ, 23 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

## ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಶನಿವಾರ 23, ಮಾರ್ಚ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಶುಕ್ಲ ಪಕ್ಷ,
- ತ್ರಯೋದಶಿ / ಚತುರ್ದಶಿ,
- ಶನಿವಾರ, ಪೂರ್ವಫಾಲ್ಗುಣಿ ನಕ್ಷತ್ರ.
- ರಾಹುಕಾಲ : 09:28 ರಿಂದ 10:59
- ಗುಳಿಕಕಾಲ : 06:25ರಿಂದ 07:57
- ಯಮಗಂಡಕಾಲ: 02:01 ರಿಂದ 03:32

# ರಷ್ಯಾದಲ್ಲಿ ಉಗ್ರರ ಅಟ್ಟಹಾಸ 70ಕ್ಕೂ ಹೆಚ್ಚು ಮಂದಿ ದುರ್ಮರಣ

**ಮಾಸ್ಕೋ:** ರಷ್ಯಾದ ರಾಜಧಾನಿ ಮಾಸ್ಕೋದಲ್ಲಿ ಉಗ್ರರ ಅಟ್ಟಹಾಸ ಮೆರೆದಿದ್ದು, ಶುಕ್ರವಾರ ರಾತ್ರಿ ಮಾಲ್ ಒಂದರಲ್ಲಿ ನಡೆಯುತ್ತಿದ್ದ ಸಂಗೀತ ಕಾರ್ಯಕ್ರಮದಲ್ಲಿ ಉಗ್ರರು ಅಮಾಯಕರ ಜೀವ ಬಲಿತೆಗೆದುಕೊಂಡಿದ್ದಾರೆ.

ಹೌದು. ರಷ್ಯಾದ ರಾಜಧಾನಿ ಮಾಸ್ಕೋದ ಕ್ರೋಕಸ್ ಸಿಟಿ ಹಾಲ್‌ನಲ್ಲಿ ಐವರು ಬಂದೂಕುಧಾರಿಗಳು ಜನರ ಗುಂಪಿನ ಮೇಲೆ ಗುಂಡಿನ ದಾಳಿ ನಡೆಸಿದ್ದು, ಈ ಭಯಾನಕ ಘಟನೆಯಲ್ಲಿ 70ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಜೊತೆಗೆ 140ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಸ್ಥಳೀಯ ಮಾಧ್ಯಮಗಳ ಪ್ರಕಾರ, ಗುಂಡಿನ ದಾಳಿ ಪ್ರಾರಂಭವಾದ ಸ್ವಲ್ಪ ಸಮಯದ ನಂತರ ಕ್ರೋಕಸ್ ಸಿಟಿ ಹಾಲ್‌ನಲ್ಲಿ ಸ್ಫೋಟ ಸಂಭವಿಸಿದೆ. ಹಾಲ್‌ನಲ್ಲಿ ಬೆಂಕಿ ಕಾಣಿಸಿಕೊಂಡ ಘಟನೆಯ ವೀಡಿಯೊಗಳು ಮತ್ತು ಫೋಟೋಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿವೆ. ಮಾಸ್ಕೋದ ಕ್ರೋಕಸ್ ಸಿಟಿ ಹಾಲ್‌ನಲ್ಲಿ ಗುಂಡಿನ ದಾಳಿಯ ಬಳಿಕ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿವೆ ಎಂದು ರಷ್ಯಾದ ಭದ್ರತಾ ಸಂಸ್ಥೆ ಎಫ್‌ಎಸ್‌ಬಿ ಹೇಳಿದೆ. ಜೊತೆಗೆ ಅಲ್ಲಿ ಸಿಲುಕಿರುವ ಜನರನ್ನು ರಕ್ಷಿಸುವ ಕಾರ್ಯವೂ ನಡೆಯುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿರುವ ವಿಡಿಯೋದಲ್ಲಿ ದಾಳಿಕೋರನೊಬ್ಬ ಕೂಡ ಕಾಣಿಸಿಕೊಂಡಿದ್ದಾನೆ.

ಪುಟ 2




## ಭೀಕರ ದಾಳಿ ಖಂಡಿಸಿದ ಮೋದಿ

**ನವದೆಹಲಿ:** ರಷ್ಯಾ ರಾಜಧಾನಿ ಮಾಸ್ಕೋದ ಕ್ರೋಕಸ್ ಕನ್ಸರ್ಟ್ ಹಾಲ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಖಂಡಿಸಿದ್ದಾರೆ.



ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಪ್ರಧಾನಿ, ಮಾಸ್ಕೋದಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸುತ್ತೇವೆ. ಸಂತ್ರಸ್ತ ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ. ಈ ದುಃಖದ ಸಮಯದಲ್ಲಿ ಭಾರತವು ರಷ್ಯಾದ ಒಕ್ಕೂಟದ ಸರ್ಕಾರ ಮತ್ತು ಜನರೊಂದಿಗೆ ಒಗ್ಗಟ್ಟಿನಿಂದ ನಿಂತಿದೆ ಎಂದು ಹೇಳಿದ್ದಾರೆ.

ಇತ್ತ ದಾಳಿಗೆ ಸಂಬಂಧಪಟ್ಟಂತೆ ರಷ್ಯಾ ಅಧ್ಯಕ್ಷ ಪುಟಿನ್, ದಾಳಿಕೋರರು ತಕ್ಕ ಬೆಲೆ ತೆರಬೇಕಾಗುತ್ತದೆ. ಭಯೋತ್ಪಾದಕರನ್ನು ನಾವು ಸುಮ್ಮನೆ ಬಿಡಲ್ಲ ಎಂದು ದಾಳಿಯ ಹೊಣೆ ಹೊತ್ತ ಐಸಿಸ್‌ಗೆ ಎಚ್ಚರಿಕೆ ನೀಡಿದ್ದಾರೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ಎನ್‌ಐಎಗೆ ಸಿಕ್ಕಿತು ಲಿಂಕ್



**ಬೆಂಗಳೂರು:** ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಬ್ಲಾಸ್ಟ್ ಮಾಡಿ ಹತ್ತಿರ ಒಂದು ತಿಂಗಳಾಗುತ್ತಾ ಇದೆ. ಆದರೆ ಬಾಂಬರ್ ಮಾತ್ರ ಇನ್ನೂ ಪತ್ತೆಯಾಗಿಲ್ಲ. ಬಾಂಬ್ ಇಟ್ಟವನು ಯಾರು ಅನ್ನೋದನ್ನ ಇದೀಗ ಎನ್‌ಐಎ ಪತ್ತೆ ಮಾಡಿದೆ.

ಹೌದು, ಈಗಾಗಲೇ 2019ರಿಂದ ಎನ್‌ಐಎ ಅಧಿಕಾರಿಗಳಿಗೆ ಮೋಸ್ಟ್ ವಾಂಟೆಡ್ ಉಗ್ರ, ಅನ್ನೋದು ಕ್ಲಿಯರ್ ಆಗಿದೆ. ಹಾಗಾದ್ರೆ ಆ ಮೋಸ್ಟ್ ವಾಂಟೆಡ್ ಉಗ್ರ ಎಲ್ಲಿದ್ದ ಅನ್ನೋ ಕಂಪ್ಲೀಟ್ ಡಿಟೈಲ್ಸ್ ಇಲ್ಲಿದೆ. ರಾಮೇಶ್ವರಂ ಕೆಫೆ ಬಾಂಬರ್ ಜಾಡು ಹಿಡಿದ ಎನ್‌ಐಎಗೆ ಚೆನ್ನೈ ಲಿಂಕ್ ಸಿಕ್ಕಿದೆ. ತಮಿಳುನಾಡಿನಿಂದ ಬಂದು ಬಾಂಬ್ ಇಟ್ಟು ಶಂಕಿತ ಪರಾರಿಯಾಗಿದ್ದಾನೆ.

ಪುಟ 2

### ನೆಲಮಂಗಲದಲ್ಲಿ ನಕಲಿ ಬ್ರ್ಯಾಂಡ್‌ಗಳ ಹಾವಳಿ



**ನೆಲಮಂಗಲ :** ನೀವು ಬ್ರಾಂಡೆಡ್ ಡಿಟರ್ಜೆಂಟ್ ವಸ್ತುಗಳನ್ನ ತಗೆದುಕೊಳ್ಳುತ್ತಿದ್ರೆ, ಎಚ್ಚರದಿಂದ ಇರಬೇಕು. ಸ್ವಲ್ಪ ಯಾಮಾರಿದ್ರೂ, ನಿಮ್ಮ ಮನೆಯ ಶುಚಿತ್ವ ಹಾಳಾಗಿ, ನಿಮ್ಮ ನೆಮ್ಮದಿಯೂ ಹಾಳಾಗಿ ಬಿಡುತ್ತೆ. ಯಾಕೆಂದ್ರೆ, ನಕಲಿ ಡಿಟರ್ಜೆಂಟ್ ವಸ್ತುಗಳ ಕಲಬೆರಕೆ ಹಾಗೂ ನಕಲಿಯ ದೊಡ್ಡ ಜಾಲವೇ ಪತ್ತೆಯಾಗಿದೆ. ಹಾರ್ಪಿಕ್, ಲೈಸೋಲ್, ಕೊಲೀನ್, ಏನೇ ಬಳಸಿದ್ರು, ಗಲೀಜು ಹೋಗುತ್ತಿಲ್ಲ. ರಾತ್ರಿ ಮಲಗುವಾ ಅಂದ್ರೆ, ಸೊಳ್ಳೆ ಕಾಟಕ್ಕೆ ಗುಡ್ ನೈಟ್ ಬಳಸಿದ್ರು, ಸೊಳ್ಳೆಯಿಂದ ಮುಕ್ತಿ ಸಿಗದೆ ಬ್ಯಾಡ್ ನೈಟ್ ಆಗುತ್ತಿದೆ! ಹಾಗಾದರೆ ನೀವು ಬಳಸುತ್ತಿರುವ ಡಿಟರ್ಜೆಂಟ್ ಹಾಗೂ ಗುಡ್ ನೈಟ್ ಅಸಲಿ ಅಲ್ಲದೆ ನಕಲಿ ಆಗಿರಬಹುದು ಎಂಬುದನ್ನ ಯೋಚಿಸಿದ್ದೀರಾ?

ಪುಟ 2

# ಕಾಂಗ್ರೆಸ್ ಶಾಸಕರಿಗೆ ಬಿಜೆಪಿ 50 ಕೋಟಿ ಆಮಿಷವೊಡ್ಡಿದೆ ಸಿದ್ದರಾಮಯ್ಯ ಆರೋಪ

**ಬೆಂಗಳೂರು:** ಲೋಕಸಭಾ ಚುನಾವಣೆಗೆ ಅಖಾಡ ಸಜ್ಜಾಗಿದೆ. ಪ್ರಚಾರ ಆರಂಭವಾಗಿದೆ. ಅಭ್ಯರ್ಥಿಗಳು ತಮ್ಮ ಗೆಲುವಿಗಾಗಿ ನಾನಾ ತಯಾರಿ ಆರಂಭಿಸಿದ್ದಾರೆ. ಇದರ ನಡುವೆ ಸಿಎಂ ಸಿದ್ದರಾಮಯ್ಯ ಗಂಭೀರ ಆರೋಪ ಮಾಡಿದ್ದಾರೆ. ಕಾಂಗ್ರೆಸ್ ಶಾಸಕರು ರಾಜೀನಾಮೆ ಕೊಡುವಂತೆ ಮಾಡಲು ಬಿಜೆಪಿ ತಲಾ 50 ಕೋಟಿ ರೂಪಾಯಿ ನೀಡುವುದಾಗಿ ಆಮಿಷವೊಡ್ಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಆದಾಯ ತೆರಿಗೆ ಇಲಾಖೆ ದಾಳಿ ನಡೆಸುತ್ತದೆ. ಅಕ್ರಮದ ಮೂಲಕ ಸಂಪತ್ತು ಗಳಿಸಿದ ಶ್ರೀಮಂತರು ವಿರೋಧ ಪಕ್ಷಗಳಲ್ಲಿ ಮಾತ್ರ ಇದ್ದಾರೆಯೇ ಬಿಜೆಪಿಯಲ್ಲಿ ಯಾರೂ ಇಲ್ಲವೇ ಬಿಜೆಪಿ ಅವರೇ ಭ್ರಷ್ಟಾಚಾರದ ಮೂಲ ಪಿತಾಮಹರು ಎಂದು ಸಿದ್ದರಾಮಯ್ಯ ಕಿಡಿಕಾರಿದರು.

ಇಂದಿಗೂ ಅವರು ಆಪರೇಷನ್ ಕಮಲಕ್ಕೆ ಪ್ರಯತ್ನಿಸುತ್ತಿದ್ದಾರೆ. ನಮ್ಮ ಶಾಸಕರಿಗೆ ರಾಜೀನಾಮೆ ನೀಡುವಂತೆ 50 ಕೋಟಿ ರೂ. ಆಮಿಷವೊಡ್ಡುತ್ತಿದ್ದಾರೆ. ನಿಮ್ಮ ಚುನಾವಣಾ ವೆಚ್ಚಕ್ಕೂ ಹಣ ನೀಡುತ್ತೇವೆ ಎಂದು ಹೇಳುತ್ತಿದ್ದಾರೆ. ಅವರು ಯಾವ ಹಣದ ಭರವಸೆ ನೀಡುತ್ತಿದ್ದಾರೆ ಅದು ಕಪ್ಪು ಹಣ ಅಲ್ಲವೇ ಅದು ಭ್ರಷ್ಟಾಚಾರದ ಹಣವಲ್ಲವೇ ಎಂದು ಸಿಎಂ ಕೆಂಡಕಾರಿದರು.



### ನಮ್ಮೆಲ್ಲರ ಹಣವನ್ನು ಬಿಜೆಪಿ ಸೀಜ್ ಮಾಡಿದೆ

ರಾಜ್ಯ ಕಾಂಗ್ರೆಸ್‌ನ 118.8 ಕೋಟಿ ರೂಪಾಯಿ ಪಕ್ಷದ ಬ್ಯಾಂಕ್ ಖಾತೆಗಳಲ್ಲಿ ಐಟಿ ಇಲಾಖೆಯಿಂದ ಸ್ಥಗಿತಗೊಂಡಿದೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಮೋದಿ ಆಡಳಿತವನ್ನು ಟೀಕಿಸಿದ್ದಾರೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಶಿವಕುಮಾರ್, ನಾವು 78 ಲಕ್ಷ ಜನರನ್ನು ಪಕ್ಷಕ್ಕೆ ಸೇರಿಸಿದ್ದೇವೆ ಮತ್ತು ಅವರು ತಲಾ 10 ರೂ. ಯುವ ಕಾಂಗ್ರೆಸ್ ಸದಸ್ಯತ್ವದಿಂದ ಸುಮಾರು 90 ಕೋಟಿ ರೂ.ಗಳನ್ನು ಸಂಗ್ರಹಿಸಿದ್ದೇವೆ. ಎಂಎಲ್‌ಎ ಟಿಕೆಟ್ ಆಕಾಂಕ್ಷಿಗಳಿಂದ ತಲಾ 2 ಲಕ್ಷ ರೂಪಾಯಿ ಅಂದರೆ ಸುಮಾರು 21 ಕೋಟಿ ರೂಪಾಯಿ ಸಂಗ್ರಹಿಸಿದ್ದೇವೆ. ಆ ಎಲ್ಲ ಹಣವನ್ನು ಬಿಜೆಪಿ ಸೀಜ್ ಮಾಡಿದೆ ಎಂದರು.

## ಲೋಕಸಭಾ ಚುನಾವಣೆ ಬಳಿಕ ರಾಜ್ಯದಲ್ಲಿ ಸಿಎಂ ಬದಲಾವಣೆ ಶ್ರೀನಿವಾಸ್ ಸ್ಫೋಟಕ ಹೇಳಿಕೆ

**ತುಮಕೂರು:** ಲೋಕಸಭಾ ಚುನಾವಣೆ ಹತ್ತಿರವಾಗುತ್ತಿದ್ದಂತೆ ಉಭಯ ಪಕ್ಷಗಳು ಭರ್ಜರಿ ತಯಾರಿ ನಡೆಸಿದೆ. ಈ ಮಧ್ಯೆ ಲೋಕಸಭಾ ಚುನಾವಣೆ ಬಳಿಕ ರಾಜ್ಯದಲ್ಲಿ ಸಿಎಂ ಬದಲಾಗ್ತಾರಾ ಎಂಬ ಪ್ರಶ್ನೆ ಮೂಡಿದೆ. ಹೌದು, ತಿಟಟೂರಿನಲ್ಲಿ ನಡೆದ ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಗುಬ್ಬಿ ಶಾಸಕ ಎಸ್ ಆರ್ ಶ್ರೀನಿವಾಸ್ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಮುದ್ದಹನುಮೇಗೌಡ ಪರ ಪ್ರಚಾರದ ಭಾಷಣದ ವೇಳೆ ಮುಖ್ಯಮಂತ್ರಿ ರಾಜೀನಾಮೆ ವಿಷಯವನ್ನ ಪ್ರಸ್ತಾಪ ಮಾಡಿದ್ದಾರೆ.

ರಾಜ್ಯದಲ್ಲಿ ಇವತ್ತು ನಮ್ಮ ಸರ್ಕಾರ ಇದೆ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚಿನ ಸೀಟು ಗೆಲ್ಲಿಸಲಿಲ್ಲ ಅಂದರೆ ನೈತಿಕ ಹೊಣೆ ಹೊತ್ತು ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕಾಗುತ್ತದೆ. ಈ ಹಿನ್ನಲೆ ಬಡವರ ಪರ ಕೆಲಸ ಮಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನ ಉಳಿಸುವ ಕೆಲಸ ನಾವೆಲ್ಲ ಮಾಡಬೇಕು. ಎಲ್ಲಾ ಕಾರ್ಯಕರ್ತರು ಸಿದ್ದರಾಮಯ್ಯರನ್ನ ಉಳಿಸಿಕೊಳ್ಳುವ ಪ್ರಯತ್ನ ಮಾಡಬೇಕು ಎಂದು ಹೇಳಿದ್ದಾರೆ.

ಪುಟ 2



## ಬಿಜೆಪಿ ಅಭ್ಯರ್ಥಿ ಕೋಟಗೆ ಹಿಂದಿ, ಇಂಗ್ಲಿಷ್ ಬರೋಲ್ಲ, ಅವರನ್ನ ಗೆಲ್ಲಿಸಬೇಡಿ ಎಂದ ಜೆಪಿ ಹೆಗ್ಡೆ ಛೇ! ಇದೆಂಥಾ ಹೇಳಿಕೆ

**ಉಡುಪಿ:** ರಾಜ್ಯದಲ್ಲಿಯೂ ಲೋಕ ಕದನ ಸಾರ್ವತ್ರಿಕವಾಗಿ ಜೋರಾಗಿದೆ. ವೈಯಕ್ತಿಕ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳುವ ಭರದಲ್ಲಿ ಪ್ರತಿಸ್ಪರ್ಧಿಗಳನ್ನು ವೈಯಕ್ತಿಕವಾಗಿ ತೇಜೋವಧೆ ಮಾಡಲಾಗುತ್ತಿದೆ. ಅಂದಹಾಗೆ ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಲ್ಲಿ ಪ್ರಮುಖ ರಾಷ್ಟ್ರೀಯ ಪಕ್ಷಗಳಾದ ಆಡಳಿತಾರೂಢ ಬಿಜೆಪಿ ಮತ್ತು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷಗಳು ತನ್ನ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಿದೆ. ಬಿಜೆಪಿ ಅಭ್ಯರ್ಥಿಯಾಗಿ ಕರ್ನಾಟಕದ ಅಟಲ್ ಬಿಹಾರಿ ವಾಜಪೇಯಿ ಎಂದೇ ಜನಜನಿತರಾದ ಕೋಟ ಶ್ರೀನಿವಾಸ ಪೂಜಾರಿ ಕಣಕ್ಕಿಳಿದಿದ್ದರೆ, ಕೊನೆ ಕ್ಷಣದಲ್ಲಿ ಜಾತಿ ಗಣತಿ ವರದಿ ಸಲ್ಲಿಸಿದ ಜಯಪ್ರಕಾಶ್ ಹೆಗ್ಡೆ ಎಂಬ ಸಂಭಾವಿತ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿದ್ದಾರೆ.





ಈ ಇಬ್ಬರೂ ಹಿರಿಯರು ಕಣಕ್ಕೆ ಇಳಿಯುವ ಮೂಲಕ ಲೋಕಸಭಾ ಚುನಾವಣಾ ಸಮರಕ್ಕೆ ಹೆಚ್ಚಿನ ಮಹತ್ವ ಬರುತ್ತದೆ ಎಂದು ಜನ ಅಂದುಕೊಳ್ಳುತ್ತಿರುವಾಗಲೇ ಜೆಪಿ ಹೆಗ್ಡೆ ಅವರು ಕೋಟ ಶ್ರೀನಿವಾಸ ಪೂಜಾರಿ ಬಗ್ಗೆ ತುಸು ದುಬಾರಿ ಮಾತನ್ನೇ ಆಡಿದ್ದಾರೆ.

ಪುಟ 2

## 35 ಸೊಮಾಲಿಯನ್ ಕಡಲ್ಗಳ್ಳರನ್ನು ಪೊಲೀಸರಿಗೆ ಹಸ್ತಾಂತರಿಸಿದ ನೌಕಾಪಡೆ

**ಮುಂಬೈ:** ಭಾರತೀಯ ನೌಕಾಪಡೆಯು ಕೋಲ್ಕತ್ತಾದ ಅರಬ್ಬಿ ಸಮುದ್ರದ ಬಳಿ 35 ಸೊಮಾಲಿಯನ್ ಕಡಲ್ಗಳ್ಳರನ್ನು ಬಂಧಿಸಲಾಗಿತ್ತು. ಕಡಲ್ಗಳ್ಳತನ ನಿಗ್ರಹ ಇಂದು (ಮಾ.23) ಬೆಳಗ್ಗೆ ಮುಂಬೈಗೆ ಕರೆತಂದು ಮುಂಬೈನ ಪೊಲೀಸರಿಗೆ ಹಸ್ತಾಂತರಿಸಲಾಗಿದೆ. ಭಾರತೀಯ ದಂಡ ಸಂಹಿತೆ, ಕಡಲ ಕಳ್ಳತನ ವಿರೋಧಿ ಕಾಯ್ದೆ ಮತ್ತು ಶಸ್ತ್ರಾಸ್ತ್ರ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗುವುದು ಎಂದು ಮುಂಬೈ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. 40 ಗಂಟೆಗಳ ಕಾಲ ನಿರಂತರವಾದ ಹೈ-ಟೆಂಪೋ ಕಾರ್ಯಾಚರಣೆಗಳ ನಂತರ ಮಾರ್ಚ್ 16 ರಂದು ಕಡಲುಗಳ್ಳರ ಒಗಿ ರುಯೆನ್ ಹಡಗನ್ನು ತಡೆದು ಅದರಲ್ಲಿದ್ದ ಭಾರತೀಯ ಹಾಗೂ ಬಲ್ಗೇರಿಯಾದ ಪ್ರಜೆಗಳನ್ನು ರಕ್ಷಣೆ ಮಾಡಲಾಗಿದೆ.

ಪುಟ 2



## ಮಂಗಳೂರಿನಲ್ಲಿ ಮತ್ತೆ ಧರ್ಮ ದಂಗಲ್

### ಜಾತ್ರೆಯಲ್ಲಿ ಅನ್ಯಮತೀಯರಿಗೆ ವ್ಯಾಪಾರಕ್ಕೆ ಅವಕಾಶ ಬೇಡವೆಂದು ಆಗ್ರಹ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಪ್ರಸಿದ್ಧ ದೇವಸ್ಥಾನದಲ್ಲಿ ಮತ್ತೆ ವ್ಯಾಪಾರ ಧರ್ಮ ದಂಗಲ್ ಕಂಡು ಬಂದಿದೆ. ಅನ್ಯಮತೀಯರಿಗೆ ಜಾತ್ರೆಯಲ್ಲಿ ವ್ಯಾಪಾರಕ್ಕೆ ಅವಕಾಶ ನೀಡದಂತೆ ಸನಾತನ ಹಿಂದೂ ಜಾತ್ರಾ ವ್ಯಾಪಾರಸ್ಥರ ಸಂಘವು ದೇವಸ್ಥಾನದ ಆಡಳಿತ ಮಂಡಳಿಗೆ ಆಗ್ರಹಿಸಿದೆ. ಮುಲ್ಕಿಯಲ್ಲಿ ನಡೆಯಲಿರುವ ಶ್ರೀ ಬಪ್ಪನಾಡು ದುರ್ಗಾಪರಮೇಶ್ವರಿ ದೇವಸ್ಥಾನದ ಜಾತ್ರೆಯಲ್ಲಿ ಅನ್ಯಮತೀಯರಿಗೆ ವ್ಯಾಪಾರಕ್ಕೆ ಅವಕಾಶ ನೀಡಬಾರದೆಂಬ ಕೂಗು ಕೇಳಿ ಬಂದಿದೆ.

ಬಪ್ಪನಾಡುವಿನ ವ್ಯಾಪಾರ ಧರ್ಮ ದಂಗಲ್ ಕಳೆದ ವರ್ಷ ಬ್ಯಾನರ್ ಮೂಲಕ ಸದ್ದು ಮಾಡಿತ್ತು. ಹಿಂದೂ ಜಾತ್ರಾ ವ್ಯಾಪಾರಸ್ಥರ ಸಂಘದ ಜಯರಾಮ್ ಶೆಟ್ಟಿಗಾರ್ ಎಂಬುವವರು ದೇವಸ್ಥಾನದ 150 ಮೀ ವ್ಯಾಪ್ತಿಯೊಳಗೆ ಅನ್ಯಮತೀಯ ವ್ಯಾಪಾರಸ್ಥರಿಗೆ ಅವಕಾಶ ನೀಡಬಾರದು ಹಾಗೂ ದೇವಸ್ಥಾನದ ವಠಾರದಲ್ಲಿ ಹಿಂದುಗಳೇ ವ್ಯಾಪಾರ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಬಪ್ಪ ಬ್ಯಾರಿ ಎಂಬ ಕೇರಳ ವ್ಯಾಪಾರಿಯು ದೇವಸ್ಥಾನವನ್ನು ಕಟ್ಟಿದರು ಎಂದು ಹೇಳಲಾಗುತ್ತೆ.



ಇದು ದೇವಿಯ ಮಹಿಮೆಯನ್ನು ತಿಳಿಸುತ್ತದೆ. ಮುಲ್ಕಿ ನದಿಯ ಪ್ರವಾಹದಲ್ಲಿ ದೇವಸ್ಥಾನವು ನಶಿಸಿತು. ಆದರೆ 5 ಲಿಂಗಗಳ ಪೀಠಕ್ಕೆ ಯಾವುದೇ ಹಾನಿಯಾಗಿರಲಿಲ್ಲ. ಒಂದು ದಿನ ಬಪ್ಪ ಬ್ಯಾರಿ ಹಡಗು ಆ ಲಿಂಗಗಳಿಗೆ ಡಿಕ್ಕಿ ಹೊಡೆಯಿತು. ಆಗ ಅವನಿಗೆ ದುರ್ಗಾದೇವಿಯು ಕನಸಿನಲ್ಲಿ ಬಂದು ಆ ಲಿಂಗಗಳಿಗೆ ದೇವಸ್ಥಾನವನ್ನು ಕಟ್ಟಲು ಹೇಳಿದಂತಾಯಿತು. ಆದ್ದರಿಂದ ಈ ಸ್ಥಳವನ್ನು ಬಪ್ಪ ಎಂದು ಕರೆಯುತ್ತಾರೆ.

ಈ ವಿಷಯವನ್ನು ತಲೆಯಲ್ಲಿ ಇಟ್ಟುಕೊಂಡು ಬಪ್ಪ ಬ್ಯಾರಿ ಮನೆತನದವರು ಉತ್ಸವಗಳಲ್ಲಿ ಪ್ರಸಾದವನ್ನು ಹಂಚುತ್ತಾರೆ.

## ಬಗೆಹರಿಯದ ಮೈತ್ರಿ ಟಿಕೆಟ್ ಹಂಚಿಕೆ ಗೊಂದಲ

# ದೆಹಲಿ ಫ್ಲೈಟ್ ಹತ್ತಿದ ಎಚ್‌ಡಿಡಿ

**ಬೆಂಗಳೂರು:** ಲೋಕಸಭಾ ಚುನಾವಣೆ ಗೆಲ್ಲಲು ಬಿಜೆಪಿ ಕಸರತ್ತು ನಡೆಸುತ್ತಿದೆ. ಆದರೆ ಕರ್ನಾಟಕದಲ್ಲಿ ಮೈತ್ರಿ ಟಿಕೆಟ್ ಹಂಚಿಕೆ ವಿಚಾರ ಕಗ್ಗಂಟಾಗಿಯೇ ಉಳಿದಿದೆ. ಮೈತ್ರಿ ಟಿಕೆಟ್ ಹಂಚಿಕೆ ಗೊಂದಲ ಮುಂದುವರೆದಿದ್ದು, ಈ ಹಿನ್ನೆಲೆಯಲ್ಲಿ ಇಂದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ನವದೆಹಲಿಗೆ ತೆರಳಲಿದ್ದಾರೆ. ಇಂದು ಬೆಳ್ಳಂಬೆಳಗ್ಗೆ ಎಚ್‌ಡಿಡಿ, ಬೆಂಗಳೂರಿನ ವಿಮಾನ ನಿಲ್ದಾಣದಿಂದ ದೆಹಲಿಗೆ ಪ್ರಯಾಣ ಬೆಳಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಭೇಟಿಯಾಗಿ ಅಂತಿಮ ಮಾತುಕತೆ ಸಾಧ್ಯತೆ ಇದೆ.



ಇಂದು ಮಧ್ಯಾಹ್ನ ಪ್ರಧಾನಿ ಮೋದಿ ಅವರನ್ನು ಎಚ್‌ಡಿ ದೇವೇಗೌಡ ಅವರು ಭೇಟಿಯಾಗುವ ಸಾಧ್ಯತೆ ಇದ್ದು, ಈ ವೇಳೆ ಕೋಲಾರ ಟಿಕೆಟ್ ಗೊಂದಲ ಕುರಿತು ಮಾತುಕತೆ ನಡೆಯಲಿದೆ ಎನ್ನಲಾಗಿದೆ. ಚರ್ಚೆ ವೇಳೆ ಎಚ್‌ಡಿಡಿ ಅವರು, ಚಿಕ್ಕಬಳ್ಳಾಪುರ ಲೋಕಸಭಾ ಟಿಕೆಟ್ ಜೆಡಿಎಸ್‌ಗೆ ಬೇಡ ಆ ಬದಲು ಕೋಲಾರ ಕ್ಷೇತ್ರದ ಟಿಕೆಟ್ ಕೊಡಿ ಎಂದು ಬೇಡಿಕೆ ಮುಂದಿಡಲಿದ್ದಾರೆ ಎನ್ನಲಾಗಿದೆ. ಮಾತುಕತೆ ನಡೆಸಿ ಎಚ್‌ಡಿಡಿ ಇಂದು ಸಂಜೆಯೇ ಬೆಂಗಳೂರಿಗೆ ವಾಪಾಸ್ ಆಗುವ ನಿರೀಕ್ಷೆ ಇದೆ.

ಇತ್ತ, ಕಾಂಗ್ರೆಸ್‌ನಲ್ಲೂ ಬಿಜೆಪಿಯಲ್ಲೂ ಇದೀಗ ಒಂದೇ ಜಗಳ, ಟಿಕೆಟ್ ಗದ್ದಲ. ಬಿಜೆಪಿಗೆ ತುಮಕೂರು, ಕಾಂಗ್ರೆಸ್‌ಗೆ ಬಾಗಲಕೋಟೆಯಲ್ಲಿ ರೆಬೆಲ್‌ಗಳ ಟೆನ್ಷನ್. ರಾಜ್ಯ ಬಿಜೆಪಿ ನಾಯಕರಿಗೆ ಅತೃಪ್ತರ ಒಳೇಟಿನ ಭಯ ಇದ್ದು, ಅತೃಪ್ತರ ಮನವೊಲಿಸುವ ಬಗ್ಗೆ ಬಿಜೆಪಿ ನಾಯಕರಿಂದ ಸಭೆ ನಡೆಯಿತು. ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ಪ್ರಮುಖರಿಂದ ಮಾತುಕತೆ ನಡೆಯಿತು.

ಅತೃಪ್ತರಿಂದ ಅಭ್ಯರ್ಥಿಗಳಿಗೆ ಹಿನ್ನಡೆ ಭಯ ನಾಯಕರನ್ನು ಕಾಡ್ತಿದೆ. ಹೀಗಾಗೇ ಅತೃಪ್ತರ ಮನವೊಲಿಕೆ ಮಾಡುವ ಕಾರ್ಯತಂತ್ರ ಮಾಡಲಾಗಿದೆ. ಬಂಡಾಯ ಎದ್ದಿರೋರನ್ನು, ಅತೃಪ್ತರನ್ನು ಸಮಾಧಾನ ಮಾಡುವ ಬಗ್ಗೆ ಚರ್ಚೆ ಆಯ್ತು. ಅಭ್ಯರ್ಥಿಗಳಿಗೆ ಒಳೇಟು ಕೊಡುವವರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಅಭ್ಯರ್ಥಿಗಳ ಗೆಲುವಿಗೆ ಮಾಡಬೇಕಾದ ತಂತ್ರಗಳ ಬಗ್ಗೆ ಸಮಾಲೋಚನೆ ನಡೆಸಿದ್ದಾರೆ.

# ನನ್ನ ತಂಗಿಗೆ ನಕಲು ಮಾಡಲು ಬಿಡಲ್ವಾ? ಪೇದೆ ಮೇಲೆ ವ್ಯಕ್ತಿ ಹಲ್ಲೆ

**ಕಲಬುರಗಿ:** ರಾಜ್ಯಾದ್ಯಂತ ಪಿಯುಸಿ ಪರೀಕ್ಷೆ ನಡೆಯುತ್ತಿದ್ದು, ಈ ವೇಳೆ ಕಲಬುರಗಿಯಲ್ಲಿ ಅಚಾತುರ್ಯವೊಂದು ನಡೆದಿದೆ. ಹೌದು. ವ್ಯಕ್ತಿಯೊಬ್ಬ ತನ್ನ ತಂಗಿಗೆ ಪಿಯು ಪರೀಕ್ಷೆಯಲ್ಲಿ ನಕಲು ಮಾಡಲು ಸಹಕಾರ ಮಾಡಿಲ್ಲ ಅಂತಾ ಪೇದೆ ಮೇಲೆ ಹಲ್ಲೆ ಮಾಡಿದ್ದಾನೆ. ಈ ಘಟನೆ ಕಲಬುರಗಿ ಜಿಲ್ಲೆ ಅಫಜಲಪುರ್ ತಾಲೂಕಿನ ಕರಜಗಿ ಪರೀಕ್ಷಾ ಕೇಂದ್ರದಲ್ಲಿ ನಡೆದಿದೆ.



ಪಿಯುಸಿ ಪರೀಕ್ಷೆ ನಡೆಯುತ್ತಿದ್ದ ವೇಳೆ ಕೈಲಾಸ್ ಎಂಬಾತ ಪೊಲೀಸ್ ಪೇದೆ ಪಂಡಿತ್ ಪಾಂಡ್ರೆ, ನಡುವೆ ಮಾತಿನ ಚಕಮಕಿ ನಡೆದಿದೆ. ಮಾತಿಗೆ ಮಾತು ಬೆಳೆದು ನನ್ನ ತಂಗಿಗೆ ನಕಲು ಮಾಡಲು ಬಿಡಲ್ವಾ ಎಂದು ರೊಚ್ಚಿಗೆದ್ದ ಕೈಲಾಸ್, ಪಂಡಿತ್ ಪಾಂಡ್ರೆ ಮೇಲೆ ಹಲ್ಲೆ ಮಾಡಿದ್ದಾನೆ. ಪ್ರಕರಣ ಸಂಬಂಧ ಆರೋಪಿ ಕೈಲಾಸ್ ಹಾಗೂ ಆತನ ಸ್ನೇಹಿತ ಸಮೀರ್ ನನ್ನು ಪೊಲೀಸರು ಬಂಧಿಸಿದ್ದಾರೆ. ಈ ಕುರಿತು ಅಫಜಲಪುರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಟಿಕೆಟ್ ಕೈತಪ್ಪಿದಕ್ಕೆ ಗಳಗಳನೇ ಕಣ್ಣೀರು ಹಾಕಿದ ವೀಣಾ ಕಾಶಪ್ಪನವರ್

**ಬಾಗಲಕೋಟೆ:** ಸ್ವಾಭಿಮಾನಿ ಕಾರ್ಯಕರ್ತರ ಹಾಗೂ ಮುಖಂಡರ ಸಭೆ ಆಯೋಜನೆ ಮಾಡಿ ಟಿಕೆಟ್ ವಂಚಿತೆ ವೀಣಾ ಕಾಶಪ್ಪನವರ್ ಗಳಗಳನೇ ಕಣ್ಣೀರು ಹಾಕಿದ್ದಾರೆ. ಕಣ್ಣೀರು ಹಾಕುತ್ತಲೇ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ವೀಣಾ, ಟಿಕೆಟ್ ಸಿಗುತ್ತೆ ಎಂದು ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದೆ, ಆದರೆ ಹೇಗೆ ಟಿಕೆಟ್ ಕೈ ತಪ್ಪಿದೆ ಎಂದು ಗೊತ್ತಾಗ್ತಿಲ್ಲ. ನಾಯಕರು ನಮ್ಮ ಜಿಲ್ಲೆಯ ಸ್ವಾಭಿಮಾನವನ್ನು ಮಾರಿಕೊಂಡಿದ್ದಾರೆ. ಪಕ್ಷಕ್ಕಾಗಿ ಸಾಕಷ್ಟು ಕೆಲಸ ಮಾಡಿದ್ದೆ, ಯಾರಿಂದ ಟಿಕೆಟ್ ತಪ್ಪಿತು ಎಂದು ಗೊತ್ತಿಲ್ಲ ಎಂದರು. ರಾಜ್ಯ ನಾಯಕರನ್ನು ಕೇಳಿದ್ರೆ, ಜಿಲ್ಲಾ ನಾಯಕರ ಹೆಸರು ಹೇಳ್ತಾರೆ. ಜಿಲ್ಲಾ ನಾಯಕರನ್ನ ಕೇಳಿದ್ರೆ, ರಾಜ್ಯ ನಾಯಕರ ಹೆಸರು ಹೇಳ್ತಿದ್ದಾರೆ. ಕಾರ್ಯಕರ್ತರ ಅಭಿಪ್ರಾಯ ಸ್ವೀಕರಿಸಿದ ಸ್ವತಂತ್ರ ಸ್ಪರ್ಧೆ ಬಗ್ಗೆ ನಿರ್ಧರಿಸುತ್ತೇನೆ ಎಂದು ವೀಣಾ ಕಾಶಪ್ಪನವರ್ ಹೇಳಿದ್ದಾರೆ. ಬಾಗಲಕೋಟೆ ಲೋಕಸಭಾ ಕ್ಷೇತ್ರದ ಟಿಕೆಟ್ ಕೈತಪ್ಪಿದಕ್ಕೆ ಸಭೆ ಆಯೋಜನೆ ಮಾಡಲಾಗಿತ್ತು. ನಗರದ ಚರಂತಿಮಠ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿರುವ ಸಭೆಯಲ್ಲಿ ಹುನಗುಂದ ಶಾಸಕ ವಿಜಯಾನಂದ್ ಕಾಶಪ್ಪನವರ್ ಭಾಗಿಯಾಗಿದ್ದಾರೆ. ಈ ಬಾರಿಯ ಲೋಕಸಭಾ ಚುನಾವಣೆಗೆ ಬಾಗಲಕೋಟೆಯಿಂದ ಸಂಯುಕ್ತಾ ಪಾಟೀಲ್ ಅವರಿಗೆ ಕಾಂಗ್ರೆಸ್‌ನಿಂದ ಟಿಕೆಟ್ ಘೋಷಿಸಲಾಗಿದೆ.



# ಕೋಲಾರ ಕಾಂಗ್ರೆಸ್ ಬಣ ರಾಜಕೀಯ ತಾರಕಕ್ಕೆ

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಕರ್ನಾಟಕದ ಕಾಂಗ್ರೆಸ್ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆಯಾಗಿದ್ದು, ಇನ್ನು ನಾಲ್ಕು ಕ್ಷೇತ್ರಗಳ ಅಭ್ಯರ್ಥಿಗಳನ್ನು ಅಂತಿಮಗೊಳಿಸುವುದು ಬಾಕಿ ಇದೆ. ಈ ಮಧ್ಯೆ ಕೋಲಾರದಲ್ಲಿ ಬಣ ರಾಜಕೀಯ ತಾರಕಕ್ಕೇರಿದೆ. ಸಚಿವ ಕೆಎಚ್ ಮುನಿಯಪ್ಪ ಮತ್ತು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಬಣಗಳ ನಡುವಣ ತಿಕ್ಕಾಟ ಹೆಚ್ಚಾಗಿದೆ. ಅಳಿಯ ಚಿಕ್ಕಪೆದ್ದಣ್ಣಗೆ ಟಿಕೆಟ್ ನೀಡುವಂತೆ ಮುನಿಯಪ್ಪ ಪಟ್ಟು ಹಿಡಿದಿದ್ದರೆ, ಅವರಿಗೆ ಟಿಕೆಟ್ ನೀಡಿದರೆ ಕೆಲಸವೇ ಮಾಡುವುದಿಲ್ಲ ಎಂದು ರಮೇಶ್ ಕುಮಾರ್ ಬಣ್ಣಪಟ್ಟು ಹಿಡಿದಿದೆ.



ಕೋಲಾರ ಲೋಕಸಭಾ ಕ್ಷೇತ್ರದ ಟಿಕೆಟ್ ಅಳಿಯ ಚಿಕ್ಕಪೆದ್ದಣ್ಣಗೆ ನೀಡುವಂತೆ ಮುನಿಯಪ್ಪ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಒತ್ತಡ ಹೇರಿದ್ದಾರೆ. ಇಷ್ಟೇ ಅಲ್ಲದೆ, ಹೈಕಮಾಂಡ್ ನಾಯಕರಿಗೂ ಈಗಾಗಲೇ ಮಾಡಿದ್ದಾರೆ ಎನ್ನಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಮ್ಮತಿಸಿದರೆ ಕೋಲಾರ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಚಿಕ್ಕಪೆದ್ದಣ್ಣ ಕಣಕ್ಕಿಳಿಯುವುದು ಬಹುತೇಕ ಖಚಿತ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಚಾಮರಾಜನಗರ ಟಿಕೆಟ್ ಹಂಚಿಕೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಗೊಂದಲದ ವಾತಾವರಣ ಸೃಷ್ಟಿಯಾಗಿದೆ. ಸಚಿವ ಮಹದೇವಪ್ಪ ಚಾಮರಾಜನಗರ ಕ್ಷೇತ್ರದಿಂದ ಕಣಕ್ಕಿಳಿಯಲು ಹಿಂದೇಟು ಹಾಕಿದ್ದಾರೆ. ಮತ್ತೊಂದೆಡೆ ಚಿಕ್ಕಬಳ್ಳಾಪುರ ಟಿಕೆಟ್ ತಮಗೆ ನೀಡಬೇಕು ಎಂದು ಮಾಜಿ ಸಿಎಂ ವಿರಪ್ಪ ಮೊಯ್ಲಿ ಪಟ್ಟು ಹಿಡಿದಿದ್ದಾರೆ. ಈ ಎಲ್ಲ ಬೆಳವಣಿಗೆಗಳ ಮಧ್ಯೆಯೇ ಕೋಲಾರದಲ್ಲಿ ಬಣ ರಾಜಕೀಯ ತಾರಕಕ್ಕೇರಿದೆ.

ಕೋಲಾರದ ಬಣ ರಾಜಕೀಯಕ್ಕೆ ಮದ್ದು ಅರೆಯಲಾಗದೆ ರಾಜ್ಯ ಕಾಂಗ್ರೆಸ್ ನಾಯಕರು ಒದ್ದಾಡುತ್ತಿದ್ದಾರೆ. ಇದೇ ಸಂದರ್ಭದಲ್ಲಿ ಡಿಕೆ ಶಿವಕುಮಾರ್‌ರನ್ನು ಭೇಟಿಯಾಗಿ ಮುನಿಯಪ್ಪ ಮಾತುಕತೆ ನಡೆಸುತ್ತಿದ್ದಾರೆ. ಜೊತೆಗೆ ಅಳಿಯನಿಗೆ ಟಿಕೆಟ್ ನೀಡುವಂತೆ ಲಾಬಿ ನಡೆಸುತ್ತಿದ್ದಾರೆ.

# ಸೂಸೈಡ್ ಸ್ಪಾಟ್ ಆಗುತ್ತಿದೆಯಾ ಮೆಟ್ರೋ ಟ್ರ್ಯಾಕ್? ಅಧಿಕಾರಿಗಳ ವಿರುದ್ಧ ನೆಟ್ಟಿಗರ ಆಕ್ರೋಶ

**ಬೆಂಗಳೂರು:** ರಾಜಧಾನಿ ಬೆಂಗಳೂರಿನ ಅತ್ತಿಗುಪ್ಪೆ ಮೆಟ್ರೋ ನಿಲ್ದಾಣದಲ್ಲಿ ನಾಗರಭಾವಿಯ ನ್ಯಾಷನಲ್ ಲಾ ಕಾಲೇಜಿನ ವಿದ್ಯಾರ್ಥಿ ಧ್ರುವ್ ಕಕ್ಕರ್ ಎಂಬಾತ ಆತ್ಮಹತ್ಯೆ ಶರಣಾಗಿರುವ ಘಟನೆ ದೇಶದಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದೆ. ಅದರಲ್ಲೂ ಮೆಟ್ರೋ ನಿಲ್ದಾಣದಲ್ಲೇ ಆತ್ಮಹತ್ಯೆಗೆ ಯತ್ನಿಸುತ್ತಿರುವ ಘಟನೆಗಳು ಹೆಚ್ಚಾಗುತ್ತಿದ್ದು, ರೈಲ್ವೆ ಟ್ರ್ಯಾಕ್ ಗಳಂತೆ ಮೆಟ್ರೋ ಟ್ರ್ಯಾಕ್ ಗಳಲ್ಲೂ ಆತ್ಮಹತ್ಯೆಯ ಸ್ಪಾಟ್ ಆಗಿದೆಯಾ ಎಂಬ ಪ್ರಶ್ನೆ ಮೂಡುವಂತೆ ಮಾಡಿವೆ.




**ಈ ಹಿಂದೆಯೂ ಆತ್ಮಹತ್ಯೆಗೆ ಯತ್ನ:** ಏಕೆಂದರೆ ಈ ಹಿಂದೆಯೂ ಕೂಡ ಬೆಂಗಳೂರಿನ ಜಾಲಹಳ್ಳಿ ಮೆಟ್ರೋ ಸ್ಟೇಷನ್ ನಲ್ಲಿ ಮೆಟ್ರೋ ಹಳಿ ಮೇಲೆ ಜಿಗಿದು ಯುವಕನಿಂದ ಆತ್ಮಹತ್ಯೆ ಯತ್ನಿಸಿದ್ದ. ಅದೃಷ್ಟವಶಾತ್ ಅಂದು ಯುವಕ ಪ್ರಾಣಾಪಾಯದಿಂದ ಪಾರಾಗಿದ್ದ. ಇತ್ತ ಕೆಂಗೇರಿ ನಿಲ್ದಾಣದಲ್ಲೂ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿತ್ತು. ನಮ್ಮ ಮೆಟ್ರೋದಲ್ಲಿ ಸಾಲು ಸಾಲು ದುರಂತಗಳತ್ತಾ ಸಾಗುತ್ತಿರುವುದು ಜನರ ಅಸಮಾಧಾನಕ್ಕೆ ಕಾರಣವಾಗಿದೆ.

**ಭದ್ರತಾ ವ್ಯವಸ್ಥೆ ಸರಿಯಾಗಿ ಮಾಡುವಂತೆ ಒತ್ತಾಯ:** ಸಾಲು ಸಾಲು ದುರಂತಗಳಿಗೆ ಮೆಟ್ರೋ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರು ಆಕ್ರೋಶ ವ್ಯಕ್ತಪಡಿಸಿದ್ದು, ಸಾಲು ಸಾಲು ಪ್ರಕರಣಗಳ ಬಳಿಕ ಅಧಿಕಾರಿಗಳ ಎಚ್ಚೆತ್ತುಕೊಂಡಿಲ್ಲ ಎಂದು ಆರೋಪಿಸಿದ್ದಾರೆ. ಅಲ್ಲದೇ ಮೆಟ್ರೋ ನಿಲ್ದಾಣಗಳಲ್ಲಿ ಭದ್ರತಾ ವ್ಯವಸ್ಥೆ ಸರಿಯಾಗಿ ಮಾಡುವಂತೆ ಒತ್ತಾಯ ಮಾಡಿದ್ದಾರೆ. ಬೆಂಗಳೂರು ನಗರ ದೇಶದ ಅತಿದೊಡ್ಡ ಮೆಟ್ರೋ ಸಂಪರ್ಕ ಜಾಲವನ್ನು ಹೊಂದಿದೆ. ಆದರೆ ದೆಹಲಿ ಹಾಗೂ ಚೆನ್ನೈ ಮೆಟ್ರೋ ನಿಲ್ದಾಣಗಳಲ್ಲಿ ಸುರಕ್ಷತೆಗಾಗಿ ಸ್ಕ್ರೀನ್ ಡೋರ್ ನಿರ್ಮಿಸಲಾಗಿದೆ. ಸಾಲು ಸಾಲು ದುರಂತಗಳು ಸಂಭವಿಸುತ್ತಿರುವ ಬಳಿಕವೂ ಮೆಟ್ರೋ ಅಧಿಕಾರಿಗಳು ಟ್ರ್ಯಾಕ್ ಗಳಿಗೆ ಸ್ಕ್ರೀನ್ ಡೋರ್ ನಿರ್ಮಿಸಿಲ್ಲ, ಶೀಘ್ರವೇ ಈ ಬಗ್ಗೆ ಚಿಂತನೆ ನಡೆಸಿ ಸ್ಕ್ರೀನ್ ಡೋರ್ ನಿರ್ಮಿಸಲು ನೆಟ್ಟಿಗರು ಒತ್ತಾಯ ಮಾಡಿದ್ದಾರೆ. ಮೆಟ್ರೋ ನಿಲ್ದಾಣಗಳಲ್ಲಿ ಸಾಲು ಸಾಲು ಆತ್ಮಹತ್ಯೆ ಪ್ರಕರಣಗಳು ನಡೆಸುತ್ತಿದ್ದಂತೆ ಬಿಎಂಆರ್‌ಸಿಎಲ್ ಕೂಡ ಎಚ್ಚೆತ್ತುಕೊಂಡಿದೆ. ಆತ್ಮಹತ್ಯೆ ಪ್ರಕರಣಗಳು ಸೇರಿದಂತೆ ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಕ್ರಮ ಕೈಗೊಳ್ಳಲು ಬಿಎಂಆರ್‌ಸಿಎಲ್ ಮುಂದಾಗಿದ್ದು, ಪ್ಲಾಟ್ ಫಾರ್ಮ್ ಸ್ಕ್ರೀನ್ ಡೋರ್ ಅಳವಡಿಕೆಗೆ ಚಿಂತನೆ ನಡೆಸಿದೆಯಂತೆ.

# 5, 8, 9ನೇ ತರಗತಿಗಳ ಬೋರ್ಡ್ ಎಕ್ಸಾಂಗೆ ಹೈಕೋರ್ಟ್ ಗ್ರೀನ್ ಸಿಗ್ನಲ್

**ಬೆಂಗಳೂರು:** 5, 8, 9ನೇ ತರಗತಿಗಳ ಬೋರ್ಡ್ ಎಕ್ಸಾಂ ನಡೆಸಲು ಕರ್ನಾಟಕ ಉನ್ನತ ನ್ಯಾಯಾಲಯ ಗ್ರೀನ್ ಸಿಗ್ನಲ್ ನೀಡಿದ್ದು, ಈ ಹಿಂದೆ ಏಕಸದಸ್ಯ ಪೀಠ ನೀಡಿದ್ದ ಆದೇಶ ರದ್ದುಗೊಳಿಸಿ ವಿಭಾಗೀಯ ಪೀಠ ಆದೇಶವನ್ನು ನೀಡಿದೆ. ಈ ಹಿಂದೆ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿದ್ದ ರಾಜ್ಯ ಸರ್ಕಾರ ಮೇಲ್ಮನವಿ ಸಲ್ಲಿಸಿತ್ತು. ಈ ಅರ್ಜಿಯ ಸುದೀರ್ಘ ವಿಚಾರಣೆ ನಡೆಸಿದ ಹೈಕೋರ್ಟ್ ನ ನ್ಯಾ.ಸೋಮಶೇಖರ್ ಹಾಗೂ ನ್ಯಾ.ರಾಜೇಶ್ ರೈ ಅವರ ವಿಭಾಗೀಯ ಪೀಠ ಬೋರ್ಡ್ ಎಕ್ಸಾಂಗೆ ಅಸ್ತು ಎಂದಿದೆ. ಸೋಮವಾರದಿಂದ ಪರೀಕ್ಷೆ ನಡೆಸುವ ಬಗ್ಗೆ ಕೋರ್ಟ್ ಗೆ ಸರ್ಕಾರ ಮಾಹಿತಿ ನೀಡಿದ್ದು, ಉಳಿದ ವಿಷಯಗಳ ಪರೀಕ್ಷೆ ನಡೆಸಲು ಸೂಕ್ತ ಹಾಗೂ ತುರ್ತು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಸೂಚನೆ ನೀಡಲಾಗಿದೆ. ಖಾಸಗಿ ಶಾಲಾ ಒಕ್ಕೂಟ ಬೋರ್ಡ್ ಎಕ್ಸಾಂ ಬೇಡ ಎಂದು ಕೋರ್ಟ್ ಮೆಟ್ಟಿಲೇರಿತ್ತು. ಈ ನಡುವೆ ಶಾಲಾ ಹಂತದಲ್ಲೇ ಪರೀಕ್ಷೆ ನಡೆಸಲು ಪೋಷಕರು ಕೂಡ ಹೇಳಿದ್ದರು. ಆದರೆ ಶಿಕ್ಷಣ ಇಲಾಖೆ ಬೋರ್ಡ್ ಎಕ್ಸಾಂ ನಡೆಸಲೇಬೇಕು ಎಂದು ನ್ಯಾಯಾಲಯಕ್ಕೆ ಮನವರಿಕೆ ಮಾಡಿಕೊಟ್ಟಿದೆ. ಈಗಾಗಲೇ ಶಿಕ್ಷಣ ಇಲಾಖೆ ಎರಡು ವಿಷಯಗಳ ಕುರಿತು ಬೋರ್ಡ್ ಪರೀಕ್ಷೆಯನ್ನ ನಡೆಸಿದೆ. ಉಳಿದ ವಿಷಯಗಳ ಪರೀಕ್ಷೆ ನಡೆಸಲು ಈ ಹಿಂದೆ ಕೋರ್ಟ್ ತಡೆಯಾಜ್ಞೆ ನೀಡಿತ್ತು. ಇದರಿಂದ ವಿದ್ಯಾರ್ಥಿಗಳು ಗೊಂದಲ್ಲಿ ಸಿಲುಕಿದ್ದರು. ಆದರೆ ಈಗ ಹೈಕೋರ್ಟ್ ಪರೀಕ್ಷೆಗೆ ಗ್ರೀನ್ ಸಿಗ್ನಲ್ ನೀಡಿ ಗೊಂದಲಕ್ಕೆ ತೆರೆ ಎಳೆದಿದೆ. ಶೀಘ್ರವೇ ಶಿಕ್ಷಣ ಇಲಾಖೆಯಿಂದ ವೇಳಾಪಟ್ಟಿ ಈಗಾಗಲೇ 11 ನೇ ತರಗತಿಯ ಎಲ್ಲಾ ಪರೀಕ್ಷೆಗಳು ಮುಗಿದಿವೆ. 5, 8, 9ನೇ ತರಗತಿಗಳಲ್ಲಿ ಕೂಡ ಎರಡು ವಿಷಯಗಳ ಪರೀಕ್ಷೆ ಮುಗಿದಿದ್ದು, ಉಳಿದ ವಿಷಯಗಳ ಪರೀಕ್ಷೆಗಳನ್ನ ಸೋಮವಾರದಿಂದ ಆರಂಭಗೊಳಿಸುವ ಸಾಧ್ಯತೆ. ಪರೀಕ್ಷೆ ದಿನಾಂಕ ನಿಗದಿಪಡಿಸಿ ಶಿಕ್ಷಣ ಇಲಾಖೆ ಆದೇಶ ಹೊರಡಿಸಲಿದೆ.




**ರುಪ್ಸಾ ಅಧ್ಯಕ್ಷರು ಹೇಳಿದ್ದೇನು?:** ಕೋರ್ಟ್ ಆದೇಶದ ಕುರಿತಂತೆ ನ್ಯೂಸ್18ಗೆ ಪ್ರತಿಕ್ರಿಯೆ ನೀಡಿರುವ ರುಪ್ಸಾ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ, ಬೋರ್ಡ್ ಪರೀಕ್ಷೆ ನಡೆಸಬಾರದು, ಶಾಲಾ ಹಂತದಲ್ಲೇ ಎಸ್ಎ2 ನಡೆಸಬೇಕು ಎಂದು ನಾವು ವಾದ ಮಂಡಿಸಿದ್ದೇವು. ಈಗಲೂ ನಮಗೆ ನ್ಯಾಯ ಸಿಗಲಿದೆ ಎಂದು ನಂಬಿಕೆ ಇದೆ. ನಾವು ಸುಪ್ರೀಂ ಕೋರ್ಟ್‌ಗೆ ಅರ್ಜಿ ಹಾಕುವ ಚಿಂತನೆ ನಡೆಸಿದ್ದೇವೆ. ಈ ಬಗ್ಗೆ ಸಿದ್ಧತೆ ಕೂಡ ನಡೆಸಿದ್ದೇವೆ. ಈ ಹಿಂದೆ ನಾವು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಕೆ ಮಾಡಿದ್ದೇವು, ಕೂಲಂಕಷವಾಗಿ ವಿಚಾರಣೆ ನಡೆಸಲು ಕೋರ್ಟ್ ತಿಳಿಸಿತ್ತು. ಈಗ ಕೋರ್ಟ್ ಆದೇಶವನ್ನು ಸ್ವೀಕರ ಮಾಡ್ತೇವೆ, ಆ ಬಳಿಕ ನಾವು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಕೆ ಮಾಡುತ್ತೇವೆ ಎಂದು ತಿಳಿಸಿದ್ದಾರೆ.

# ತೆನೆ ಇಳಿಸಿ ಕೈ ಮಿಲಾಯಿಸಿದ ಜೆಡಿಎಸ್ ನಾಯಕರು

**ಬೆಂಗಳೂರು:** ಕೆಪಿಸಿಸಿ ಕಚೇರಿಯಲ್ಲಿ ಪಕ್ಷ ಸೇರ್ಪಡೆ ಕಾರ್ಯಕ್ರಮ ನಡೆಯುತ್ತಿದ್ದು ಜೆಡಿಎಸ್‌ನ ಮೂವರು ನಾಯಕರು ಕೈ ಬಾವುಟ ಹಾರಿಸಿದ್ದಾರೆ. ಕಾರ್ಯಕ್ರಮದ ನಂತರ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಜಂಟಿ ಸುದ್ದಿಗೋಷ್ಠಿ ನಡೆಸಿದರು. ಮಂಡ್ಯದ ಮಾಜಿ ಶಾಸಕ ಎಂ. ಶ್ರೀನಿವಾಸ್, ವಿಧಾನ ಪರಿಷತ್ ಮಾಜಿ ಸದಸ್ಯ, ನಾಗಮಂಗಲದ ಅಪ್ಪಾಜಿ ಗೌಡ ಮತ್ತು ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ಗುರುವಾರ ರಾಜೀನಾಮೆ ನೀಡಿರುವ ಮರಿತಿಬ್ಬೇಗೌಡ ಅವರು ಇಂದು ಕಾಂಗ್ರೆಸ್‌ಗೆ ಸೇರಿದ್ದಾರೆ. ಜೊತೆಗೆ ಆರ್.ಆರ್. ನಗರ ಎಚ್‌ಎಂಟಿ ವಾರ್ಡ್ ಮಾಜಿ ಕಾರ್ಪೊರೇಟರ್ ಆಶಾ ಸುರೇಶ್ ಕಾಂಗ್ರೆಸ್ ಸೇರ್ಪಡೆಯಾದರು.



ಕೆಪಿಸಿಸಿ ಕಚೇರಿಯಲ್ಲಿ ನಡೆಯುತ್ತಿರುವ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲಾ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿವಕುಮಾರ್, ಬಿಕೆ ಹರಿಪ್ರಸಾದ್, ಸಲೀಂ ಅಹಮದ್, ಸಚಿವ ಚಲುವರಾಯಸ್ವಾಮಿ, ರವಿ ಗಾಣಿಗ, ಉದಯ್ ಗೌಡ ಭಾಗಿಯಾಗಿದ್ದಾರೆ. ಇನ್ನು ಕಾರ್ಯಕ್ರಮದಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಮರಿತಿಬ್ಬೇಗೌಡ ಅತಿ ಹೆಚ್ಚು ಕ್ರಿಯಾಶೀಲ ನಾಯಕ. ಪದವೀಧರರು, ಶಿಕ್ಷಕರ ಕ್ಷೇತ್ರದಲ್ಲಿ ಗೆದ್ದ ಹೋರಾಟಗಾರ ವಾಗ್ಮಿ. ಬಹಳ ದಿನದಿಂದ ಗಾಳ ಹಾಕ್ತಿದ್ದೆ ಅವರು ಸಿಕ್ಕಿರಲಿಲ್ಲ. ಕೌನ್ಸಿಲ್ ಸಭಾಪತಿಗೆ ರಾಜೀನಾಮೆ ಕೊಟ್ಟು ಬಂದಿದ್ದಾರೆ. ಜೆಡಿಎಸ್‌ನ ದೊಡ್ಡ ಪಿಲ್ಲರ್ ಆಗಿದ್ದವರು ಅವರು. ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದರು ಎಂದು ಪರಿಚಯಿಸಿದರು.

## ಮೊದಲನೇ ಪುಟದಿಂದ...

## ಮಂದಿ ದುರ್ಮರಣ

ಇರಾಕ್ ಮತ್ತು ಸಿರಿಯಾದ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದ್ದ ಭಯೋತ್ಪಾದಕ ಸಂಘಟನೆಯಾದ ಇಸ್ಲಾಮಿಕ್ ಸ್ಟೇಟ್ ದಾಳಿಯ ಹೊಣೆಗಾರಿಕೆಯನ್ನು ಹೊತ್ತುಕೊಂಡಿದೆ ಎಂದು ಸುದ್ದಿ ಸಂಸ್ಥೆಯೊಂದು ವರದಿ ಮಾಡಿದೆ.

ರಷ್ಯಾದ ಭದ್ರತಾ ಪಡೆಗಳು ಮತ್ತು ಉಗ್ರರ ನಡುವೆ ಗುಂಡಿನ ಚಕಮಕಿ ನಡೆದಿದೆ. ದಾಳಿಯಲ್ಲಿ ತನ್ನ ದೇಶದ ಕೈವಾಡವಿಲ್ಲ ಎಂದು ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಹೇಳಿದ್ದಾರೆ.

### ದಾಳಿ ಖಂಡಿಸಿದ ಮೋದಿ

ಶುಕ್ರವಾರ ಮಧ್ಯರಾತ್ರಿ ಸಂಗೀತ ಕಾರ್ಯಕ್ರಮ ನಡೆಯುತ್ತಿದ್ದ ಸಂದರ್ಭದಲ್ಲಿ ನಡೆದ ಈ ಭೀಕರ ಭಯೋತ್ಪಾದಕ ದಾಳಿಯಲ್ಲಿ ಈವರೆಗೆ ಕನಿಷ್ಠ 70 ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದಾರೆ ಮತ್ತು 140 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಕೃತ್ಯದ ಬಳಿಕ ಮಾಸ್ಕೋದ ಹೊರವಲಯದಲ್ಲಿರುವ ಕ್ರೋಕಸ್ ಕನ್ಸರ್ಟ್ ಹಾಲ್ ಮೇಲೆ ನಮ್ಮ ಯೋಧರು ದಾಳಿ ನಡೆಸಿದ್ದಾರೆ. ಸದ್ಯ ದಾಳಿಕೋರರು ಸುರಕ್ಷಿತವಾಗಿದ್ದು, ವಾಪಸ್ಸಾಗಿದ್ದಾರೆ ಎಂದು ಐಸಿಸ್ ತನ್ನ ಟೆಲಿಗ್ರಾಮ್ ನಲ್ಲಿ ಹೇಳಿಕೆ ನೀಡಿದೆ.

ಉಗ್ರರ ಫೋಟೋ ಬಿಡುಗಡೆ: ಘಟನೆಯ ಬಳಿಕ ರಷ್ಯಾದ ಮಾಧ್ಯಮಗಳು ಭಯೋತ್ಪಾದಕರ ಫೋಟೋಗಳನ್ನು ಬಿಡುಗಡೆ ಮಾಡಿವೆ. ಉಗ್ರರ ದಾಳಿಯ ವೇಳೆ ಸ್ಥಳದಲ್ಲಿ ಇದ್ದ ಪ್ರತ್ಯಕ್ಷದರ್ಶಿಗಳ ಹೇಳಿಕೆಗಳನ್ನು ಉಲ್ಲೇಖಿಸಿ ಸ್ಥಳೀಯ ಮಾಧ್ಯಮ ವರದಿಗಳು, ದಾಳಿಕೋರರು 'ಏಷ್ಯನ್ ಮತ್ತು ಕಕೇಶಿಯನ್' ಜನರಂತೆ ಕಾಣುತ್ತಿದ್ದರು ಮತ್ತು ವಿದೇಶಿ ಭಾಷೆಯಲ್ಲಿ ಮಾತನಾಡುತ್ತಿದ್ದರು, ರಷ್ಯನ್ ಅಲ್ಲ. ಭಯೋತ್ಪಾದಕರು ಇಂಗುಶೆಟಿಯಾ ಸ್ಥಳೀಯರು ಎಂಬುದಾಗಿ ವರದಿ ಮಾಡಿವೆ.

### ಶ್ರೀನಿವಾಸ್ ಸ್ಫೋಟಕ ಹೇಳಿಕೆ

ಇನ್ನು ಪ್ರತಿಭಟನಾ ನಿರತ ಕಾಂಗ್ರೆಸ್ ನಾಯಕನ ಮೇಲೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗುಬ್ಬಿ ಶಾಸಕ ಎಸ್ ಆರ್ ಶ್ರೀನಿವಾಸ್‌ಮೇಲೆ ತುಮಕೂರಿನ ತಿಲಕ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಇದರ ಬೆನ್ನಲ್ಲೇ ಇದೇ ಮಾ.17 ರಂದು ಶಾಸಕ ಶ್ರೀನಿವಾಸ್ ವಿರುದ್ಧದ ಮತ್ತೊಂದು ವಿಡಿಯೋ ವೈರಲ್ ಆಗಿತ್ತು. ಕಳೆದ ಮಾ.4 ರಂದು ಮಹಿಳಾ ಪೂರಕ ಪೌಷ್ಟಿಕ ಆಹಾರ ತಯಾರಿಕಾ ಘಟಕದ ಸಿಬ್ಬಂದಿ ಸಿಡಿಪಿಓ ಮಹೇಶ್, ತಮ್ಮ ಕೆಲಸ ಕಿತ್ತುಕೊಂಡು ವೇತನ ನೀಡದೆ ಬೀದಿಪಾಲು ಮಾಡಿದ್ದಾರೆ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿದ್ದರು. ಈ ವೇಳೆ ಸ್ಥಳಕ್ಕೆ ಭೇಟಿ ನೀಡಿ ಎಲ್ಲರ ಎದುರೇ ಅಧಿಕಾರಿಯನ್ನ ತರಾಟೆಗೆ ತೆಗೆದುಕೊಂಡಿದ್ದ ಶಾಸಕ. ಅವಾಚ್ಯ ಶಬ್ಧಗಳಿಂದಲೂ ಸರ್ಕಾರಿ ಅಧಿಕಾರಿಯನ್ನ ನಿಂದಿಸಿದ್ದರು. ಈ ವಿಡಿಯೋ ವೈರಲ್ ಆಗಿತ್ತು.

### ಹಸ್ತಾಂತರಿಸಿದ ನೌಕಾಪಡೆ

ಈ ಹಡಗನ್ನು 2023 ಡಿಸೆಂಬರ್ ನಲ್ಲಿ ಅಪಹರಣ ಮಾಡಲಾಗಿತ್ತು. ಭಾರತೀಯ ನೌಕಾಪಡೆಯು ಸಮುದ್ರ ಭದ್ರತಾ ಕಾರ್ಯಾಚರಣೆಗಳ ಭಾಗವಾಗಿ ಈ ಸಮುದ್ರದಲ್ಲಿ ಭಾರೀ ಕಾರ್ಯಾಚರಣೆಯನ್ನು ನಡೆಸಿ, ಒಗಿ ರುಯೆನ್ ಹಡಗುನ್ನು ರಕ್ಷಣೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಸೊಮಾಲಿಯಾದಿಂದ ಪೂರ್ವಕ್ಕೆ 260 ನಾಟಿಕಲ್ ಮೈಲಿ (ಎನ್‌ಎಂ) ದೂರದಲ್ಲಿ ಹಡಗನ್ನು ತಡೆಹಿಡಿಯಲು ಐಎನ್ ಎಸ್ ಕೋಲ್ಕತ್ತಾಗೆ ನಿರ್ದೇಶನ ನೀಡಿತ್ತು. ಈ ಮೂಲಕ 35 ಕಡಲ್ಗಳ್ಳರನ್ನು ಪತ್ತೆ ಮಾಡಲಾಗಿತ್ತು.

ಮಾರ್ಚ್ 15 ರಂದು ಐಎನ್‌ಎಸ್ ಕೋಲ್ಕತ್ತಾದಲ್ಲಿ ಎಂವಿ ರುಯೆನ್ ಹಡಗನ್ನು ಪತ್ತೆ ಮಾಡಿ, ಅದರಲ್ಲಿದ್ದ ಜನರನ್ನು ರಕ್ಷಣೆ ಮಾಡಿದೆ. ಇದರ ಜತೆಗೆ ಈ ಹಡಗಿನ ಪತ್ತೆಗಾಗಿ ಬಳಸಿದ್ದ ಭಾರತೀಯ ಡ್ರೋನ್ ನ್ನು ಕಡಲ್ಗಳ್ಳರು ಹೊಡೆದುರುಳಿಸಿದರು. ಇನ್ನು ಈ ರಕ್ಷಣಾ ಕಾರ್ಯಾಚರಣೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಎಂದು ಹೇಳಲಾಗಿದೆ. ಇದೀಗ ಬಂಧನವಾಗಿರುವ 35 ಕಡಲ್ಗಳ್ಳರನ್ನು ಮುಂಬೈಗೆ ತರಲಾಗಿದೆ.

ಪ್ರಧಾನಿ ನರೇಂದ್ರ ಮೋದಿಗೆ ಕೃತಜ್ಞತೆ ತಿಳಿಸಿದ ಬಲ್ಗೇರಿಯ ಅಧ್ಯಕ್ಷ ರುಮೆನ್ ರಾದೇವ್

ಅಪಹರಣಕ್ಕೊಳಗಾದ ಬಲ್ಗೇರಿಯನ್ ಹಡಗು ಮತ್ತು ಅದರಲ್ಲಿದ್ದ ನಾಗಕರಿಕರ ಸಹಿತ ಸಿಬ್ಬಂದಿಯನ್ನು ಭಾರತೀಯ ನೌಕಾಪಡೆ ರಕ್ಷಣೆ ಮಾಡಿದೆ. ಈ ಬಗ್ಗೆ ಬಲ್ಗೇರಿಯ ದೇಶದ ಅಧ್ಯಕ್ಷ ರುಮೆನ್ ರಾದೇವ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ ಬಲ್ಗೇರಿಯದ ಅಧ್ಯಕ್ಷ ರುಮೆನ್ ರಾದೇವ್, 7 ಬಲ್ಗೇರಿಯನ್ ನಾಗರಿಕರು ಸೇರಿದಂತೆ ಅಪಹರಣಕ್ಕೊಳಗಾದ ಬಲ್ಗೇರಿಯನ್ ಹಡಗು ''ರುಯೆನ್'' ಮತ್ತು ಅದರ ಸಿಬ್ಬಂದಿಯನ್ನು ರಕ್ಷಿಸಿದ ಭಾರತದ ನೌಕಾಪಡೆಯ ಕೆಚ್ಚೆದೆಯ ಕ್ರಮಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ನನ್ನ ಪ್ರಾಮಾಣಿಕ ಕೃತಜ್ಞತೆಗಳು ಎಂದು ಬರೆದುಕೊಂಡಿದ್ದಾರೆ.

ಅಪಹರಣಕ್ಕೊಳಗಾದ ಬಲ್ಗೇರಿಯನ್ ಹಡಗು ರುಯೆನ್ ಮತ್ತು 7 ಬಲ್ಗೇರಿಯನ್ ನಾಗರಿಕರು ಸೇರಿದಂತೆ ಅದರ ಸಿಬ್ಬಂದಿಯನ್ನು ರಕ್ಷಿಸುವಲ್ಲಿ ಪ್ರಮುಖ ಕ್ರಮ ತೆಗೆದುಕೊಂಡು ಭಾರತೀಯ ನೌಕಾಪಡೆ ಹಾಗೂ ಪ್ರಧಾನಿ ಮೋದಿ ಅವರಿಗೆ ನನ್ನ ಹೃತ್ಪೂರ್ವಕ ಕೃತಜ್ಞತೆ ತಿಳಿಸಿದ ಬಲ್ಗೇರಿಯ ಅಧ್ಯಕ್ಷ ರುಮೆನ್ ರಾದೇವ್ ಅವರನ್ನು ಹೇಳಿಕೆ ಪ್ರಧಾನಿ ಮೋದಿ ಪ್ರತಿಕ್ರಿಯಿಸಿದ್ದರು ನೌಕಾಯಾನದ ಸ್ವಾತಂತ್ರ್ಯವನ್ನು ರಕ್ಷಿಸಲು ಮತ್ತು ಹಿಂದೂ ಮಹಾಸಾಗರ ಪ್ರದೇಶದಲ್ಲಿ ಕಡಲ್ಗಳ್ಳತನ ಮತ್ತು ಭಯೋತ್ಪಾದನೆಯನ್ನು ಎದುರಿಸಲು ಭಾರತದ ಬದ್ಧತೆವಾಗಿದೆ ಎಂದು ಹೇಳಿದರು.

### ಛೇ! ಇದೆಂಥಾ ಹೇಳಿಕೆ

ಬಿಜೆಪಿ ಅಭ್ಯರ್ಥಿ ಕೋಟಗೆ ಹಿಂದಿ, ಇಂಗ್ಲಿಷ್ ಬರೋಲ್ಲ, ಹಾಗಾಗಿ ಅವರನ್ನು ಗೆಲ್ಲಿಸಬೇಡಿ ಎಂಬ ಬಾಲಿಶ ಹೇಳಿಕೆ ನೀಡಿದ್ದಾರೆ. ಒಂದು ನಿಮಿಷ ತಾಳಿ ಈ ಹಿಂದೆ ಇದೇ ಕ್ಷೇತ್ರದಲ್ಲಿ ಸಂಸದರಾಗಿದ್ದ ಶೋಭಾ ಕರಂದ್ಲಾಜೆ ಅವರು ಕೇಂದ್ರದಲ್ಲಿ ಮಂತ್ರಿಯೂ ಆಗಿ ಏಕೀ ಮಿನಿಟ್ ಎನ್ನುತ್ತಾ ಹಿಂದಿ ಕಲಿತು ಸೈ ಅನ್ನಿಸಿಕೊಂಡಿದ್ದು ಜೆಪಿ ಹೆಗ್ಡೆ ಮರೆತರಾ ಎಂಬ ಪ್ರಶ್ನೆ ಕಾಡತೊಡಗಿದೆ.

ಸಂಸದರಾದವರು ದೆಹಲಿಯಲ್ಲಿ ಕೇಂದ್ರ ಸರ್ಕಾರದ ಅಧಿಕಾರಿಗಳ ಜೊತೆ ವೈಯಕ್ತಿಕವಾಗಿ ಮಾತನಾಡಬೇಕಾಗುತ್ತದೆ. ಹಿಂದಿ ಅಥವಾ ಇಂಗ್ಲಿಷ್ ಬರದೇ ಲೋಕಸಭೆಯಲ್ಲಿ ವ್ಯವಹಾರ ಕಷ್ಟ ಸಾಧ್ಯ. ಕಚೇರಿ ವ್ಯವಹಾರಗಳಲ್ಲಿ ಸಮಸ್ಯೆಯಾಗುತ್ತದೆ. ಭಾಷಾಂತರಕಾರರಿಗೆ ಅವಕಾಶ ಇರಲ್ಲ ಎಂದು ಕಾಂಗ್ರೆಸ್ ಅಭ್ಯರ್ಥಿ ಜಯಪ್ರಕಾಶ್ ಹೆಗ್ಡೆ ಹೇಳಿದ್ದಾರೆ. ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಅವರಿಗೆ ಕನ್ನಡ ಬಿಟ್ಟರೇ ಹಿಂದಿ ಅಥವಾ ಇಂಗ್ಲೀಷ್ ಬರುವುದಿಲ್ಲ. ಈ ಹಿನ್ನೆಲೆ ಯಲ್ಲಿ ಹೆಗ್ಡೆ ಅವರು ಬ್ರಹ್ಮಾವರದ ಚುನಾವಣಾ ಸಭೆಯಲ್ಲಿ ಮಾತನಾಡಿ, ಕೋಟ ಅವರಿಗೆ ಹಿಂದಿ ಅಥವಾ ಇಂಗ್ಲಿಷ್ ಬರುವುದಿಲ್ಲ, ಅವರನ್ನು ಆಯ್ಕೆ ಮಾಡಿದರೆ ದೆಹಲಿಯಲ್ಲಿ ಕೆಲಸಗಳಾಗುವುದಿಲ್ಲ ಎಂದು ಹೇಳಿರುವ ವೀಡಿಯೋ ವೈರಲ್ ಆಗಿದೆ. ಲೋಕಸಭೆಯಲ್ಲಿ ಈ ಹಿಂದೆ ನಾನು ಕನ್ನಡದಲ್ಲಿ ಭಾಷಣ ಮಾಡುತ್ತೇನೆ ಎಂದು ಹೇಳಿದೆ, ಆಗ ಯಾರು ನಿಮ್ಮ ಕನ್ನಡ ಭಾಷಣವನ್ನು ಕೇಳುವುದಿಲ್ಲ, ಹಿಂದಿ ಅಥವಾ ಇಂಗ್ಲಿಷಿನಲ್ಲಿ ಮಾತನಾಡಿದರೆ ಸಂಸದರು ಕೇಳುತ್ತಾರೆ ಎಂದು ಹೇಳಿದ್ದರು ಎಂದು ಹೆಗ್ಡೆ ತಮಗಾಗಿದ್ದ ಅನುಭವವನ್ನು ಸ್ಮರಿಸಿದ್ದಾರೆ.

ಪೂಜಾರಿಗೆ ಹಿಂದಿ-ಇಂಗ್ಲೀಷ್ ಬರೋಲ್ಲ. ಅವರಿಗೆ ಮತ ಹಾಕಬೇಡಿ ಎಂದು ಉಡುಪಿಯ ಪ್ರಜ್ಞಾವಂತ ಮತದಾರರಲ್ಲಿ ಜೆಪಿ ಹೆಗ್ಡೆ ಮನವಿ ಮಾಡಿಕೊಂಡಿರುವುದಕ್ಕೆ ಕೋಟ ಶ್ರೀನಿವಾಸ ಪೂಜಾರಿ ತಿರುಗೇಟು ನೀಡಿದ್ದಾರೆ. ತಾವು ಸಂಸದರಾಗುತ್ತಿದ್ದಂತೆ ಆರೇ ತಿಂಗಳಲ್ಲಿ ಹಿಂದಿ ಕಲಿತು ತೋರಿಸುತ್ತೇನೆ ಎಂದಿದ್ದಾರೆ.

ಭಾಷೆ ನಮ್ಮ ಬದುಕಿನ ಭಾಗ ಅಷ್ಟೇ, ನನ್ನ ಮಾತೃಭಾಷೆ ಕನ್ನಡ ನನಗೆ ಚೆನ್ನಾಗಿ ಬರುತ್ತದೆ. ನನಗೆ ಭಾಷೆ ತೊಡಕಾಗುತ್ತದೆ ಎಂ ಆತಂಕ ಮತದಾರರಿಗೆ ಬೇಡ, ಸಂಸದನಾಗಿ ಆರೇ ತಿಂಗಳಲ್ಲಿ ಹಿಂದಿಯಲ್ಲಿ ಭಾಷಣ ಮಾಡಿ, ನನ್ನ ಬಗ್ಗೆ ಆತಂಕ ಹೊಂದಿರುವ ಜಯಪ್ರಕಾಶ್ ಹೆಗ್ಡೆಯವರನ್ನೂ ಖುಷಿ ಪಡಿಸುತ್ತೇನೆ ಎಂದು ಕೂಲಾಗಿ ಹೇಳಿದ್ದಾರೆ. ಮತ್ತೊಮ್ಮೆ ಕ್ಷೇತ್ರದ ಹಿಂದಿನ ಸಂಸದೆಯ ಏಕೀ ಮಿನಿಟ್ ನಲ್ಲಿ ಹಿಂದಿ ಕಲಿತ ಸಾಹಸವನ್ನು ಸ್ಮರಿಸುವುದಾದರೆ ಕೋಟ ಅವರಿಗೆ ಹಿಂದಿ ಕಗ್ಗಂಟೇನೂ ಆಗದು ಅನಿಸುತ್ತದೆ. ಅದಕ್ಕೂ ಮೊದಲು ಈ ಬಾರಿ ಇಲ್ಲಿ ಗೆಲುವು ಯಾರಿಗೆ ಎಂಬುದನ್ನು ಮತದಾರರ ಪ್ರಭುಗಳು ನಿರ್ಧರಿಸಬೇಕಿದೆ.

## ಮತ್ತೆ ಧರ್ಮ ದಂಗಲ್

ಈ ಮನೆತನದವರು ಹೂವು ಹಣ್ಣುಗಳನ್ನು ಅರ್ಪಿಸುತ್ತಾರೆ. ಆ 5 ಲಿಂಗಗಳು ಯಾವುವೆಂದರೆ ಮೂಲ ದುರ್ಗ, ಅಗ್ನಿ ದುರ್ಗ, ಜಲದುರ್ಗ, ವನದುರ್ಗ, ಆಗ್ರಾದುರ್ಗ ಇವೆಲ್ಲವುಗಳು ಒಂದೇ ಪಾಣಿಪೀಠದಲ್ಲಿ ಸ್ಥಾಪಿಸಿದ್ದಾರೆ. ಮುಖ್ಯವಾದ ಹಬ್ಬಗಳು ಯಾವುವೆಂದರೆ ಕಾರ್ತಿಕ ಪೂಜಾ ದೀಪೋತ್ಸವ, ಶರನ ನವರಾತ್ರಿ ಯುಗಾದಿ ಮತ್ತು ಶುಕ್ರವಾರ ವಿಶೇಷ ಪೂಜೆಗಳು ಜಾತ್ರೆಯು ಮಾರ್ಚ್-ಏಪ್ರಿಲ್‌ಗಳಲ್ಲಿ 9 ದಿನಗಳ ಕಾಲ ನಡೆಯುತ್ತದೆ.

ಇಲ್ಲಿ ನಡೆಯುವ ಜಾತ್ರೆಗೆ ಮತ, ಧರ್ಮವೀರಿ ಎಲ್ಲರೂ ಭಾಗವಹಿಸುತ್ತಾರೆ. ಆದರೆ ಕಳೆದ 2-3 ವರ್ಷಗಳಿಂದ ಇಲ್ಲಿ ಧರ್ಮ ದಂಗಲ್ ನಡೆಯುತ್ತಿದೆ.

### ಲಿಂಕ್

ಸ್ಫೋಟಕ್ಕೂ ಮುನ್ನ ಶಂಕಿತ 2 ತಿಂಗಳು ತಮಿಳುನಾಡಿನಲ್ಲಿ ಉಳಿದಿದ್ದ. ಈ ವೇಳೆ ಶಂಕಿತನ ಜೊತೆಗೆ ಮತ್ತೋರ್ವ ವ್ಯಕ್ತಿ ಕೂಡ ಇದ್ದ. ಹೀಗೆ ಸ್ಫೋಟಕ್ಕೂ ಮುನ್ನ ಓಡಾಡಿದ್ದ ಶಂಕಿತನ ಜಾಡನ್ನು ಎನ್‌ಐಎ ಕಲೆ ಹಾಕಿದೆ. ಈ ವೇಳೆ ಶಂಕಿತ ತಮಿಳುನಾಡಿನಿಂದ ಬಂದಿರುವುದು ಪತ್ತೆಯಾಗಿದೆ.

ಟೋಪಿ ಮೂಲ ಪತ್ತೆ: ಶಂಕಿತ ಧರಿಸಿದ್ದ ಟೋಪಿಯ ಮೂಲವನ್ನು ಕೂಡ ಎನ್‌ಐಎ ಪತ್ತೆ ಹಚ್ಚಿದೆ. ಶಂಕಿತ ಧರಿಸಿದ್ದ ಟೋಪಿಯನ್ನು ತಮಿಳುನಾಡಿನ ಮಾಲ್ ಒಂದರಲ್ಲಿ ಖರೀದಿಸಿದ್ದಾನೆ. ಖರೀದಿ ವೇಳೆ ಮುಖ ಚಹರೆ ಸಮೇತ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಮತ್ತೊಂದೆಡೆ ಈಗಾಗಲೇ ಪತ್ತೆಯಾದ ಕ್ಯಾಪ್‌ನಲ್ಲಿ ಶಂಕಿತನ ಕೂದಲು ಕೂಡ ಸಿಕ್ಕಿದೆ. ಕೂದಲು ಆಧರಿಸಿ ಡಿಎನ್‌ಎ ಟೆಸ್ಟ್ ಸಹ ಒಳಪಡಿಸಿದೆ. ಒಟ್ಟಿನಲ್ಲಿ ಎನ್‌ಐಎ ತನಿಖೆ ವೇಳೆ ಇಬ್ಬರು ಶಿವಮೊಗ್ಗದವರೆಂಬ ಮಾಹಿತಿ ಸಿಕ್ಕಿದೆ.

ಬಾಂಬರ್ 'ಉಗ್ರ' ಹೆಜ್ಜೆ: ಈ ಉಗ್ರ, 2019ರಿಂದ ಬೇಕಾಗಿದ್ದಾನೆ. 2023ರ ಮಾರ್ಚ್-ಜುಲೈ ಮಹಾರಾಷ್ಟ್ರದಲ್ಲಿದ್ದ, ಜುಲೈ-ಡಿಸೆಂಬರ್ ವರೆಗೆ ಕರ್ನಾಟಕದಲ್ಲಿದ್ದ, 2024ರ ಜನವರಿಯಲ್ಲಿ ಕೇರಳದಲ್ಲಿದ್ದ, ಫೆಬ್ರವರಿಯಲ್ಲಿ ತಮಿಳುನಾಡಿನಲ್ಲಿದ್ದ, ಮಾರ್ಚ್ ನಲ್ಲಿ ಕರ್ನಾಟಕಕ್ಕೆ ಮತ್ತೊಮ್ಮೆ ಬಂದಿದ್ದ ಎಂಬ ಮಾಹಿತಿ ಸಿಕ್ಕಿದೆ.

### ಹಾವಳಿ

ಬ್ರಾಂಡೆಡ್ ಪದಾರ್ಥಗಳಿಗೆ ಅಗ್ಗದ ನಕಲಿ ರಾಸಾಯನಿಕಗಳನ್ನು ಕಲಬೆರಕೆ ಮಾಡಿ ಸುಲಭವಾಗಿ ಹಣ ಮಾಡುವ ದೊಡ್ಡ ಜಾಲವೊಂದು ಪೊಲೀಸ್ ಬಲೆಗೆ ಸಿಕ್ಕಿ ಬಿದ್ದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಮಲ್ಲರಬಾಣವಾಡಿ ಗ್ರಾಮದಲ್ಲಿರುವ ಅಕ್ರಮವಾದ ಗೋಡಾನ್ ನಲ್ಲಿ ಈ ಅಡ್ಡೆ ನಡೆಯುತ್ತಿತ್ತು. ಪೊಲೀಸ್ ಹಾಗೂ ಐಪಿ ಇನ್ವೆಸ್ಟಿಗೇಷನ್ ಡಿಟೆಕ್ಟಿವ್ ಸರ್ವಿಸ್ ಜಂಟಿ ಕಾರ್ಯಾಚರಣೆ ನಡೆಸಿದಾಗ ಅಕ್ರಮ ಜಾಲ ಕಂಡು ಶಾಕ್ ಆಗಿದೆ.

ಬ್ರಾಂಡೆಡ್ ಡಿಟರ್ಜೆಂಟ್ ವಸ್ತುಗಳನ್ನ ನಕಲು ಮಾಡುತ್ತಿದ್ದ ಗೋಡಾನ್ ಮೇಲೆ ದಾಳಿ ನಡೆಸಿ ಮಹೇಶ್ ಗಾಂಧಿ, ಅಶ್ವಿನ್, ನಿರ್ಮಲ್ ಎಂಬ ಮೊವರನ್ನ ದಾಳಿಯ ಸಂದರ್ಭದಲ್ಲಿ ಪೊಲೀಸರು ಬಂಧಿಸಿದ್ದಾರೆ. ಹೊಸಕೋಟೆ ಬಳಿಯ ಅವಲಹಳ್ಳಿಯ ತಯಾರಕ ಘಟಕದಿಂದ ಲೋಡ್‌ಗಟ್ಟಲೇ ನಕಲಿ ಡಿಟರ್ಜೆಂಟ್ ಕೆಮಿಕಲ್ ಖರೀದಿ ಮಾಡಿ ಬ್ರಾಂಡೆಡ್ ಬಾಕ್ಸ್‌ನಲ್ಲಿ ಪ್ಯಾಕ್ ಮಾಡುತ್ತಿದ್ದರು.

ಮುಂದೆ, ನಕಲಿಯಾಗಿ ಪ್ರಿಂಟ್ ಮಾಡಿದ ಬ್ರಾಂಡೆಡ್ ಲೇಬಲ್ ಬಳಸಿ ಡಿಟರ್ಜೆಂಟ್ ಬಾಟಲ್ ಗಳಲ್ಲಿ ತುಂಬಿ ನಕಲಿ ಬ್ರಾಂಡ್‌ಗಳನ್ನು ಅಸಲಿ ಬ್ರಾಂಡ್ ಆಗಿ ಕನ್ವರ್ಟ್ ಮಾಡಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಹಲವಾರು ಭಾಗಗಳಲ್ಲಿ ಮಾರಾಟ ಮಾಡಿ ಕೋಟ್ಯಾಂತರ ಹಣ ಗಳಿಸುತ್ತಿದ್ದ ಬಗ್ಗೆ ಪೊಲೀಸರು ಮಾಹಿತಿ ಕಲೆಹಾಕಿದ್ದಾರೆ.

ಇನ್ನು ದಾಳಿಯ ವೇಳೆ ಹದಿನೈದು, ಇಪ್ಪತ್ತು ಲಕ್ಷ ರೂಪಾಯಿ ಬೆಲೆಬಾಳುವ ಡಿಟರ್ಜೆಂಟ್ ಗಳ ನೂರಾರು ಬಾಕ್ಸ್, ಲೇಬಲ್, ಖಾಲಿ ಬಾಟಲ್, ಗುಡ್ ನೈಟ್ ಗಳನ್ನ ಸೀಜ್ ಮಾಡಿಕೊಳ್ಳಲಾಗಿದೆ. ಮಿಕ್ಸಿಂಗ್ ಮಷಿನ್‌ಗಳನ್ನು ಗೋಡಾನ್ ನಲ್ಲೇ ಸೀಜ್ ಮಾಡಲಾಗಿದೆ. ಈ ಕೃತ್ಯಕ್ಕೆ ಸಂಬಂಧಿಸಿದಂತೆ ನೆಲಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾರಿನಲ್ಲಿ ಲವರ್ ಭಸ್ಮ: ಅಣ್ಣಂದಿರಿಂದ ಪ್ರಿಯಕರನ ಅಮಾನುಷ ಹತ್ಯೆ

# ಎರಡು ಜಿಲ್ಲೆಗಳ ಒಂದು ಲವ್ ಸ್ಟೋರಿ

**ಶಿವಮೊಗ್ಗ:** ಮಲೆನಾಡಿನ ಜನರು ಮಾರ್ಚ್ 16 ಶನಿವಾರ ಬೆಳಗ್ಗೆ ಇನ್ನೋವಾ ಕಾರ್ ಸಮೇತ ಓರ್ವ ಯುವಕನನ್ನು ಸುಟ್ಟು ಹಾಕಿದ್ದರು. ಬೆಳಗ್ಗೆ ಎದ್ದು ನೋಡಿದ್ರೆ, ಶಿಕಾರಿಪುರ ತಾಲೂಕಿನ ತೋಗರ್ಸಿ ಗ್ರಾಮದ ರಾಜ್ಯ ಹೆದ್ದಾರಿಯಲ್ಲಿ ಕಾರ್ ಸಂಪೂರ್ಣವಾಗಿ ಸುಟ್ಟು ಕರಕಲವಾದ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಇದನ್ನು ನೋಡಿದ ಜನರಿಗೆ ಗಾಬರಿಯಾಗಿತ್ತು. ಶಿರಾಳಕೊಪ್ಪದ ಪೊಲೀಸರು ಸ್ಥಳಕ್ಕೆ ಹೋಗಿ ಗಮನಿಸುತ್ತಾರೆ. ಇನ್ನೋವಾ ಕಾರ್ ಮಾತ್ರವಲ್ಲ. ಒಳಗೆ ಒಂದು ಮೃತದೇಹ ಕೂಡಾ ಪತ್ತೆಯಾಗಿತ್ತು!



ಪೊಲೀಸರು ಕಾರ್ ಮತ್ತು ಮೃತದೇಹ ಯಾರದ್ದು ಎನ್ನುವ ಪತ್ತೆಗೆ ಮುಂದಾಗುತ್ತಾರೆ. ಕಾರ್‌ನ ಒಂದಿಷ್ಟು ಮಾಹಿತಿ ಪಡೆಯುತ್ತಾರೆ. ಇನ್ನೋವಾ ಕಾರ್ ಶಿವಮೊಗ್ಗದ ಗಾಡಿಕೊಪ್ಪದ ನಿವಾಸಿ ಸುನೀಲ್ ಎನ್ನುವುದು ಗೊತ್ತಾಗುತ್ತದೆ. ಸುನೀಲ ಮೂಲಕ ಕಾರ್ ನಲ್ಲಿರುವ ವ್ಯಕ್ತಿ ಯಾರು ಎನ್ನುವುದು ಪೊಲೀಸರಿಗೆ ಪತ್ತೆಯಾಗುತ್ತದೆ.

ಕಾರ್ ನಲ್ಲಿ ಸುಟ್ಟು ಭಸ್ಮ ಆಗಿರುವುದು 27 ವರ್ಷದ ವಿರೇಶ್ ಎಂಬ ಯುವಕ. ಈತ ಗಾಡಿಕೊಪ್ಪದ ನಿವಾಸಿ. ವಿರೇಶ ಶಿವಮೊಗ್ಗ ತಾಲೂಕಿನ ಚೋರಡಿಯಲ್ಲಿರುವ ನಮ್ಮ ಅಡಿಕೆ ತೋಟದಲ್ಲಿ ವ್ಯವಸಾಯ ಜೊತೆಗೆ ಡ್ರೈವಿಂಗ್ ಕೆಲಸ ಮಾಡಿಕೊಂಡಿದ್ದನು. ಎರಡು ವರ್ಷದ ಹಿಂದೆ ವಿರೇಶ್ ಅಕ್ಕ ಕಾವ್ಯ ಕ್ಯಾನ್ಸರ್ ನಿಂದ ಮೃತಪಟ್ಟಿದ್ದಳು. ವಿರೇಶ್ ಒಬ್ಬನೇ ಮಗನು.

ಇದ್ದ ಇಬ್ಬರು ಮಕ್ಕಳು ಈಗ ಸಾವಿನ ಮನೆ ಸೇರಿದ್ದಾರೆ. ವಿರೇಶ್ ತಂದೆ ಮಹಾದೇವಪ್ಪ 15 ವರ್ಷಗಳ ಹಿಂದೆ ತುಂಗಾ ಚಾನಲ್ ನಲ್ಲಿ ಮಣ್ಣು ಕುಸಿದು ಬಿದ್ದು ಅದರಲ್ಲಿ ಸಿಲುಕಿ ಮೃತಪಟ್ಟಿದ್ದರು. ಕುಟುಂಬದ ವಾರಸುದಾರನಾಗಿ ಇದ್ದ ಒಬ್ಬ ಮಗನೂ ಈಗ ಅಮಾನುಷವಾಗಿ ಕೊಲೆಯಾಗಿದ್ದಾನೆ. ಇದರಿಂದ ಏಕಾಂಗಿ ತಾಯಿಗೆ ಈಗ ದೊಡ್ಡ ಆಘಾತವಾಗಿದೆ. ಆ ತಾಯಿಯ ನೋವು ಯಾರಿಗೂ ಅರ್ಥವಾಗದು. ಗಂಡ-ಮಗಳು-ಈಗ ಮಗ ಮೃತಪಟ್ಟಿರುವ ದೊಡ್ಡ ಆಘಾತದಲ್ಲಿ ಆ ತಾಯಿ ಮಹಾದೇವಿ ಬೇಯುತ್ತಿದ್ದಾಳೆ.

ವಿರೇಶ ನಮ್ಮ ದೂರದ ಸಂಬಂಧಿ. ಇನ್ನು ಈ ಕತೆಯ ಕಥಾನಾಯಕಿ ಅಂಕಿತಾ 21 ವರ್ಷದ ಫಾರ್ಮಸಿ ವಿದ್ಯಾರ್ಥಿನಿ. ವಿರೇಶನ ಮಾವನ ಮಗಳು. ಆಕೆಯ ವಾಸ ಅಕ್ಕಿಆಲೂರು ಗ್ರಾಮ, ಹಾನಗಲ್ ತಾಲೂಕು, ಹಾವೇರಿ ಜಿಲ್ಲೆ. ಇವಳು ಶಿವಮೊಗ್ಗದ ಯಾವುದೋ ಪಿ.ಜಿ.ಯಲ್ಲಿ ಇದ್ದುಕೊಂಡು ವಿದ್ಯಾಭ್ಯಾಸ ಮಾಡುತ್ತಿದ್ದಳು. ಇವಳು ವಿರೇಶನಿಗೆ ಪರಿಚಯವಿದ್ದಳು. ಈಗ್ಗೆ ಸುಮಾರು 2 ವರ್ಷಗಳಿಂದ ವಿರೇಶ ಮತ್ತು ಅಂಕಿತಾ ಒಬ್ಬರಿಗೊಬ್ಬರು ಪ್ರೀತಿಸುತ್ತಿದ್ದರು. ಈ ವಿಚಾರವನ್ನು ವಿರೇಶ್ ಯಾರಿಗೂ ಹೇಳಿರಲಿಲ್ಲ. ಸುಮಾರು 8 ದಿನಗಳ ಹಿಂದೆ ವಿರೇಶ ತಾನು ಮತ್ತು ಅಂಕಿತಾ ಒಬ್ಬರಿಗೊಬ್ಬರು ಪ್ರೀತಿಸುತ್ತಿರುವ ವಿಷಯವನ್ನು ತಾಯಿಗೆ ಹೇಳಿದ್ದನು. ಸಂಬಂಧಿಕರಲ್ಲಿ ಮದುವೆ ಬೇಡ ಅಂತಾ ಮಗನಿಗೆ ತಾಯಿ ಬುದ್ಧಿ ಹೇಳಿದ್ದರು.

ಈ ಪ್ರೀತಿಯ ವಿಷಯವನ್ನು ವಿರೇಶ್ ಕುಟುಂಬಸ್ಥರು ಯುವತಿಯ ಸಂಬಂಧಿ ಅಂಬಾರಗೊಪ್ಪದ ಬಸವಣ್ಯಪ್ಪಗೆ ಫೋನ್ ಮಾಡಿ ತಿಳಿಸಿದ್ದರು. ಈ ವಿಚಾರವಾಗಿ ಮಾತಾಡಲು ಬಂದರೆ ನಿಮ್ಮನ್ನು ಬಿಡುವುದಿಲ್ಲ, ಸುಮ್ಮನೆ ನಿಮ್ಮದೆಷ್ಟು ಕೆಲ್ಸ ಇದೆಯೋ ಅಷ್ಟು ಮಾಡಿಕೊಳ್ಳಿ, ನಿಮ್ಮ ಹುಡುಗನಿಗೆ ಪ್ರೀತಿಸೋಕೆ ನನ್ನ ಮೊಮ್ಮಗಳೇ ಬೇಕಾ ನಾನು ಬಂದರೆ ನಿಮ್ಮ ಗ್ರಹಚಾರನೇ ಬಿಡಿಸಿ ಬಿಡ್ತೀನಿ, ನಿಮ್ಮ ಅಣ್ಣನ ಮಗ ವಿರೇಶನಿಗೂ ತಿಳಿಸು. ಅವನೇನಾದರೂ ಈ ರೀತಿ ಪ್ರೀತಿ-ಗೀತಿ ಅಂತಾ ಬಂದರೆ ಅವನನ್ನು ಬಿಡೋಲ್ಲಾ ನಾನು, ಹುಷಾರಾಗಿರಿ ಎಂದು ಬಸವಣ್ಯಪ್ಪ ಬೆದರಿಕೆ ಹಾಕಿದ್ದನಂತೆ. ಇದನ್ನು ಕೇಳಿಸಿಕೊಂಡ ವಿರೇಶ್ ಕುಟುಂಬಸ್ಥರು ಸೈಲೆಂಟ್ ಆಗಿದ್ದರು.

ಅಂಕಿತಾಳ ಸಂಬಂಧಿಕರಾದ ಹಾವೇರಿ ಜಿಲ್ಲೆ ಹಾನಗಲ್ ತಾಲೂಕು ಅಕ್ಕಿಆಲೂರು ಗ್ರಾಮದ ವಾಸಿಗಳಾದ 1) ಅಂಕಿತಾ ದೊಡ್ಡಪ್ಪನ ಮಗ ಪ್ರವೀಣ್ 2) ಪ್ರಶಾಂತ್ 3) ಪ್ರಭು ಈ ಮೂವರು ಶಿವಮೊಗ್ಗದ ವಿರೇಶ್ ಮನೆಗೆ ಬಿಳಿ ಬಣ್ಣದ ಟಾಟಾ ನೆಕ್ಸಾನ್ ಕಾರಿನಲ್ಲಿ ಬಂದಿದ್ದರು.

ಅಂಕಿತಾಳ ದೊಡ್ಡಪ್ಪನ ಮಗ (ಅಣ್ಣ) ಪ್ರವೀಣನು ವಿರೇಶ್‌ನಿಗೆ ತಿಳಿಯ ಹೇಳಿ ಅಂಕಿತಾಳ ಫೋಟೋಗಳನ್ನು ಡಿಲಿಟ್ ಮಾಡಿಸಿದ್ದನು. ಅಣ್ಣ ಪ್ರವೀಣನು ಇನ್ನು ಮುಂದೆ ಅಂಕಿತಾಳಿಗೆ ಪದೇ ಪದೇ ಫೋನ್ ಮಾಡಬೇಡ ಎಂದೂ ಬುದ್ಧಿವಾದ ಹೇಳಿದ್ದಾರೆ. ಅಂಕಿತಾಳ ಅಣ್ಣ ಮತ್ತು ಆತನ ಸ್ನೇಹಿತರು ಶಿವಮೊಗ್ಗದ ವಿರೇಶ್ ಮನೆಯಿಂದ ಮಧ್ಯಾಹ್ನ ಊರಿಗೆ ಹೋಗುತ್ತೇವೆಂದು ಹೇಳಿ ಹೊರಡುತ್ತಾರೆ. ಅದಾದ ನಂತರ ಸಂಜೆ ಸಮಾರು 05:30 ಗಂಟೆಯ ಸಮಯದಲ್ಲಿ ಅಂಕಿತಾಳ ಅಣ್ಣ ಪ್ರವೀಣನು ವಿರೇಶನಿಗೆ ಕಾಲ್ ಮಾಡಿದ್ದಾನೆ.

ವಿರೇಶನಿಗೆ ಆ ದಿನ ರಾತ್ರಿ ಸುಮಾರು 10:30 ಕ್ಕೆ ನಾನು ಅಂಕಿತಾಳನ್ನು ಹಾನಗಲ್ ನಾಗರ ಕ್ರಾಸ್ ವರೆಗೂ ಕರೆದುಕೊಂಡು ಬರುತ್ತೇನೆ. ನೀನು ಸಹ ಅಲ್ಲಿಗೆ ಹೇಗಾದರೂ ಮಾಡಿ ಬಾ, ಅಲ್ಲಿಂದ ಅಂಕಿತಾಳನ್ನು ಕರೆದುಕೊಂಡು ಹೋಗು, ಬೇಕಾದ್ರೆ ನಾನೇ ಸಿರಸಿಯಲ್ಲಿ ರೂಂ ಮಾಡಿಕೊಡುತ್ತೇನೆಂದು ಹೇಳುತ್ತಾನೆ. ಅದಕ್ಕೆ ವಿರೇಶ್ ಆಯ್ತು ಎಂದು ಒಪ್ಪಿಗೆ ಸೂಚಿಸುತ್ತಾನೆ. ಬಳಿಕ, ವಿರೇಶ ಶಿವಮೊಗ್ಗದ ಮಾರಿಕಾಂಬ ಜಾತ್ರೆಗೆ ಹೋಗಿ ಬಂದಿದ್ದಾನೆ. ವಿರೇಶ್ ರಾತ್ರಿ 09:30 ಕ್ಕೆ ಮನೆಗೆ ಬಂದ್ದಿದ್ದು, ಈ ಮಧ್ಯೆ ಪ್ರವೀಣ ಪದೇ ಪದೇ ಕಾಲ್ ಮಾಡಿದ್ದಾನೆ.

ಪ್ರವೀಣನಿಂದ ಪದೇ ಪದೇ ಬರುವ ಕಾಲ್ ನಿಂದ ವಿರೇಶ್ ಗಲಿಬಿಲಿಗೊಂಡಿದ್ದನು. ಇದಾದಮೇಲೂ ವಿರೇಶನ ತಾಯಿಗೆ ಪ್ರವೀಣ ಕಾಲ್ ಮಾಡಿದ್ದಾನೆ. ವಿರೇಶನನ್ನು ನಾಗರ ಕ್ರಾಸ್ ಗೆ ಕಳಿಸಿ, ನಾನು ಅಂಕಿತಾಳನ್ನು ಕರೆದುಕೊಂಡು ಬಂದು ಹುಡುಗಿಯನ್ನು ವಿರೇಶನ ಬಳಿ ಬಿಟ್ಟು ಹೋಗ್ತಿನಿ, ನನ್ನ ಮೇಲೆ ನಂಬಿಕೆಯಿಟ್ಟು ಕಳಿಸಮ್ಮಾ ಎಂದು ಬೇಡಿಕೊಂಡಿದ್ದಾನೆ. ಹೆತ್ತ ತಾಯಿಯು ಪ್ರವೀಣನ ಮಾತು ನಂಬಿ ಯಾಮಾರುತ್ತಾಳೆ. ಮಗನಿಗೆ ಅಲ್ಲಿಗೆ ಹೋಗಲು ಒಪ್ಪಿಗೆ ಕೊಟ್ಟಿದ್ದಾಳೆ. ಮಗ ವಿರೇಶ ಹೋಗುವಾಗ ತಾಯಿ ಬಳಿಯಿಂದ 2 ಲಕ್ಷ ರೂಪಾಯಿ ತೆಗೆದುಕೊಂಡು ಹೋಗುತ್ತಾನೆ. ನಂತರ ತಾಯಿ ಮಹಾದೇವಿ ಅವರು ಮಗನಿಗೆ ಫೋನ್ ಮಾಡಿದರೆ ಫೋನ್ ನಾಟ್ ರೀಚೆಬಲ್ ಆಗಿತ್ತು. ಮಧ್ಯರಾತ್ರಿ ಸುಮಾರು 01:30 ಗಂಟೆಗೆ ಪ್ರವೀಣನಿಗೆ ಫೋನ್ ಮಾಡಿ ತಾಯಿ ವಿಚಾರಿಸಿದ್ದಾರೆ. ಮಗ ವಿರೇಶ್ ಎಲ್ಲಿದ್ದಾನೆ ಎಂದು ಕೇಳಿದ್ದಕ್ಕೆ ಪ್ರವೀಣನು ನಿನ್ನ ಮಗ ಇದೂವರೆಗೂ ಬಂದಿಲ್ಲ. ನಾನು ಇಷ್ಟೊತ್ತಿನವರೆಗೂ ಕಾದು ಈಗ ಆತ ಬಂದಿಲ್ಲವೆಂದು ಅಂಕಿತಾಳನ್ನು ವಾಪಸ್ ಕರೆದುಕೊಂಡು ಹೋಗುತ್ತಿರುವುದಾಗಿ ತಿಳಿಸಿದ್ದನು.

ತಾಯಿಯು ಗಾಬರಿಗೊಂಡು ಮಾ. 16 ರ ಬೆಳಿಗ್ಗೆ 08:00 ಗಂಟೆಗೆ ತುಂಗಾ ನಗರದ ಪೊಲೀಸ್ ಠಾಣೆಯಲ್ಲಿ ಮಗನ ಮಿಸ್ಸಿಂಗ್ ಕೇಸ್ ದೂರು ನೀಡಿದ್ದಳು. ಇದರ ಬಳಿಕ ಶಿಕಾರಿಪುರ ತಾಲೂಕಿನ ಶಿರಾಳಕೊಪ್ಪದ ಸಮೀಪದ ತೊಗರ್ಸಿ ಬಳಿ ಇನ್ನೋವಾ ಕಾರಿನಲ್ಲಿ, ಒಬ್ಬ ವ್ಯಕ್ತಿಯನ್ನು ಕಾರಿನಲ್ಲಿ ಇಟ್ಟು ಸುಟ್ಟಿರುವ ಮಾಹಿತಿ ಕುಟುಂಬಸ್ಥರಿಗೆ ಬಂದಿತ್ತು.

ಇನ್ನೋವಾ ಕಾರ್ ಗೆ ಬೆಂಕಿ ಹಚ್ಚಿದ್ದರಿಂದ ಸುಟ್ಟು ಕರಕಲಾಗಿರುತ್ತದೆ. ಅದರಲ್ಲಿ ವಿರೇಶ್ ಮೃತ ದೇಹವಿತ್ತು. ಅದು ಕೂಡಾ ಸುಟ್ಟು ಕರಕಲಾಗಿರುತ್ತದೆ. 1) ಪ್ರವೀಣ್ ಅಂಕಿತಾ ದೊಡ್ಡಪ್ಪ ಮಗ (ಅಣ್ಣ) 2) ಅಂಕಿತಾ ಸ್ವಂತ ಅಣ್ಣ ಆದರ್ಶ 3) ಪ್ರಶಾಂತ್ 4) ಪ್ರಭು ಇವರೆಲ್ಲರೂ ಸೇರಿ ಆ ದಿನ ರಾತ್ರಿ ವಿರೇಶನನ್ನು ಹಾನಗಲ್ ನಾಗರ ಕ್ರಾಸ್ ಗೆ ಬರಲು ಹೇಳಿ ಆತನನ್ನು ಕೊಲೆ ಮಾಡಿದ್ದಾರೆ. ಕೊಲೆ ಮಾಡಿದ ಬಳಿಕ ಬುದ್ದಿವಂತಿಕೆಯಿಂದ ಸಾಕ್ಷ್ಯ ನಾಶಪಡಿಸಲು ಕಾರ್ ನಲ್ಲಿ ವೀರೇಶನನ್ನು ಇಟ್ಟು ಕಾರ್ ಸಮೇತ ಬೆಂಕಿ ಹಚ್ಚಿ ಸುಟ್ಟು ಹಾಕಿದ್ದಾರೆ.

# ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾಗಿ ಅಪ್ಜಲ್ ಷರೀಫ್ ಪುನರ್ ನೇಮಕ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಅಲ್ಪ ಸಂಖ್ಯಾತರ ಘಟಕದ ಅಧ್ಯಕ್ಷರಾಗಿ ಜಿಲ್ಲಾ ವರ್ಕ್ಪ್ ಬೋರ್ಡ್ ಉಪಾಧ್ಯಕ್ಷರಾದ ಅಪ್ಜಲ್ ಷರೀಪ್ ಅವರನ್ನು ರಾಷ್ಟ್ರೀಯ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಇಮ್ರಾನ್ ಪ್ರತಾಪ್ ಗಡಾ ಅವರು ಪುನರ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಕಳೆದ ಅವಧಿಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾಗಿದ್ದ ಅಪ್ಜಲ್ ಷರೀಪ್ ಅವರನ್ನು ರಾಷ್ಟ್ರೀಯ ಕಾಂಗ್ರೆಸ್ ಸಂಯೋಜಕ ಜಿಲಾನಾ ಗಲಾ, ರಾಜ್ಯಾಧ್ಯಕ್ಷ ಕೆ. ಅಬ್ದುಲ್ ಜಬ್ಬಾರ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರು, ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್, ಕಾರ್ಯಾಧ್ಯಕ್ಷರಾದ ಸಲೀಂ ಅಹಮದ್, ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ, ಜಿಲ್ಲೆಯ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಎಚ್. ಎಂ. ಗಣೇಶ್ ಪ್ರಸಾದ್, ಮಾಜಿ ಶಾಸಕರಾದ ಆರ್ .ನರೇಂದ್ರ. ಎಸ್. ಜಯಣ್ಣ ಅವರುಗಳ ಸೂಚನೆ



ಮತ್ತು ಶಿಫಾರಸ್ಸಿನ ಹಿನ್ನೆಲೆಯಲ್ಲಿ ಅಪ್ಜಲ್ ಷರೀಪ್ ಅವರನ್ನು ಮುಂದಿನ ಅವಧಿಗೂ ಸಹ ಜಿಲ್ಲಾ ಅಲ್ಪ ಸಂಖ್ಯಾತರ ಘಟಕದ ಅಧ್ಯಕ್ಷರನ್ನಾಗಿ ಮುಂದುವರಿಸಲಾಗಿದೆ.

ತಾವು ಸಕ್ರಿಯವಾಗಿ ಪಕ್ಷವನ್ನು ಸಂಘಟನೆ ಮಾಡುವ ಜೊತೆಗೆ ಕಾಂಗ್ರೆಸ್ ಸರ್ಕಾರ ಅಲ್ಪ ಸಂಖ್ಯಾತರ ಸಮುದಾಯಕ್ಕೆ ನೀಡಿರುವ ಕೊಡುಗೆಗಳು ಹಾಗು ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿ, ಅಲ್ಪ ಸಂಖ್ಯಾತರ ಜಿಲ್ಲಾ ಘಟಕವನ್ನು ಸಂಘಟಿಸಬೇಕು ಚುನಾವಣೆಗಳಲ್ಲಿ ಗೆಲುವು ತಂದುಕೊಡಲು ಶ್ರಮಿಸಬೇಕು ಎಂದು ಆದೇಶ ಪ್ರತಿಯಲ್ಲಿ ಅಧ್ಯಕ್ಷರು ತಿಳಿಸಿದ್ದಾರೆ. ಪುನಾರಾಯ್ಕೆ ಮಾಡಿದ ರಾಷ್ಟ್ರೀಯ ಹಾಗೂ ರಾಜ್ಯ ಹಾಗೂ ಜಿಲ್ಲೆಯ ಎಲ್ಲಾ ವರಿಷ್ಠರಿಗೆ ಅಭಾರಿಯಾಗಿದ್ದೇನೆ ಎಂದು ಜಿಲ್ಲಾಧ್ಯಕ್ಷ ಅಪ್ಜಲ್ ಷರೀಪ್ ತಿಳಿಸಿದ್ದಾರೆ.

# ಜೀವಿಸಲಿಕ್ಕೆ ಜಲ ಮತ್ತು ಪರಿಸರ ರಕ್ಷಣೆ ಅಗತ್ಯ

**ಶ್ರೀರಂಗಪಟ್ಟಣ:** ಮನುಷ್ಯ ಹಾಗೂ ಪ್ರಾಣಿ ಸಂಕುಲ ರಕ್ಷಣೆಗೆ ಜಲ ರಕ್ಷಣೆಯೊಂದಿಗೆ ಪರಿಸರವನ್ನು ಕಾಪಾಡಿಕೊಳ್ಳಬೇಕು ಎಂದು ಅಪರ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹದೇವಪ್ಪ ಎಚ್.ಹೇಳಿದರು.

ತಾಲೂಕಿನ ಕರಿಘಟ್ಟ ಬೆಟ್ಟದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ವಕೀಲರ ಸಂಘ ಹಾಗೂ ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ವಿಶ್ವ ಜಲ ರಕ್ಷಣೆ ದಿನಾಚರಣೆ ಕರ್ಯಕ್ರಮದಲ್ಲಿ ಗಿಡ ನೆಟ್ಟು ಪರಿಸರ ಉಳಿಸಿ ಎಂದು ಘೋಷಣೆ ಮಾಡಿ ಮಾತನಾಡಿದರು. ಮನುಷ್ಯ ವಾಸಿಸಲು ಒಳ್ಳೆಯ ವಾತಾವರಣ ಬೇಕು. ಉಸಿರಾಡಲು ಒಳ್ಳೆಯ ಗಾಳಿ, ಕುಡಿಯಲು ನೀರು, ತಿನ್ನಲು ಆಹಾರ ನಮ್ಮ ಸುತ್ತಲ ಪರಿಸರವನ್ನು ಸ್ವಚ್ಛಯಾಗಿಟ್ಟು

ಕೊಳ್ಳಬೇಕು.ಮರಗಿಡಗಳನ್ನು ನಾವು ಬೆಳಸಬೇಕು ಮರಗಿಡಗಳಿಂದ ಪ್ರಕೃತಿ ನಿಯಮದಂತೆ ಮಳೆ ಗಾಳಿ ಚನ್ನಾಗಿರುತ್ತದೆ ಅದರಂತೆ ಕಾಡುಗಳ ಬೆಳೆದರೆ ಪ್ರಾಣಿ ಪಕ್ಷಿಗಳು ಉಳಿಯುತ್ತವೆ.ಜರಿಗಳಲ್ಲಿ ನೀರುಕುಡಿದು ಜಲಚರಗಳ ತಿಮದು ಪ್ರಣಿಗಳಿಗು ಅಹರ ನೀರು ಸಿಗುತ್ತದೆ. ಆದರೆ ಮನುಷ್ಯ ಇವತ್ತಿನ ದಿನದಲ್ಲಿ ವಿನಾಶದ ಅಂಚಿನಲ್ಲಿದ್ದಾನೆ. ಇರುವ ಮರಗಿಡ ಕಡಿದು ಇರುವ ಜಲವನ್ನು ಕಸ- ತ್ಯಾಜ್ಯಗಳ ಸುರಿದು ನೀರನ್ನು ಕಲುಷಿತ ಗೊಳಿಸಿ,ಪರಿಸರವನ್ನು ಹಾಳು ಮಾಡಿ ಪರಿಸರವನ್ನು ದುರಾಸೆಯಿಂದ ವಿನಾಶದತ್ತ ತೆಗೆದುಕೊಂಡು ಹೋಗುತ್ತಿದ್ದಾನೆ ಇದರಿಂದ ಮುಂದೆ ಮನುಕುಲ ಹಾಗೂ ಪ್ರಾಣಿ ಸಂಕುಲಕ್ಕೆ ಸಂಚಕಾರ ಬರಬಹುದಾಗಿದೆ ಈಗಲಾದರೂ ಎಚ್ಚೆತ್ತುಕೊಮಡು ಜಲ



ಸಂರಕ್ಷಣೆ ಮಾಡಿ ಪರಿಸರವನ್ನು ಉಳಿಸಿಕೊಂಡು ಹೋಗುವ ಪ್ರಯತ್ನ ಮಾಡಬೇಕಿದೆ ಎಂದರು.

ನಂತರ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ದೇವರಾಜ್ ವೈ.ಎಚ್. ಮಾತನಾಡಿ, ಇಂದಿನಿಂದಲೆ ಜಲರಕ್ಷಣೆ ಮಾಡಬೇಕು ಪರಿಸರವನ್ನು ಉಳಿಸಲು ಪಣ ತೊಟ್ಟು ಎಲ್ಲರಲ್ಲೂ ಜಾಗೃತಿ ಮೂಡಿಸುವ ಕೆಲಸ ಮಾಡೋಣ ಎಂದರು. ವಕೀಲರ ಸಂಘದ ಅಧ್ಯಕ್ಷ ಸತ್ಯನಾರಾಯಣ, ಕಾರ್ಯದರ್ಶಿ ಪವನ್‌ಗೌಡ, ಸಿಪಿಐ ಬಿ.ಎಸ್ .ಪ್ರಕಾಶ್, ವಲಯ ಅರಣ್ಯಾಧಿಕಾರಿ ಪುಟ್ಟಸ್ವಾಮಿ ಉಪಸ್ಥಿತಿಯಲ್ಲಿ ವಕೀಲ ಜಯಸ್ವಾಮಿ ಜಲ ಮತ್ತು ಪರಿಸರ ಸಂರಕ್ಷಣೆ ಕುರಿತು ಉಪನ್ಯಾಸ ನೀಡಿದರು.

# ಮತ ಎಣಿಕೆ ಹಿನ್ನೆಲೆಯಲ್ಲಿ ಮದ್ಯ ಮಾರಾಟ ನಿಷೇಧ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮತ ಎಣಿಕೆ ಕಾರ್ಯವು ಜೂನ್ 4ರಂದು ನಡೆಯಲಿರುವ ಹಿನ್ನೆಲೆಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಜಿಲ್ಲೆಯ ಎಲ್ಲಾ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯೊಳಗೆ ಬರುವ ನಗರ ಮತ್ತು ಗ್ರಾಮೀಣ ಪ್ರದೇಶ ಒಳಗೊಂಡಂತೆ ಪೂರ್ಣ ಜಿಲ್ಲಾ ವ್ಯಾಪ್ತಿಯೊಳಗೆ ಜೂನ್ 3ರ ಸಂಜೆ 5 ಗಂಟೆಯಿಂದ ಜೂನ್ 4ರ ಮಧ್ಯರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ. ಸೂಚಿತ ಅವಧಿಯಲ್ಲಿ ಎಲ್ಲಾ ರೀತಿಯ ಮದ್ಯದ ಅಂಗಡಿಗಳನ್ನು ಮುಚ್ಚುವಂತೆ ಹಾಗೂ ಯಾವುದೇ ರೀತಿಯ ಮದ್ಯ ತಯಾರಿಕೆ, ಮಾರಾಟ, ಸಾಗಾಣಿಕೆ, ಸರಬರಾಜು ಮತ್ತು ಹಂಚಿಕೆಯನ್ನು ನಿಷೇಧಿಸಿ ಒಣ ದಿವಸವೆಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶಿಸಿದ್ದಾರೆ.

# ಗಡಿಪಾರು ಮಾಡುವಂತೆ ಒತ್ತಾಯ

**ಚಾಮರಾಜನಗರ:** ಜಾನುವಾರುಗಳ ಕಾಲು ಕತ್ತರಿಸಿ ನಾಗರಿಕರಿಗೆ ಆತಂಕ ಉಂಟು ಮಾಡಿರುವ ವ್ಯಕ್ತಿಯನ್ನು ಗಡಿಪಾರು ಮಾಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಹೊನ್ನೂರ್ ಪ್ರಕಾಶ್ ಒತ್ತಾಯಿಸಿದ್ದಾರೆ. ಹನೂರು ತಾಲೂಕಿನ ಗುಂಡಿಮಾಳ ಗ್ರಾಮದ ರೈತರ ಹದಿನಾರು ಜಾನುವಾರಗಳ ಕಾಲು ಕತ್ತರಿಸಿ ರಾಜರಸವಾಗಿ ಓಡಾಡುತ್ತಿರುವ ವ್ಯಕ್ತಿಯನ್ನುಪೊಲೀಸರು ಗಡಿಪಾರು ಮಾಡುವಂತೆ ಒಡೆಯರ್ ಪಾಳ್ಯ ಪೊಲೀಸ್ ಠಾಣೆಗೆ ಸಲ್ಲಿಸಿ ಅವರು ಮಾತನಾಡಿದರು. ಅನ್ಯ ಧರ್ಮೀಯ ವ್ಯಕ್ತಿ ಓರ್ವ ಗುಂಡಿಮಾಳ ಗ್ರಾಮದ ರೈತರ ಹದಿನಾರು ಜಾನುವಾರಗಳ ಮೇಲೆ ಮಚ್ಚಿನಿಂದ ಕಾಲುಗಳನ್ನು ಕತ್ತರಿಸಿ ಸಮಾಜವೇ ತಲೆತಗ್ಗಿಸುವಂತಹ ಘಟನೆ ನಡೆದಿರುವ ಹಿನ್ನೆಲೆಯಲ್ಲಿ ಪೊಲೀಸರು ಆತನ ಮೇಲೆ ಪ್ರಕರಣದ ಕಲಿಸಿರುವುದು ಬಿಟ್ಟರೆ ಜಾಮೀನಿನಲ್ಲಿ ಬಂದು ಆತನು ಅಲ್ಲಿನ ರೈತರಿಗೆ ಭಯದ ವಾತಾವರಣವನ್ನು ಉಂಟು ಮಾಡಿದ್ದಾನೆ ಹೀಗಾಗಿ ಹಿರಿಯ ಪೊಲೀಸ್ ಅಧಿಕಾರಿಗಳು ಕ್ರಮ ಕೈಗೊಳ್ಳುವ ಮೂಲಕ ಜಾನುವಾರು ಕಾಲು ಕತ್ತರಿಸಿದ ವ್ಯಕ್ತಿಯನ್ನು ತಾಲೂಕಿನಿಂದ ಗಡಿಪಾರು ಮಾಡಬೇಕು ಜೊತೆಗೆ ಸರ್ಕಾರವೇ ಜಾನುವಾರುಗಳಿಗೆ ಚಿಕಿತ್ಸೆ ನೀಡಬೇಕು ರೈತರಿಗಾಗಿರುವ ನಷ್ಟ ಪರಿಹಾರ ನೀಡಬೇಕು ಜೊತೆಗೆ ಈ ಭಾಗದಲ್ಲಿ ಕನ್ನಡ ನಾಮಪಲಕವಿಲ್ಲದೆ ಎಲ್ಲಿ ನೋಡಿದರೂ ಆಂಗ್ಲ ಮಾಧ್ಯಮ ಮತ್ತು ಬೇರೆ ಭಾಷೆಯ ನಾಮಪಲಕಗಳು ಹೆಚ್ಚಾಗಿದ್ದು ತೆರವುಗೊಳಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಜಿಲ್ಲಾಡಳಿತ ಇಲ್ಲದಿದ್ದರೆ ಸೋಮವಾರ ತಮಿಳುನಾಡಿನ ಅಂತರ ರಾಜ್ಯ ರಸ್ತೆ ತಡೆ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಹೊನ್ನೋ ಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಒಡೆಯರ್ ಪಾಳ್ಯ ಶಿವು ಮಂಜು ಲೋಕ್ಕನಹಳ್ಳಿ ಗ್ರಾಮದ ನವೀನ್ ಮನೋಹರ್ ವೇಲು ಗುಂಡಿಮಾಳ ಗ್ರಾಮದ ರೈತ ಪ್ರಸಾದ್ ಇದ್ದರು.

# ನೀರು ಸರಬರಾಜಿನಲ್ಲಿ ವ್ಯತ್ಯಯ

**ರಾಮನಗರ:** ರಾಮನಗರ ಮತ್ತು ಚನ್ನಪಟ್ಟಣ ನಗರಗಳಿಗೆ ತೊರೆಕಾಡನಹಳ್ಳಿಯಿಂದ ಕಾವೇರಿ ನೀರು ಕುಡಿಯುವುದಕ್ಕಾಗಿ ಸರಬರಾಜಾಗುತ್ತಿದ್ದು, ಜೆ.ಬ್ಯಾಡರಹಳ್ಳಿ ಗ್ರಾಮದ ಬಳಿ ಕಾರೇಕೊಪ್ಪ ಗೇಟ್ ಬಳಿ ಇರುವ 610 ಎಂ.ಎಂ ವ್ಯಾಸದ ಏರು ಕೊಳವೆ ಮಾರ್ಗದಲ್ಲಿ ನೀರಿನ ಸೋರಿಕೆಯಾಗುತ್ತಿದ್ದು, ಇದನ್ನು ತಡೆಗಟ್ಟುವ ಸಲುವಾಗಿ ದುರಸ್ಥಿ ಮಾಡಲು ತುರ್ತು ಕಾಮಗಾರಿಯನ್ನು ಮಾ. 23 ಹಾಗೂ 24 ರಂದು ಕೈಗೆತ್ತಿಕೊಳ್ಳಲಾಗಿದೆ. ಆದ್ದರಿಂದ ರಾಮನಗರ ಮತ್ತು ಚನ್ನಪಟ್ಟಣ ನಗರಕ್ಕೆ ಎರಡು ದಿನಗಳು ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತದೆ. ಸಾರ್ವಜನಿಕರು ನಗರಸಭೆ ಮತ್ತು ಜಲಮಂಡಳಿರವರೊಂದಿಗೆ ಸಹಕರಿಸುವಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಚನ್ನಪಟ್ಟಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕ ಬಿಡುಗಡೆ ಕಾರ್ಯಕ್ರಮ

**ಬೆಂಗಳೂರು:** ಆಲೂರು ದೊಡ್ಡನಿಂಗಪ್ಪ ನವರ ಕಾದಂಬರಿ ಚಂದನಚೂರು ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಮಾರ್ಚ್ 23 ರಂದು ಸಂಜೆ 5 ಗಂಟೆಗೆ ಬೆಂಗಳೂರು ಕುಮಾರಕೃಪಾ ರಸ್ತೆಯಲ್ಲಿರುವ ಚಿತ್ರಕಲಾ ಪರಿಷತ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಖ್ಯಾತ ಸಾಹಿತಿಗಳು ಹಾಗೂ ಚಿಂತಕರಾದ ಡಾ.ಬಂಜಗೆರೆ ಜಯಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ಹಾಗೂ ಕಾದಂಬರಿ ಬಿಡುಗಡೆ ಮಾಡಲಿರುವರು. ಕಾರ್ಯಕ್ರಮದಲ್ಲಿ ಖ್ಯಾತ ವಿಮರ್ಶಕರಾದ ಡಾ.ಎಂ.ಎಸ್. ಆಶಾದೇವಿ, ಸಾಹಿತಿಗಳಾದ ದಯಾ ಗಂಗನಘಟ್ಟ ಅವರು ಕಾದಂಬರಿ ಕುರಿತು ಮಾತನಾಡಲಿದ್ದಾರೆ. ಆಲೂರು ದೊಡ್ಡನಿಂಗಪ್ಪ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

# ಕೋಲಾರ ಜಿಲ್ಲಾ ಛಾಯಗ್ರಾಹಕರ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ

**ಕೋಲಾರ:** 2024ನೇ ಸಾಲಿನ ಲೋಕಸಭಾ ಚುನಾವಣೆ ಕಾರ್ಯಕ್ರಮಗಳಿಗೆ ವಿಡಿಯೋ ಚಿತ್ರೀಕರಣ ಮಾಡಲು ಕೋಲಾರ ಜಿಲ್ಲೆಯಛಾಯಗ್ರಾಹಕರಿಗೆ ಅನುಮತಿ ನೀಡುವಂತೆ ಕೋರಿ ಕೋಲಾರ ಜಿಲ್ಲಾ ಛಾಯಗ್ರಾಹಕರ ಸಂಘದ ಜಿಲ್ಲಾಧ್ಯಕ್ಷ ವಿ.ಕೃಷ್ಣ ರವರ ನೇತೃತ್ವದಲ್ಲಿ ಕೋಲಾರ ಜಿಲ್ಲೆಯ ಆರು ತಾಲ್ಲುಕು ಛಾಯಗ್ರಾಹಕರ ಸಂಘದ ಅಧ್ಯಕ್ಷರು ಚುನಾವಣೆ ತಹಶೀಲ್ದಾರ್ ಶರೀನ್ ತಾಜ್ ರವರ ಮೂಲಕ ಜಿಲ್ಲಾಧಿಕಾರಿ ಅಕ್ರಂ ಪಾಷಾ ಅವರಿಗೆ ಮನವಿ ಸಲ್ಲಿಸಲಾಯಿತು.

ವಿ.ಕೃಷ್ಣ ರವರು ಮನವಿ ಸಲ್ಲಿಸಿ ಮಾತನಾಡಿ, ಕೋಲಾರ ಜಿಲ್ಲಾ ಪೋಟೋ ಮತ್ತು ವಿಡಿಯೋ ಗ್ರಾಹಕರ ಸಂಘವು, ಕಳೆದು 20 ವರ್?ಗಳಿಂದಲೂ ಅಸ್ಥಿತ್ವದಲ್ಲಿದ್ದು ಈ ಮೊದಲೇ 2018 ಮತ್ತು 2023ರ ಚುನಾವಣೆಗಳಲ್ಲಿ ನಮ್ಮ ಕೋಲಾರ ಜಿಲ್ಲಾ ಛಾಯಗ್ರಾಹಕರಸಂಘದ ವತಿಯಿಂದ ವಿಡಿಯೋ ಚಿತ್ರಿಕರಣ ಮಾಡಿರುತ್ತೇವೆ. 2024ರ ಲೋಕಸಭಾ ಚುನಾವಣೆಗೆ ವಿಡಿಯೋ ಚಿತ್ರಿಕರಣ ಮಾಡಲು ಕೋಲಾರ ಜಿಲ್ಲಾ ಛಾಯಾಗ್ರಾಹಕ ಮತ್ತು ವಿಡಿಯೋಗ್ರಾಹಕ ಸಂಘವು ಸಿದ್ದವಿದ್ದು, ಭಾರತ ಚುನಾವಣಾ ಆಯೋಗದಿಂದ ನಿರ್ಧರಿಸಿರುವ ದರಕ್ಕೆ ಒಪ್ಪಿ ಕೋಲಾರ ಜಿಲ್ಲೆಗೆ ಬರುವ 6 ತಾಲ್ಲೂಕುಗಳಿಂದ ಎಲ್ಲಾ ವೀಡಿಯೋಗ್ರಾಹಕ ಸಂಘವು ವಿಡಿಯೋ ಚಿತ್ರೀಕರಣ ಮಾಡಲು ಸಿದ್ದರಿರುತ್ತೇವೆ ಆದರಿಂದ ಜಿಲ್ಲಾಧಿಕಾರಿ ಅಕ್ರಂ ಪಾಷಾ ರವರು ವಿಡಿಯೋ ಚಿತ್ರೀಕರಣ ಮಾಡಲು ಕೋಲಾರ ಜಿಲ್ಲೆಯ ಛಾಯಗ್ರಾಹಕರಿಗೆ ಅನುಮತಿ ನೀಡುವಂತೆ ಕೋರಿದರು.

ಕೋಲಾರ ತಾಲ್ಲೂಕು ಛಾಯಗ್ರಾಹಕರ ಸಂಘದ ಅಧ್ಯಕ್ಷ ಸ್ಪಂದನ ರಂಗನಾಥ್ ರವರು ಮಾತನಾಡಿ, ಜಿಲ್ಲಾಡಳಿತವು ನಮ್ಮ ಮನವಿಗೆ 24 ಗಂಟೆಯೊಳಗೆ ಸ್ಪಂದಿಸದಿದ್ದರೆ, ಕೋಲಾರ ಜಿಲ್ಲಾ ಛಾಯಗ್ರಾಹಕರ ಕುಟುಂಬದ ಎಲ್ಲಾ 5000ಕ್ಕೂ ಹೆಚ್ಚು ಮತದಾರರು ಮತದಾನ ಬಹಿಷ್ಕಾರ ಹಾಕುವುದಾಗಿ ಜಿಲ್ಲಾಡಳಿತಕ್ಕೆ ಎಚ್ಚರಿಕೆಯನ್ನು ನೀಡಿದರು. ಜಿಲ್ಲಾ ಸಂಘದ ಪ್ರದಾನ ಕಾರ್ಯದರ್ಶಿ ಎನ್.ಮಂಜುನಾಥ್, ಆರು ತಾಲ್ಲುಕು ಅಧ್ಯಕ್ಷರಾದ ಮಾಲೂರು ರವಿ, ಬಮಗಾರಪೇಟೆ ಕುಟ್ಟಿ, ಕೆಜಿಎಫ್ ಕುಮರೇಶ್, ಮುಳಬಾಗಿಲು ವೆಂಕಟೇಶ್, ಶ್ರೀನಿವಾಸಪುರ ವಿಶ್ವನಾಥಸಿಂಗ್ ಸೇರಿದಂತೆ ನೂರಾರು ಛಾಯಗ್ರಾಹಕರು ಉಪಸ್ಥಿತರಿದ್ದರು.



## ಉಜ್ಜನಹಳ್ಳಿಯ ಹಂಸರಾಜ್ ಅಭಿಪ್ರಾಯ

# ಪುರುಷರನ್ನು ಮೀರಿಸಿದ ಮಹಿಳಾ ತಂಡ

**ಚನ್ನಪಟ್ಟಣ:** ಬೊಂಬೆನಾಡಿನ ಇತಿಹಾಸದ ಮುಕುಟಕ್ಕೆ ಮತ್ತೊಂದು ಗರಿಮೆಯಾದ ಭಾರತ್‌ವಿಕಾಸ್ ಪರಿಷತ್‌ನ ಮಹಿಳಾ ಸದಸ್ಯರ ಅಭಿನಯದ ದ್ರೌಪದಿ ವಿಜಯ ಅಥವಾ ಶ್ರೀ ಕೃಷ್ಣ ಸಂದಾನ ಪೌರಾಣಿಕ ನಾಟಕದ ಮಹಿಳಾ ತಂಡ ರಂಗಭೂಮಿಯಲ್ಲಿ ಪುರುಷ ಕಲಾವಿದರನ್ನು ಮೀರಿಸಿದೆ ಎಂದರೆ ಅತಿಶಯೋಕ್ತಿ ಅಲ್ಲ ಎಂದು ಕಿರುತೆರೆ ಹಾಗೂ ಹಿರಿತೆರೆ ನಟ ತಾಲೂಕಿನ ಉಜ್ಜನಹಳ್ಳಿಯ ಹಂಸರಾಜ್ ಅಭಿಪ್ರಾಯಿಸಿದರು.

ಪಟ್ಟಣದ ರೇಷ್ಮೆಸೀಮೆ ಕಾರ್ಯಾಲಯದ ಮೇಲ್ಬಾಗದಲ್ಲಿ ರಂಗಭೂಮಿ ಮಹಿಳಾ ಕಲಾವಿದರಿಗೆ ಆಯೋಜಿಸಲಾಗಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿ, ನಾನೊಬ್ಬ ಸಣ್ಣ ಕಲಾವಿದನಾಗಿ ಹತ್ತಾರು ಬಾರಿ ಸಂಭಾಷಣೆಯನ್ನು ಹೇಳಿದರೂ ಒಂದು ಸೀನ್ ಟೇಕ್ ಆಗಲು ಸಮಯ ಬೇಕು, ಅಲ್ಲದೆ ರಂಗಭೂಮಿ ಕಲಾವಿದನಾಗಿಯೂ ಪಾತ್ರ ಮಾಡಿರುವ ನನಗೆ ಕೆಲವೊಮ್ಮೆ ಸಂಭಾಷಣೆ ಮರೆತ ಉದಾಹರಣೆ ಇದೆ. ಆದರೆ ಮಹಿಳಾ ದಿನಾಚರಣೆಯ ಪ್ರಯುಕ್ತ ತಾಲೂಕಿನ ಭಾರತ್ ವಿಕಾಸ್ ಪರಿಷತ್‌ನ ಮಹಿಳಾ ಸದಸ್ಯರು ನಡೆಸಿಕೊಟ್ಟ ಪೌರಾಣಿಕ ನಾಟಕ ಹತ್ತಾರು ನಾಟಕಗಳನ್ನು ಮಾಡಿ ಸೈ ಎನಿಸಿಕೊಂಡಿರುವ ರಂಗಭೂಮಿಯ ಪುರುಷ ಕಲಾವಿದರನ್ನು ಮೀರಿಸಿದೆ ಎಂದರೆ ತಪ್ಪಾಗುವುದಿಲ್ಲ ಎಂದರು.

ಸಿನಿಮಾ, ದಾರಾವಾಹಿಯ ವ್ಯಾಮೋಹಕ್ಕೆ ಸಿಲುಕಿರುವ ಜನರನ್ನು ಇಂದು ರಂಗಭೂಮಿ ಕಲಾವಿದರು ಒಂದೆರಡು ಗಂಟೆ ಹಿಡಿದಿಟ್ಟುಕೊಳ್ಳುವುದು ಸಹ ಕಷ್ಟವೇ. ಆದರೆ ಮಹಿಳಾ ಮಣಿಗಳು ನಡೆಸಿಕೊಟ್ಟ ದ್ರೌಪದಿ ವಿಜಯ ನಾಟಕ ಪ್ರದರ್ಶನದ ವೇಳೆ ಸಾವಿರಾರು ಪ್ರೇಕ್ಷಕರು ಹತ್ತು ಗಂಟೆಗಳ ಕಾಲ ಕದಲದೆ ಒಂದೆಡೆ ಕೂತರು ಎಂದರೆ ಅದು ಮಹಿಳೆಯರು ಪಾತ್ರದಲ್ಲಿ ಪರಕಾಯ ಪ್ರವೇಶ ಮಾಡಿ ಪ್ರೇಕ್ಷಕರನ್ನು ಹಿಡಿದಿಟ್ಟುಕೊಂಡಿದ್ದಕ್ಕೆ ಸಾಕ್ಷಿಯಾಗಿದೆ. ಪುರುಷರು 10 ನಾಟಕ ಮಾಡಿದಾಗ ಸೇರಿದಷ್ಟು ಪ್ರೇಕ್ಷಕರು ಮಹಿಳೆಯರ ನಾಟಕಕ್ಕೆ ಸೇರಿದ್ದರು ಎಂದರೆ ಅದು ಅವರ ಅಭಿನಯಕ್ಕೆ ಸಿಕ್ಕ ಗೌರವವಾಗಿದೆ ಎಂದು ಹಂಸರಾಜ್ ಬಣ್ಣಿಸಿದರು.

ಯೂಟ್ಯೂಬ್‌ನಲ್ಲಿ ನಾಟಕ ವೀಕ್ಷಣೆ ಮಾಡಿದ ನನಗೆ ಮಹಿಳಾ ಕಲಾವಿದರ ಪಾತ್ರಾಭಿನಯ, ಸಂಭಾಷಣೆಯ ಏರಿಳಿತ, ಪಾತ್ರದಲ್ಲಿನ ನಯ-ವಿನಯ, ಗಾಂಭಿರ್ಯ, ರೌದ್ರ ಸೇರಿದಂತೆ ನವರಸಗಳನ್ನು ಕಂಡು ಮೈ ರೋಮಾಂಚನವಾಯಿತೆಂದರೆ ನೇರವಾಗಿ ಮಹಿಳೆಯರ ನಾಟಕ ನೋಡಿದ ಪ್ರೇಕ್ಷಕರ ಹರ್ಷೋದ್ಘಾರ ದುಪ್ಪಟ್ಟಾಗಿದ್ದನ್ನು ಕಂಡು ನನ್ನ ತಾಲೂಕಿನ ಮಹಿಳೆಯರ ಸಾಧನೆ ಬಗ್ಗೆ ಮತ್ತಷ್ಟು ಹೆಮ್ಮೆ ಮೂಡಿತು. ಈ ನಿಟ್ಟಿನಲ್ಲಿ



ರಂಗಭೂಮಿಯ ಪುರುಷ ಕಲಾವಿದರನ್ನು ಒಂದೆಡೆ ಸೇರಿಸಿ ದೊಡ್ಡ ಪರದೆಯಲ್ಲಿ ಈ ಮಹಿಳೆಯರ ಪೌರಾಣಿಕ ನಾಟಕ ಪ್ರದರ್ಶನ ಮಾಡುವ ಚಿಂತನೆ ಮಾಡಿದ್ದೇನೆ. ಆದರೆ ರಮೇಶ್‌ಗೌಡರು ಅದಕ್ಕೂ ಒಂದೆಜ್ಜೆ ಮುಂದಿಟ್ಟು ಮಹಿಳೆಯರಿಂದ ಬೆಂಗಳೂರಿನ ರಂಗಮಂದಿರದಲ್ಲಿ ನಾಟಕ ಪ್ರದರ್ಶನ ಮಾಡಿಸಿ ಮಹಿಳಾ ರಂಗಭೂಮಿ ಕಲಾವಿದರಿಗೆ ಮತ್ತಷ್ಟು ಉತ್ತೇಜನ ನೀಡಲು ಮುಂದಾಗಿರುವುದು ಶ್ಲಾಘನೀಯ ಎಂದರು.

ಸಾಂತ್ವನ ಸಂಗೀತ ಪೌಂಡೇಷನ್ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಪವಿತ್ರಾ ಪ್ರಭಾಕರ್ ರೆಡ್ಡಿ ಅವರು ಮಾತನಾಡಿ, ಮಹಿಳೆಯರು ಇಂದು ಎಲ್ಲಾ ಕ್ಷೇತ್ರದಲ್ಲಿ ತಮ್ಮದೇ ಸಾಧನೆ ಮಾಡಿದ್ದಾರೆ. ಆದರೆ ರಂಗಭೂಮಿ ನಾಟಕದಲ್ಲಿ ಎಲ್ಲಾ ಪಾತ್ರಗಳನ್ನು ಮಹಿಳೆಯರೇ ನಿರ್ವಹಿಸಿ ಪುರುಷ ಪ್ರಧಾನ ಪಾತ್ರಕ್ಕೂ ನಾವು ಸೈ ಎನ್ನಿಸಿಕೊಂಡಿರುವುದು ಹೆಮ್ಮೆಯ ಸಂಗತಿ. ನಾನು ಈ ತಾಲೂಕಿನವಳೇ ಆಗಿದ್ದು ನಾನೂ ಸಹ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದರೂ ಸಹ ಈ ಮಹಿಳಾ ರಂಗಭೂಮಿ ಕಲಾವಿದರ ನಾಟಕ ಪ್ರದರ್ಶನದ ಮುಂದೆ ನಮ್ಮ ಸಾಧನೆ ಚಿಕ್ಕದೆ ಎನ್ನಿಸುತ್ತದೆ ಎಂದರು.

ಈ ಮಹಿಳಾ ರಂಗಭೂಮಿ ಕಲಾವಿದರ ತಂಡದಲ್ಲಿನ ಮಹಿಳೆಯರು ಹುಟ್ಟು ಕಲಾವಿದರಲ್ಲ. ಅವರಿಗೆ ಸಮಾಜದಲ್ಲಿ ತಮ್ಮದೇ ಆದ ಸ್ಥಾನ ಇದೆ. ಪ್ರತಿಯೊಬ್ಬರೂ ಒಂದೊಂದು ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದಾರೆ. ಆದರೂ ಎಲ್ಲರೂ ಒಟ್ಟಾಗಿ ಪುರುಷ ಪ್ರಧಾನ ಪೌರಾಣಿಕ ನಾಟಕವನ್ನು ಕಲಿತು ಮೊದಲ ಪ್ರದರ್ಶನದಲ್ಲೇ ಇತಿಹಾಸ ನಿರ್ಮಾಣ ಮಾಡಿದ್ದಾರೆ ಎಂದರೆ ಅವರ ತಾಳ್ಮೆ, ಶ್ರದ್ದೆ, ಸಂಯಮ ಎಲ್ಲವನ್ನು ನಾವು ಗಮನಿಸಬೇಕಿದೆ. ಹೆಣ್ಣು ಮನಸ್ಸು ಮಾಡಿದರೆ ಏನು ಬೇಕಾದರೂ ಮಾಡಬಲ್ಲಳು ಎಂಬುದಕ್ಕೆ ಈ ತಂಡ ಸಾಕ್ಷಿಯಾಗಿದ್ದು, ಕಲಾವಿದರಿಗೆ ಅದರಲ್ಲೂ ಮಹಿಳೆಯರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ನಾನು ಸದಾ ನಿಮ್ಮ ಜೊತೆಗೆ ಇರುತ್ತೇನೆ. ನನ್ನಿಂದ ಆಗುವ ಸೇವೆ ಮಾಡಲು ಸಿದ್ದನಿರುತ್ತೇನೆ. ಅಲ್ಲದೆ ಮಹಿಳೆಯರು ಮೊದಲ ಬಾರಿಗೆ ನಾಟಕ ಪ್ರದರ್ಶನ ಮಾಡಿ ತಾಲೂಕಿಗೆ ಕೀರ್ತಿ ತಂದಿದ್ದಾರೆ ಎಂಬುದನ್ನು ಗುರುತಿಸಿ ಅವರನ್ನು ಅಭಿನಂದಿಸುವ ರಮೇಶ್‌ಗೌಡರ ಕಾರ್ಯ ಶ್ಲಾಘನೀಯವಾಗಿದ್ದು, ಈ ಅಭಿನಂದನೆ ಸಮಾರಂಭ ಕಲಾವಿದರನ್ನು ಜಿಲ್ಲಾ, ರಾಜ್ಯ ಮಟ್ಟದಲ್ಲಿ ಹೆಸರು ಮಾಡುವಂತೆ ಪ್ರೇರೇಪಣೆಯಾಗಲಿ ಎಂದರು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮಾತನಾಡಿ, ಮಹಿಳೆಯರ ಈ ಸಾಧನೆಯನ್ನು ಗುರುತಿಸುವುದೆ ನಮ್ಮ ಪುಣ್ಯದ ಕೆಲಸವಾಗಿದೆ. ಇಂತಹ ದಿಟ್ಟ ಮಹಿಳೆಯರನ್ನು ಕುಟುಂಬದವರು ಪ್ರೋತ್ಸಾಹಿಸಿ ಸಾಧನೆಯ ಹಾದಿಗೆ ತಂದು ನಿಲ್ಲಿಸಿರುವುದು ಮತ್ತೊಂದು ದೊಡ್ಡ ಸಾಧನೆಯಾಗಿದೆ. ಮಹಿಳೆಯರಿಗೆ ನಾಟಕ ಕಲಿಸಿ ನಾಟಕ ಪ್ರದರ್ಶನ ಮಾಡುವುದು ಎಂದರೆ ಸುಲಭದ ಮಾತಲ್ಲ. ಅಂತಹ ಸಾಹಸಕ್ಕೆ ಕೈ ಹಾಕಿ ಯಶಸ್ಸು ಕಂಡಿರುವ ಭಾರತ್ ವಿಕಾಶ್ ಪರಿಷತ್‌ನ ಪದಾಧಿಕಾರಿಗಳು, ಡಾ. ರಾಜ್ ಕಲಾಬಳಗ, ಕೆಂಗಲ್ ಆಂಜನೇಯ ಸಾಂಸ್ಕೃತಿಕ ಟ್ರಸ್ಟ್ ಸೇರಿದಂತೆ ಈ ಸಮಾರಂಭಕ್ಕೆ ಸಹಕಾರ ನೀಡಿದ ಸಮಾಜದ ವಿವಿಧ ಗಣ್ಯರ ಶ್ರಮಕ್ಕೆ ಮಹಿಳಾ ಕಲಾವಿದರು ತಮ್ಮ ಪ್ರತಿಭೆಯ ಮೂಲಕ ಫಲಸಿಗುವಂತೆ ಮಾಡಿದ್ದಾರೆ. ಇವರಿಗೆ ರಾಜ್ಯಮಟ್ಟದಲ್ಲಿ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಸಂಘಟನೆ ಶ್ರಮಿಸಲಿದೆ ಎಂದರು ಹೇಳಿದರು.

# ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

**ರಾಮನಗರ:** ಲೋಕಸಭಾ ಚುನಾವಣೆ-2024ರ ಅಂಗವಾಗಿ ಮತದಾನ ಜಾಗೃತಿಗಾಗಿ ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಸ್ವಿಪ್ ಸಮಿತಿ ಹಾಗೂ ಮಳೂರು ಗ್ರಾಮ ಪಂಚಾಯಿತಿ ವತಿಯಿಂದ ತಾಲ್ಲೂಕಿನ ಸ್ವ-ಸಹಾಯ ಒಕ್ಕೂಟದ ಮಹಿಳೆಯರನ್ನು (ಎಂಬಿಕೆ) ಒಗ್ಗೂಡಿಸಿ ಆಯೋಜಿಸಲಾಗಿದ್ದ ಜಾಥಕ್ಕೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮನು ಪಿ.ಕೆ ಅವರು ಚಾಲನೆ ನೀಡಿ ಮತದಾನದಿಂದ ಯಾರು ದೂರ ಉಳಿಯಬಾರದು. ಮತದಾನ ನಮ್ಮೆಲ್ಲರ ಹಕ್ಕು, ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಬೇಕು. ಇದರ ಪ್ರಭುದ್ದತೆಯನ್ನು ಜನರಿಗೆ ಮನವರಿಕೆ ಮಾಡಿ ಕೊಡುವುದು ಸಮಾಜ ಸೇವೆಯ ಕೆಲಸ ಆಗಿದೆ ಎಂದರು.

ಸ್ವ-ಸಹಾಯ ಒಕ್ಕೂಟದ ಮಹಿಳೆಯರು ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಜನರಿಗೆ ಮತದಾನದ ಬಗ್ಗೆ ಅರಿವು ಮೂಡಿಸಿ ಏಪ್ರಿಲ್ 26 ರಂದು ಮತಗಟ್ಟೆಗಳಿಗೆ ಹೋಗಿ ಮತದಾನ ಮಾಡಬೇಕು ಎಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಹಾಯಕ ನಿದೇಶಕರಾದ ಸಿದ್ದರಾಜು ಅವರು ಮಾತನಾಡಿ, ನಮ್ಮ ಭಾರತ ಪ್ರಜಾಪ್ರಭುತ್ವ ದೇಶದಲ್ಲೆ ಅತಿ ದೊಡ್ಡ ದೇಶವಾಗಿದೆ. ಲೋಕಸಭಾ ಚುನಾವಣೆ-2024ರ



ಹಿನ್ನೆಲೆಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಗಳಲ್ಲೂ ಸ್ವೀಪ್ ಕಾರ್ಯಕ್ರಮವನ್ನು ಹಮ್ಮಿಕೊಂಡು ಚುನಾವಣೆಯಲ್ಲಿ ಶೇ. 100 ರಷ್ಟು ಮತದಾನವಾಗಲು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಶಶಿಕಿರಣ್, ತಾಲ್ಲೂಕು ಐಇಸಿ ಸಂಯೋಜಕರಾದ ಭವ್ಯ, ಎನ್‌ಆರ್ ಎಲ್‌ಎಂ ಒಕ್ಕೂಟದ ಸಿಬ್ಬಂದಿಗಳಾದ ಹರೀಶ್ ಬಾಬು, ಹೇಮಂತ್ ಕುಮಾರ್, ನಿಂಗರಾಜು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಗೂ ತಾಲ್ಲೂಕಿನ ಎಂಬಿಕೆಗಳು ಭಾಗಿಯಾಗಿ ಕಾಯಕ್ರಮವನ್ನು ಯಶಸ್ವಿಗೊಳಿಸಿದರು.

# ನ್ಯಾಯಮೂರ್ತಿ ಅನು ಸಿವರಾಮನ್ ಅವರಿಗೆ ಸ್ವಾಗತ

**ಬೆಂಗಳೂರು:** ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಶ್ರೀಮತಿ ಅನು ಸಿವರಾಮನ್ ಅವರಿಗೆ ಕರ್ನಾಟಕ ರಾಜ್ಯ ವಕೀಲರ ಪರಿಷತ್‌ನ ಅಧ್ಯಕ್ಷರಾದ ಹೆಚ್.ಎಲ್. ವಿಶಾಲ್ ರಘು ಅವರು ಹೃತ್ಪೂರ್ವಕವಾಗಿ ಸ್ವಾಗತ ಕೋರಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ಕೋರ್ಟ್ ಹಾಲ್ ಸಂಖ್ಯೆ 1 ರಲ್ಲಿ ಗೌರವಾನ್ವಿತ ನ್ಯಾಯಧೀರಾದ ಶ್ರೀಮತಿ ಅನು ಸಿವರಾಮನ್ ಅವರನ್ನು ಸ್ವಾಗತಿಸಲು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗೌರವಾನ್ವಿತ ನ್ಯಾಯಾಧೀಶರು ಕೇರಳ ಉಚ್ಚ ನ್ಯಾಯಾಲಯದಿಂದ ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ವರ್ಗಾವಣೆಗೊಂಡಿದ್ದಾರೆ. ಗೌರವಾನ್ವಿತ ನ್ಯಾಯಾಧೀಶರು 25ನೇ ಮೇ 1966 ರಂದು ಎರ್ನಾಕುಲಂನಲ್ಲಿ ಜನಿಸಿದ್ದು, ಶಿಕ್ಷಣವನ್ನು ಸೇಂಟ್ ತೆರೇಸಾ ಕಾನ್ವೆಂಟ್



ಗರ್ಲ್ಸ್ ಹೈಸ್ಕೂಲ್, ಸೇಂಟ್ ತೆರೇಸಾ ಕಾಲೇಜು ಮತ್ತು ಎರ್ನಾಕುಲಂನ ಮಹಾರಾಜ ಕಾಲೇಜುಗಳಲ್ಲಿ ಪೂರೈಸಿದ್ದಾರೆ. 1986 ರಲ್ಲಿ ಇಂಗ್ಲೀಷ್ ಸಾಹಿತ್ಯದಲ್ಲಿ ಪದವಿ ಪಡೆದಿದ್ದು, 1987 ರಲ್ಲಿ ಕೇರಳ ಪ್ರೆಸ್ ಅಕಾಡೆಮಿಯಿಂದ ಪತ್ರಿಕೋದ್ಯಮದಲ್ಲಿ ಡಿಪ್ಲೊಮಾವನ್ನು ಪೂರ್ಣಗೊಳಿಸಿದ್ದಾರೆ. ಎರ್ನಾಕುಲಂನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಕಾನೂನು ಪದವಿ ಪಡೆದಿದ್ದಾರೆ.

ವಕೀಲರಾಗಿ 9ನೇ ಮಾರ್ಚ್ 1991 ರಂದು ಸೇವೆ ಪ್ರಾರಂಭಿಸಿದ್ದು, 2001 ರಿಂದ 2010 ರವರೆಗೆ ಕೊಚ್ಚಿನ್ ಕಾರ್ಪೊರೇಷನ್‌ಗೆ ಸ್ಥಾಯಿ ಸಲಹೆಗಾರರಾಗಿ ಸೇವೆ ಸಲ್ಲಿಸಿದ್ದಾರೆ. ಜನವರಿ 2007 ರಿಂದ ಸರ್ಕಾರಿ ವಕೀಲರಾಗಿ 2010 ಮತ್ತು 2011 ರ ಅವಧಿಯಲ್ಲಿ ವಿಶೇಷ ಸರ್ಕಾರಿ ಪ್ಲೀಡರ್ (ಸಹಕಾರ) ಆಗಿ ಸೇವೆ ಸಲ್ಲಿಸಿದ್ದಾರೆ. 10ನೇ ಏಪ್ರಿಲ್ 2015 ರಂದು ಕೇರಳದ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಾಧೀಶರಾಗಿ ನೇಮಕಗೊಂಡಿದ್ದರು. 5ನೇ ಏಪ್ರಿಲ್ 2017 ರಿಂದ ಖಾಯಂ ನ್ಯಾಯಾಧೀಶರಾಗಿ ನೇಮಕವಾಗಿದ್ದು, ಇಂದು ಕರ್ನಾಟಕ ಉಚ್ಚನ್ಯಾಯಾಲಯದ ಗೌರವಾನ್ವಿತ ನ್ಯಾಯಾಧೀಶರಾಗಿದ್ದಾರೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ನಿಲಯ್ ವಿ. ಅಂಜಾರಿಯಾ, ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಅರವಿಂದ್ ಕಾಮತ್, ಕರ್ನಾಟಕದ ಲರ್ನಡ್ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರುಗಳು, ವಕೀಲರುಗಳು ಉಪಸ್ಥಿತರಿದ್ದರು.

# ಸುಖ ಸಾಮರಸ್ಯ ಬಾಳಿಗೆ ರೇಣುಕಾಚಾರ್ಯರ ಚಿಂತನೆಗಳು ದಾರಿದೀಪ

**ರಂಭಾಪುರಿ ಪೀಠ(ಬಾಳೆಹೊನ್ನೂರು):** ಮನುಷ್ಯ ಜೀವನದಲ್ಲಿ ಸುಖ ಶಾಂತಿ ಯಾವಾಗಲೂ ಬಯಸುತ್ತಾನೆ. ಆ ಸುಖದ ದಾರಿ ಪ್ರಾಪ್ತವಾಗಲು ಆದರ್ಶಗಳನ್ನು ಪರಿಪಾಲಿಸಬೇಕು. ಸುಖ ಸಾಮರಸ್ಯ ಬಾಳಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಚಿಂತನೆಗಳು ಸರ್ವರಿಗೂ ದಾರಿದೀಪವಾಗಿವೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಶುಕ್ರವಾರ ಶ್ರೀ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದು. ಮೂಲ ಮರೆತರೆ ಬದುಕಿನಲ್ಲಿ ಸೋಲು ನಿಶ್ಚಿತ. ಮನಸ್ಸು ಪರಿಶುದ್ಧವಾಗಿದ್ದರೆ ಸಂತೋಷ ನೆರಳಿನಂತೆ ನಮ್ಮನ್ನು ಹಿಂಬಾಲಿಸುತ್ತದೆ. ಸುತ್ತಲೂ ಕವಿದಿರುವ ಅಜ್ಞಾನವೆಂಬ ಕತ್ತಲೆಯೊಳಗೆ ಪ್ರೀತಿ ವಾತ್ಸಲ್ಯದ ದೀಪ ಹಚ್ಚಬೇಕು. ಮೌಢ್ಯ ಎಂಬ ಅಂಧಕಾರ ತೊಲಗಿಸಿ ಜ್ಞಾನ ಎಂಬ ದೀಪ ಬೆಳಗಿಸಿದ ಶ್ರೇಯಸ್ಸು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧವಾಗುತ್ತದೆ. ಸತ್ಯ ಶುದ್ಧ ಕಾಯಕದಿಂದ ಬದುಕು ಉನ್ನತಿಯಾಗುತ್ತದೆ ಎಂಬ ಅವರ ವಿಚಾರ ಧಾರೆ ಎಂದೆಂದಿಗೂ ಸತ್ಯ. ವೀರಶೈವ ಧರ್ಮವೃಕ್ಷದ ತಾಯ್ಬೇರು ಶ್ರೀ ಜಗದ್ಗುರು



ರೇಣುಕಾಚಾರ್ಯರು. ನೊಂದವರ ಬೆಂದವರ ಬಾಳಿಗೆ ಬೆಳಕು ತೋರಿದ ಪರಮಾಚಾರ್ಯರು. ಜಾತಿಗಿಂತ ನೀತಿ ತತ್ವಕ್ಕಿಂತ ಆಚರಣೆ ಮಾತಿಗಿಂತ ಕೃತಿ ಬೋಧನೆಗಿಂತ ಸಾಧನೆ ದಾನಕ್ಕಿಂತ ದಾಸೋಹ ಚರಿತ್ರೆಗಿಂತ ಚಾರಿತ್ರ್ಯ ಬಹು ದೊಡ್ಡ ಆಸ್ತಿಯೆಂದು ಅರುಹಿ ಸಕಲ ಸಮುದಾಯದ ಉನ್ನತಿಗಾಗಿ ಸದಾ ಶ್ರಮಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಶಿವನ ಸದ್ಯೋಜಾತ ಮುಖದಿಂದ ಆವಿರ್ಭವಿಸಿ ಫಾಲ್ಗುಣ ಶುದ್ಧ ತ್ರಯೋದಶಿಯಂದು ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಮಹಾಲಿಂಗದಿಂದ ಅವತರಿಸಿ ಆಧ್ಯಾತ್ಮ ಲೋಕಕ್ಕೆ ಅಮೂಲ್ಯ ಕೊಡುಗೆ ಕೊಟ್ಟ ಪರಮಾಚಾರ್ಯರ ಆದರ್ಶಗಳನ್ನು ಅಳವಡಿಸಿಕೊಂಡು ಶ್ರೇಷ್ಠವಾದ ಬದುಕನ್ನು ಕಟ್ಟಿಕೊಳ್ಳಬೇಕಾಗಿದೆ ಎಂದರು. ಇದೇ ಸಂದರ್ಭದಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಗೈದ ಅಂಗವಿಕಲೆ ಡಾ॥ ಮಹಾಜಬೀನ ಎಸ್.ಮಧುರಕರ ಇವರಿಗೆ 2024ನೇ ಸಾಲಿನ ಶ್ರೀ ಜಗದ್ಗುರು ರೇಣುಕಾಚಾರ್ಯ ಅತ್ಯುನ್ನತ ಪ್ರಶಸ್ತಿಯನ್ನು ಪ್ರದಾನ ಮಾಡಿ ಶುಭ ಹಾರೈಸಿದರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪ್ರಶಸ್ತಿ ವಾಚನ ಮಾಡಿದರು. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ॥ಮಹಾಜಬೀನ ಮಾತನಾಡಿ ನನ್ನ ಜೀವನದ ಇತಿಹಾಸದಲ್ಲಿ ಅವಿಸ್ಮರಣೀಯವಾಗಿ ಉಳಿಯುವ ಪುಣ್ಯ ದಿನ. ವೈದ್ಯಕೀಯ ಕ್ಷೇತ್ರದಲ್ಲಿ ಶ್ರಮಿಸಿದ ಪ್ರತಿಫಲವಾಗಿ ಗುರು ಪೀಠದಿಂದ ಅತ್ಯುನ್ನತ ಪ್ರಶಸ್ತಿ ಪ್ರಾಪ್ತವಾಗಿರುವುದು ಸಂತೋಷ ತಂದಿದೆ. ಅಂಗವಿಕಲರ ಬಾಳಿನ ಉಜ್ವಲತೆಗಾಗಿ ಸದಾ ಶ್ರಮಿಸುವ ಸಂಕಲ್ಪ ಕೈಕೊಂಡು ಕಾರ್ಯ ಮಾಡುವೆ. ಗುರು ಹಿರಿಯರ ಆಶೀರ್ವಾದ ಜನ್ಮ ನೀಡಿದ ತಂದೆ ತಾಯಿ ಅವರ ಕೃಪಾಕಾರುಣ್ಯದ ಆಶೀರ್ವಾದ ಸದಾ ನನ್ನ ಬಾಳಿಗೆ ನೆರಳಾಗಿರಲೆಂದು ಪ್ರಾರ್ಥಿಸಿ ಅಂಗವಿಕಲತೆ ಒಂದು ಶಾಪವಲ್ಲ. ಅದನ್ನು ಮೆಟ್ಟಿ ನಿಂತು ಸಾಧಿಸುವ ಛಲ ಇರಲಿ. 2016ರಲ್ಲಿ ದಾವಣಗೆರೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದ ನಂತರ ತಮ್ಮ ಜೀವನದಲ್ಲಿ ಉನ್ನತ ಬದಲಾವಣೆಯಾಗಿದೆ ಎಂದರು.

ಗೌರಿಗದ್ದೆ ಅವಧೂತ ಆಶ್ರಮದ ವಿನಯ ಗುರೂಜಿ ಮಾತನಾಡಿ ರಂಭಾಪುರಿ ಪೀಠದ ಧರ್ಮ ಆದರ್ಶ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಶ್ವ ಬಂಧುತ್ವದ ವಿಚಾರ ಧಾರೆಗಳು ನಮ್ಮೆಲ್ಲರ ಬಾಳಿಗೆ ಬೆಳಕು ನೀಡುತ್ತವೆ ಎಂದರು. ಅಮ್ಮಿನಭಾವಿ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ರೇಣುಕ ಅನ್ನುವ ನಾಮಾಂಕಿತದಲ್ಲಿ ಅದ್ಭುತ ಶಕ್ತಿಯಿದೆ. ಜೀವನ ಸಂಕುಲನದ ಉನ್ನತಿಗಾಗಿ ಅವರು ಕೊಟ್ಟ ವಿಚಾರ ಧಾರೆಗಳು ಎಂದೆಂದಿಗೂ ಅಮರವಾಗಿವೆ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು. ಬದುಕಿನ ಕತ್ತಲೆ ಕಳೆಯಲು ಶ್ರೀ ಜಗದ್ಗುರು ರೇಣುಕಾಚಾರ್ಯರ ಚಿಂತನೆಗಳ ಪರಿಪಾಲನೆ ಅವಶ್ಯಕವಾಗಿವೆ ಎಂದರು. ಶೃಂಗೇರಿ ಶಾಸಕ ಟಿ.ಡಿ. ರಾಜೇಗೌಡರು ಸಮಾರಂಭವನ್ನು ಉದ್ಘಾಟಿಸಿದರು. ಎಮ್ಮಿಗನೂರು ವಾಮದೇವ ಮಹಂತ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಪ್ರಾಸ್ತಾವಿಕ ನುಡಿದರು. ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಂಗಮೇಶ ಉತ್ತಂಗಿ ವಿರಚಿತ 'ನಾದಲೀಲೆ' ಕೃತಿ ಬಿಡುಗಡೆ ಮಾಡಿದರು.

ಸುಳ್ಳ, ಮಳಲಿ, ನೆಗಳೂರು, ತಡವಲಗಾ, ಮಸ್ಕಿ, ಅಚಲೇರಿ, ದೇವಾಪುರ, ಬೀರೂರು, ಕಾರ್ಜವಳ್ಳಿ, ಕಡೆನಂದಿಹಳ್ಳಿ, ಚಳಗೇರಿ, ಸಂಗೊಳ್ಳಿ, ಚನ್ನಗಿರಿ, ಕಲಾದಗಿ, ಮದ್ದರಕಿ, ಬಿಳಕಿ, ಕಡೆಚೂರು, ದೇವರಗುಡ್ಡ, ಕೊಡನರು, ಕೆಂಭಾವಿ, ದೋರನಹಳ್ಳಿ, ಶ್ರೀನಿವಾಸ ಸರಡಗಿ, ಹಿರೇವಡ್ಡಟ್ಟಿ, ನಾಗಲಪುರ, ತೊನಸನಹಳ್ಳಿ, ಹಿರೆಮಲ್ಲನಕೇರಿ, ಅಡ್ನೂರು, ಚಿಮ್ಮಲಗಿ, ಸಾಸನೂರು, ಸಿಂದಗಿ, ತಡವಲಗಾ, ಧನಗೂರು, ದೇವರಹಿಪ್ಪರಗಿ, ಹೆಬ್ಬಾಳ, ಚಾಮರಾಜನಗರ, ಮಾವಿನಹಳ್ಳಿ, ಹಿರೇಮಲ್ಲನಕೇರಿ ಶ್ರೀಗಳು ಪಾಲ್ಗೊಂಡಿದ್ದರು.

ಲೆಕ್ಕ ಪರಿಶೋಧಕ ಎಂ.ಸದಾಶಿವಪ್ಪ ಬೆಂಗಳೂರು, ಮಮತಾ ನಾಗರಾಜ್ ಕೂಡ್ಲಿಗೆರೆ, ಚಿಕ್ಕಮಗಳೂರಿನ ಹೆಚ್.ಎಂ. ಲೋಕೇಶ, ಕೆ.ಆರ್.ಪ್ರಕಾಶ ಕೋಣಂದೂರು ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.ಶಿವಮೊಗ್ಗದ ಕು. ಜಿ.ಜಿ. ರಕ್ಷಿತಾ ಭರತ ನಾಟ್ಯ ಪ್ರದರ್ಶಿಸಿದರು. ಹುಬ್ಬಳ್ಳಿಯ ಪ್ರಕಾಶ ಬೆಂಡಿಗೇರಿ ಸ್ವಾಗತಿಸಿದರು. ಗದಗಿನ ಸಂಗಮೇಶ ಉತ್ತಂಗಿ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ನಿರೂಪಿಸಿದರು. ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ಹಾಗೂ ಹಗರಿಬೊಮ್ಮನಹಳ್ಳಿ ಶಾಸಕ ನೇಮಿನಾತ ನಾಯ್ಕ ಶ್ರೀ ಪೀಠಕ್ಕೆ ಆಗಮಿಸಿ ಶ್ರೀ ರಂಭಾಪುರಿ ಜಗದ್ಗುರುಗಳ ಅಶೀರ್ವಾದ ಪಡೆದರು.

ರಥೋತ್ಸವ: ಸಮಾರಂಭದ ನಂತರ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ಚಾಲನೆ ನೀಡಿದರು. ರಥೋತ್ಸವ ಸಹಸ್ರಾರು ಭಕ್ತರ ಜಯಘೋಷದೊಂದಿಗೆ ಸಂಭ್ರಮದಿಂದ ಜರುಗಿತು.

## ಜೋಳದ ಕಡ್ಡಿ ಮೆದೆ ಭಸ್ಮ



**ಚಾಮರಾಜನಗರ :** ಆಕಸ್ಮಿಕ ಬೆಂಕಿ ಅನಾಹುತಕ್ಕೆ ಜಮೀನಿನಲ್ಲಿದ್ದ ಜೋಳದ ಕಡ್ಡಿ ಮೆದೆ ಸಂಪೂರ್ಣವಾಗಿ ಭಸ್ಮವಾಗಿರುವ ಘಟನೆ ಚಾಮರಾಜನಗರ ತಾಲ್ಲೂಕಿಮ ದೊಡ್ಡರಾಯಪೇಟೆ ಗ್ರಾಮದಲ್ಲಿ ಶುಕ್ರವಾರ ಮಧ್ಯಾಹ್ನ ಸಂಭವಿಸಿದೆ. ಚಾಮರಾಜನಗರ ತಾಲ್ಲೂಕಿನ ದೊಡ್ಡರಾಯಪೇಟೆ ಗ್ರಾಮಮದ ಪಾರ್ವತಮ್ಮ, ಹೆಚ್. ಮಹೇಶ್ ಮತ್ತು ಮಲ್ಲಿಕಾರವರಿಗೆ ಸೇರಿದ ಜಮೀನಿನನಲ್ಲಿ ಶುಕ್ರವಾರ ಮಧ್ಯಾಹ್ನ ಆಕಸ್ಮಿಕ ಬೆಂಕಿ ಕೆನ್ನಾಲಿಗೆಗೆ ಜಮೀನಿನಲ್ಲಿ ಶೇಖರಿಸಿದ್ದ ಜೋಳದ ಕಡ್ಡಿ ಮೆದೆ ಭಸ್ಮವಾಗಿ ಸುಮಾರು 25 ಸಾವಿರ ರೂ ನಷ್ಟು ನಷ್ಟವಾಗಿದೆ. ಜೋಳದ ಕಡ್ಡಿ ಮೆದೆ ಜೊತೆಗೆ ಜಮೀನಿನಲ್ಲಿ ಅಳವಡಿಸಲು ಸಂಗ್ರಹಿಸಿದ್ದ ಹನಿ ನೀರಾವರಿ ಪೈಪ್ ಗಳು ಸಹ ಸುಟ್ಟು ಕರಕಲಾಗಿದೆ. ಬೆಂಕಿ ಅವಘಡ ಸಂಭವಿಸಿದ ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿ ಶಾಮಕ ದಳದವರು ಆಗಮಿಸಿ ಬೆಂಕಿ ನಂಧಿಸಿದರು.

## ಪ್ರಜಾಪ್ರಭುತ್ವ ಬಲವರ್ಧನೆಗೆ ಮತ ಚಲಾಯಿಸಿ



**ಚಾಮರಾಜನಗರ:** ಭಾರತವು ವಿಶ್ವದ ಅತೀ ದೊಡ್ಡದಾದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ್ದು, ಈ ಪ್ರಜಾಪ್ರಭುತ್ವದ ಜೀವಾಳವೇ ಮತದಾನವಾಗಿದೆ. ಎಲ್ಲರೂ ತಪ್ಪದೇ ಮತ ಚಲಾಯಿಸಿ ಮತ್ತು ಮತದಾನ ಮಾಡಲು ಪ್ರೇರೇಪಿಸಿ ಎಂದು ಹನೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರ ಉಮೇಶ್ ಅವರು ತಿಳಿಸಿದರು.

ಹನೂರು ತಾಲೂಕಿನಲ್ಲಿ ತಾಲೂಕು ಪಂಚಾಯಿತಿ ಮತ್ತು ತಾಲೂಕು ಸ್ವೀಪ್ ಸಮಿತಿ ವತಿಯಿಂದ 2024ರ ಲೋಕಸಭಾ ಚುನಾವಣೆಯ ಅಂಗವಾಗಿ ಚುನಾವಣಾ ಪರ್ವ ದೇಶದ ಗರ್ವ ಎಂಬ ಘೋಷವಾಕ್ಯದೊಂದಿಗೆ ಮಲೆ ಮಹದೇಶ್ವರ ಬೆಟ್ಟದ ಮುಖ್ಯ ರಸ್ತೆಯಿಂದ ತಾಳುಬೆಟ್ಟದ ಶ್ರಮದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿವರಾತ್ರಿ ಜಾತ್ರೆಯಲ್ಲಿ ಹೆಚ್ಚು ಭಕ್ತರ ಭೇಟಿಯಿಂದಾಗಿ, ಪಾದಯಾತ್ರೆಯ ಸಂದರ್ಭದಲ್ಲಿ ಸುಮಾರು 25 ಕಿ.ಮೀ ವರೆಗೂ ಪ್ಲಾಸ್ಟಿಕ್, ಇತರೆ ತ್ಯಾಜ್ಯಗಳು ಹೆಚ್ಚು ಇವೆ. ಕಸವನ್ನು ವಿಂಗಡಣೆ ಮಾಡುವುದರ ಜೊತೆಗೆ ಸಾರ್ವಜನಿಕರಲ್ಲಿ ಮತಚಲಾಯಿಸುವಂತೆ ಅರಿವು ಮೂಡಿಸಬೇಕು ಎಂದರು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಮತದಾನದಿಂದ ಯಾರು ದೂರ ಉಳಿಯಬೇಡಿ. ಯಾರು ಸಹ ಆಮಿ?ಗಳಿಗೆ ಒಳಗಾಗಬಾರದು. ದೇಶ ಅಭಿವೃದ್ಧಿ ಪಥದತ್ತಾ ಸಾಗಲು ನಿಮ್ಮ ಹಕ್ಕು ಚಲಾಯಿಸಬೇಕು ಎಂದು ಉಮೇಶ್ ಅವರು ತಿಳಿಸಿದರು. ಇದೇ ಸಂಧರ್ಭದಲ್ಲಿ ಸಹಾಯಕ ನಿರ್ದೇಶಕರಾದ ರವೀಂದ್ರ ಅವರು ಮತದಾನ ಕುರಿತ ಪ್ರತಿಜ್ಞಾ ವಿಧಿ ಬೋಧಿಸಿದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಗೋವಿಂದಪ್ಪ, ಶಿವಣ್ಣ, ಸುರೇಶ, ರಾಮು, ಮಾದೇಶ ನಂದೀಶ, ಪುಷ್ಪಲತಾ, ಸಿದ್ದಪ್ಪ, ಇತರರು ಈ ಸಂಧರ್ಭದಲ್ಲಿ ಹಾಜರಿದ್ದರು.



ತಿಪಟೂರು ದೊಡ್ಡಪೇಟೆಯಲ್ಲಿರುವ ಬಸವೇಶ್ವರ ದೇವಾಲಯದಲ್ಲಿ ರೇಣುಕ ಜಯಂತಿ ಬಹಳ ಶ್ರದ್ದಾ ಭಕ್ತಿಯಿಂದ ಆಚರಣೆ ಮಾಡಿ ನೆರದಿದ್ದ ಭಕ್ತಾದಿಗಳಿಗೆ ಪಾನಕ-ಫಲಾಹಾರ, ಪ್ರಸಾದ ವಿನಿಯೋಗವನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಬಿಲ್ವರಾಜು, ಬಸವರಾಜು, ವೋಡಫೋನ್ ಚಂದ್ರು, ಮತ್ತಿತ್ತರು ಹಾಜರಿದ್ದರು.

## ಅಂಗಡಿಗಳಲ್ಲಿ ಕನ್ನಡ ನಾಮಫಲಕ ಕಡ್ಡಾಯ

**ಚಾಮರಾಜನಗರ:** ನಗರಸಭೆ ವ್ಯಾಪ್ತಿಯ ಅಂಗಡಿಗಳು ಕನ್ನಡ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕೆಂದು ನಗರಸಭೆ ಪೌರಾಯುಕ್ತ ರಾಮದಾಸ್ ತಿಳಿಸಿದರು. ನಗರದ ಅಂಗಡಿಬೀದಿಯಲ್ಲಿ ಗುರುವಾರ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಕರ್ನಾಟದಲ್ಲಿ ಕನ್ನಡವೇ ಸಾರ್ವಭೌಮ.ಅಂಗಡಿಗಳಲ್ಲಿ ಕನ್ನಡ ನಾಮಲಕ ಹಾಕಬೇಕು. ಈ ಹಿನ್ನೆಲೆಯಲ್ಲಿ ನಗರಸಭೆ ವ್ಯಾಪ್ತಿಯ ಅಂಗಡಿಗಳಲ್ಲಿ ಕನ್ನಡ ನಾಮಲಕ ಅಳವಡಿಸಬೇಕು. ಆದರೆ ನಗರದ ಕೆಲವು ಮೊಬೈಲ್ ಅಂಗಡಿಗಳು, ದೊಡ್ಡ ಶೋರೂಂಗಳೂ ಇಂಗ್ಲೀಷ್ ಭಾಷೆಯಲ್ಲಿ ಬೋರ್ಡ್‌ಗಳನ್ನ ಹಾಕಿಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಅಂಗಡಿ ಮಾಲೀಕರಿಗೆ ಸೂಚನೆ ನೀಡಲಾಗುತ್ತಿದೆ ಎಂದರು. ಕಂದಾಯ ಅಧಿಕಾರಿ ಶರವಣ, ಹಿರಿಯ ಆರೋಗ್ಯ ನಿರೀಕ್ಷಕ ಮಂಜು, ಪರಿಸರ ಇಂಜಿನಿಯರ್ ಗಿರಿಜಾ ಹಾಜರಿದ್ದರು.



## ತಮಿಳುನಾಡು ಸರ್ಕಾರ ವಜಾಗೊಳಿಸುವಂತೆ ಮನವಿ

**ಚಾಮರಾಜನಗರ:** ಲೋಕಸಭಾ ಚುನಾವಣೆಯಲ್ಲಿ 'ಇಂಡಿಯಾ' ಗೆದ್ದರೆ ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ತಡೆಯೊಡ್ಡುವುದಾಗಿ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿರುವ ತಮಿಳು ಸರ್ಕಾರವನ್ನು ವಜಾಗೊಳಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾಪಡೆ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.



ತಮಿಳುನಾಡು ಸರ್ಕಾರ ಲೋಕಸಭೆಯ ಚುನಾವಣೆಯ ಸಂಬಂಧ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದು ಇದರಲ್ಲಿ ಪ್ರಮುಖವಾಗಿ ಇಂಡಿಯಾ ಕೂಟ ಅಧಿಕಾರಕ್ಕೆ ಬಂದರೆ ಕರ್ನಾಟಕ ರಾಜ್ಯದಲ್ಲಿರುವ ಮೇಕೆದಾಟು ಯೋಜನೆಯನ್ನು ನಾವು ಮಾಡಲು ಬಿಡುವುದಿಲ್ಲವೆಂದು ಹೇಳಿರುವುದು ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ಅತ್ಯಂತ ಖಂಡಿನೀಯವಾಗಿದೆ. ಚುನಾವಣೆಯ ಸಂದರ್ಭದಲ್ಲಿ ಬೇರೆ ರಾಜ್ಯದ ಕುಡಿಯುವ ನೀರಿನ ಯೋಜನೆಯ ಬಗ್ಗೆ ಮಾತನಾಡಿರುವುದು ಚುನಾವಣಾ ನೀತಿಯನ್ನು ತಮಿಳುನಾಡು ಸರ್ಕಾರ ಉಲ್ಲಂಘನೆ ಮಾಡಿದೆ. ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲೀನ್ ಅವರು ಅಗೌರವವನ್ನು ತೋರಿಸಿದ್ದಾರೆ. ಕರ್ನಾಟಕ ರಾಜ್ಯದ ಮೇಕೆ ದಾಟು ಯೋಜನೆ ಅನುಷ್ಠಾನಗೊಂಡರೆ ಕರ್ನಾಟಕ ರಾಜ್ಯದ ಅನೇಕ ಜಿಲ್ಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಸಿಗುತ್ತದೆ. ಮತ್ತು ಕುಡಿಯುವ ನೀರಿನ ಯೋಜನೆಗೆ ಯಾವುದೇ ಕಾರಣಕ್ಕೂ ಯಾವುದೆ ಸರ್ಕಾರವಾಗಲಿ, ಯಾವುದೇ ವ್ಯಕ್ತಿಯಾಗಲಿ ಅಡ್ಡಿಪಡಿಸಲು ಸಾಧ್ಯವಿಲ್ಲ. ಇದು ಸ್ಪಷ್ಟವಾಗಿ ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ಕುಡಿಯುವ ನೀರಿನ ಹಕ್ಕು ಪ್ರತಿಯೊಬ್ಬರಿಗೂ ಇದೆ. ಆದರೆ ಇಷ್ಟೆಲ್ಲಾ ಗೊತ್ತಿದ್ದರೂ ತಮಿಳುನಾಡು ಸರ್ಕಾರ ತನ್ನ ಚುನಾವಣೆ ಪ್ರಣಾಳಿಕೆಯಲ್ಲಿ ಇಂತಹ ಹೇಳಿಕೆ ನೀಡಿರುವುದು ಅತ್ಯಂತ ಖಂಡನೀಯವಾಗಿದೆ.

ತಮಿಳುನಾಡು ಸರ್ಕಾರವನ್ನು ವಜಾ ಮಾಡಿ ತಮಿಳುನಾಡಿನಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಬೇಕು. ತಮಿಳುನಾಡು ಸರ್ಕಾರ ಧೋರಣೆಯನ್ನು ಚುನಾವಣಾ ಆಯೋಗಕ್ಕೆ ತಿಳಿಸಿ ಕ್ರಮಕೈಗೊಳ್ಳಬೇಕು ಎಂದು ಮನವಿಯಲ್ಲಿ ಚಾ.ರಂ.ಶ್ರೀನಿವಾಸಗೌಡ ಒತ್ತಾಯಿಸಿದ್ದಾರೆ. ಪುರುಷೋತ್ತಮ್, ಗಡಿನಾಡು ಕನ್ನಡ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಚಾ.ರಾ.ಕುಮಾರ್, ಶ್ರೀಗಂಧ ಕನ್ನಡ ಯುವವೇದಿಕೆ ಅಧ್ಯಕ್ಷ ರವಿಚಂದ್ರಪ್ರಸಾದ್ ಕಹಳೆ ಹಾಜರಿದ್ದರು.

# ಮತದಾನದ ಅರಿವು ಮೂಡಿಸಿ

## ಸಹಾಯಕ ಚುನಾವಣಾಧಿಕಾರಿ ಮೂಡಾ ಕಾರ್ಯದರ್ಶಿ ಜೆ.ಡಿ.ಶೇಖರ್ ಸಲಹೆ

**ಪಿರಿಯಾಪಟ್ಟಣ :** ತಾಲೂಕಿನಲ್ಲಿ ಅತಿಕಡಿಮೆ ಮತದಾನ ಆಗಿರುವ ಕೇಂದ್ರಗಳಲ್ಲಿ ಈ ಬಾರಿ ಲೋಕಸಭಾ ಚುನಾವನೆಯಲ್ಲಿ ಹೆಚ್ಚಿನ ಮತದಾನವಾಗುವಂತೆ ಸ್ವೀಪ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದು ಪಿರಿಯಾಪಟ್ಟಣ ಸಹಾಯಕ ಚುನಾವಣಾಧಿಕಾರಿ ಮೂಡಾ ಕಾರ್ಯದರ್ಶಿ ಜಿ.ಡಿ.ಶೇಖರ್ ತಿಳಿಸಿದರು.

ಪಿರಿಯಾಪಟ್ಟಣದ ತಾಲೂಕು ಆಡಳಿತ ಭವನದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಅಂತಿಮ ಮತದಾರರ ಪಟ್ಟಿಯಂತೆ 210-ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 235 ಮತಗಟ್ಟೆಗಳು ಇದ್ದು 195 ಜಾಗಗಳಲ್ಲಿ ಕೇಂದ್ರಕೃತವಾಗಿರುತ್ತವೆ. ಒಟ್ಟು 97942 ಪುರುಷ ಮತದಾರರು, 98090 ಮಹಿಳಾ ಮತದಾರರು, 4 ತೃತೀಯ ಲಿಂಗ ಮತದಾರರು, ಒಟ್ಟು 196036 ಮತದಾರಿದ್ದಾರೆ. ಇದರಲ್ಲಿ 18-19ವರ್ಷದ ಒಟ್ಟು 4527 ಯುವ ಮತದಾರರಿದ್ದಾರೆ ಎಂದು ತಿಳಿಸಿದರು.

ಹಾಗೂ ಕಳದ ಮತದಾರರ ಪಟ್ಟಿ ಪರಿಷ್ಕರಣೆ ಸಮಯದಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಯಾದ ಮತದಾರರಿಗೆ ಚುನಾವಣಾ ಆಯೋಗವು ಎಪಿಕ್(ಗುರುತಿನ ಚೀಟಿ) ಗಳನ್ನು ಪೋಸ್ಟ್ ಮುಖಾಂತರ ಮತದಾರರ ವಿಳಾಸಕ್ಕೆ ನೇರವಾಗಿ ಕಳಹಿಸಲಾಗುತ್ತಿದೆ. ಮಾ.25ರವರೆಗೂ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಲು ಕಾಲಾವಕಾಶವಿರುತ್ತದೆ ಎಂದು ತಿಳಿಸಿರು.

ಕಳೆದ ಲೋಕಸಭಾ ಚುನಾವಣೆ-2019 ರಲ್ಲಿ 210-ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 78.86% ಪ್ರತಿಶತ ಮತದಾನವಾಗಿದ್ದು, ಕಡಿಮೆ ಮತದಾನ ಪ್ರತಿಶತ ಹೊಂದಿದ ಮತಗಟ್ಟೆಗಳಲ್ಲಿ ಮತದಾನ ಹೆಚ್ಚಿಸಲು ಸದರಿ ಮತಗಟ್ಟೆ ವ್ಯಾಪ್ತಿಯಲ್ಲಿ ಸ್ವೀಪ್ ಕಾರ್ಯಕ್ರಮಗಳನ್ನು ಕೈಗೊಳ್ಳಲು ತಾಲೂಕು ಸ್ವೀಪ್ ಕಮಿಟಿ ಅಧ್ಯಕ್ಷರಾದ ತಾ.ಪಂ.ಇಒಗೆ ಸೂಚಿಸಲಾಗಿರುತ್ತದೆ ಎಂದರು.

ಮಾದರಿ ನೀತಿ ಸಂಹಿತೆ ಸಂಬಂಧಪಟ್ಟಂತೆ 210-ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾ ಅಕ್ರಮಗಳನ್ನು ತಡೆಯಲು ಇಒ ಸುನೀಲ್ ಕುಮಾರ್‌ರನ್ನು ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿರುತ್ತದೆ. ಈಗಾಗಲೇ ಹಲಗನಹಳ್ಳಿ. ಕೆಲ್ಲೂರು, ಕಿತ್ತೂರು ಗ್ರಾಮಗಳಲ್ಲಿ 03 ಚೆಕ್‌ಪೋಸ್ಟ್ ಗಳನ್ನು ತೆರೆಯಲಾಗಿರುತ್ತದೆ. ಹಾಗೂ ಹೋಬಳಿವಾರು 01 ಫ್ಲೈಯಿಂಗ್ ಸ್ವಾಡ್ (ಒಟ್ಟು 04) ತಂಡಗಳು 03 ಪಾಳಿಗಳಲ್ಲಿ ಗಸ್ತು ಆರಂಭಿಸಿರುತ್ತವೆ. ಇನ್ನೂವರೆಗೂ ಯಾವುದೇ ಅಕ್ರಮ ಹಣ ವಶ ಪಡಿಸಕೊಂಡಿರುವುದಿಲ್ಲ ಆದರೆ 7460 ರೂ ಮೌಲ್ಯದ ಅಂದಾಜು 16 ಲೀಟರ್‌ನಷ್ಟು ಮದ್ಯವನ್ನು ವಶಪಡಿಸಿಕೊಳ್ಳಲಾಗಿರುತ್ತದೆ.

ಮತದಾನ ಕಾರ್ಯಕ್ಕಾಗಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದ್ದು, ಈಗಾಗಲೇ ಮನೆಯಿಂದ ಮತದಾನ ಮಾಡಲಿಚ್ಚಿಸುವ 85+ ಅಡಿ ಯಲ್ಲಿ ಒಟ್ಟು 2795, ಅಗತ್ಯಸೇವೆ ಗೈರು ಅಡಿಯಲ್ಲಿ 3465 ಮತದಾರರನ್ನು ಗುರುತಿಸಲಾಗಿದ್ದು. ಸದರಿರವರಿಗೆ ನಮೂನೆ 12-ಡಿ ಅರ್ಜಿಗಳನ್ನು ವಿತರಿಸುವ ಕಾರ್ಯ ನಡೆಯುತ್ತಿದೆ.ಅಂತಿಮವಾಗಿ ಮತಗಟ್ಟೆಗೆ ಬಂದು ಮತ ಚಲಾಯಿಸುವ ಹಾಗೂ ಮನೆಯಲ್ಲೇ ಮತ ಚಲಾಯಿಸುವ ಆಯ್ಕೆಯನ್ನು ಸದರಿ ಮತದಾರರಿಗೆ ನೀಡಲಾಗಿರುತ್ತದೆ.

ಚುನಾವಣಾ ಮತಯಂತ್ರಗಳನ್ನು ಭದ್ರತಾ ಕೊಠಡಿಯಲ್ಲಿ ಸಂಗ್ರಹಿಸುವ ಸಲುವಾಗಿ ಪುಷ್ಪ ಕಾನ್ವೆಂಟ್‌ನಲ್ಲಿ ಭದ್ರತಾ ಕೊಠಡಿಯನ್ನು ಸ್ಥಾಪಿಸಲಾಗಿದೆ. ಹಾಗೂ ಮಸ್ಟರಿಂಗ್ ಮತ್ತು ಡಿ- ಮಸ್ಟರಿಂಗ್ ಕಾರ್ಯಕ್ಕಾಗಿ ಇದೇ ಶಾಲಾ ಕಟ್ಟಡವನ್ನು ಬಳಸಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನೂತನ ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ ಸೇರಿದಂತೆ ಮತ್ತಿತರರು ಹಾಜರಿದ್ದರು.



### 3 ಅತೀಸೂಕ್ಷ್ಮ ಮತಗಟ್ಟೆ

**ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದಂತೆ 03 ಮತಗಟ್ಟೆಗಳನ್ನು ಮುತ್ತೂರು (ರಾಜೀವ್ ಗ್ರಾಮ), ಕೋಗಿಲವಾಡಿ, ದೊಡ್ಡಹೊಸೂರು(ರಾಣಿಗೇಟ್) ಅತೀಸೂಕ್ಷ್ಮ, 19 ಮತಗಟ್ಟೆಗಳನ್ನು ಸೂಕ್ಷ್ಮ ಮತಗಟ್ಟೆಗಳನ್ನಾಗಿ ಪೋಲಿಸ್ ವರದಿಯಂತೆ ಗುರುತಿಸಲಾಗಿದೆ. ಹಾಗೂ ಚುನಾವಣಾ ಆಯೋಗದ ಮಾನದಂಡಗಳ ಪ್ರಕಾರ 109 ಮತಗಟ್ಟೆಗಳು ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ತಾಲ್ಲೂಕು ಕಚೇರಿಯಲ್ಲಿ ಚುನಾವಣಾ ಕಂಟ್ರೋಲ್ ರೂಂ ತೆರೆಯಲಾಗಿದ್ದು, 08223-274175 ಈ ನಂಬರ್‌ಗೆ ಮತದಾರರು/ಸಾರ್ವಜನಿಕರು ತಮ್ಮ ಯಾವುದೇ ದೂರು ಗಳನ್ನು ದಾಖಲಿಸಲು 24/7 ಈ ಸಹಾಯವಾಣಿಯು ಚಾಲ್ತಿಯಲ್ಲಿರುತ್ತದೆ. ಮತ್ತು ಚುನಾವಣೆ ಸಲುವಾಗಿ ಸಭೆ ಸಮಾರಂಭ ಗಳಿಗೆ ಅನುಮತಿಗಳನ್ನು ಪಡೆಯಲು ಈ ಕಚೇರಿಯಲ್ಲಿ ಏಕಗವಾಕ್ಷಿ ತಂಡವನ್ನು ರಚಿಸಲಾಗಿದೆ. ಅರ್ಜಿದಾರರು ನೇರವಾಗಿ ಅರ್ಜಿಗಳನ್ನು ಸಲ್ಲಿಸಿದಾಗ ಚುನಾವಣಾ ಆಯೋಗದ ನಿಯಮಗಳಂತೆ ಕಾರ್ಯಕ್ರಮಗಳನ್ನು ಆಯೋಜಿಸಲು ಅನುಮತಿ ನೀಡಲಾಗುವುದು.**

## ಕಾರೇಹಳ್ಳಿಯಲ್ಲಿ ವೈಭವದ ರಂಗನಾಥಸ್ವಾಮಿ ರಥೋತ್ಸವ

**ಹುಳಿಯಾರು :** ಹುಳಿಯಾರು ಹೋಬಳಿಯ ಕಾರೇಹಳ್ಳಿಯ ಪುರಾಣ ಪ್ರಸಿದ್ಧ ಶ್ರೀ ರಂಗನಾಥಸ್ವಾಮಿಯ ಮೂಲಸ್ಥಾನದಲ್ಲಿ ವೈಭವಯುತ ಬ್ರಹ್ಮ ರಥೋತ್ಸವವು ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ವೈಭವದಿಂದ ಶುಕ್ರವಾರ ಜರುಗಿತು.

ಕಳೆದ ಮೂರು ದಿನದಿಂದ ಜಾತ್ರೆ ಅಂಗವಾಗಿ ಸ್ವಾಮಿಗೆ ಕಂಕಣ, ಅಂಕುರಾರ್ಪಣೆ, ಧ್ವಜಾರೋಹಣ, ಉಯ್ಯಾಲೋತ್ಸವ, ಗಜಾರೋಹಣ, ಗರುಡ ವಾಹನೋತ್ಸವ, ಸಂತರ್ಪಣೆ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ವಿಧಿವತ್ತಾಗಿ ನಡೆದಿದ್ದು, ಶುಕ್ರವಾರ ಮುಂಜಾನೆಯಿಂದಲೆ ಬ್ರಹ್ಮ ರಥೋತ್ಸವದ ವಿವಿಧ ಪೂಜಾ ಕೈಂಕರ್ಯ ನಡೆದವು. ರಥೋತ್ಸವದ ಅಂಗವಾಗಿ ರಥವನ್ನು ಬಗೆಬಗೆ ಹೂ ಹಾರ, ಬಾವುಟಗಳಿಂದ ಸಿಂಗರಿಸಿದ್ದಲ್ಲದೆ, ಪುಣ್ಯಾಹ, ಅನ್ನಶಾಂತಿ ಸೇರಿದಂತೆ ವಿವಿಧ ಪೂಜೆಗಳನ್ನು ನಡೆಸಿದ್ದರು.

ನಂತರ ರಂಗನಾಥಸ್ವಾಮಿಯ ಮೂಲಸ್ಥಾನದಿಂದ ಅಲಂಕೃತ ಉತ್ಸವ ಮೂರ್ತಿಯನ್ನು ಯರೇಹಳ್ಳಿಯ ಕೆಂಪಮ್ಮ ಹಾಗೂ ಹೊಯ್ಸಳಕಟ್ಟೆ ಕರಿಯಮ್ಮ, ಕೆಂಚರಾಯ, ಭೂತಪ್ಪ ಹಾಗೂ ನಗಾರಿ ಹೊತ್ತ ಬಸವನೊಂದಿಗೆ ಪೂರ್ಣಕುಂಭ ಹಾಗೂ ವಾದ್ಯ ಮೇಳದೊಂದಿಗೆ ರಥದ ಬಳಿ ಕರೆತಂದು ಸಿಂಗಾರಗೊಂಡ ಸರ್ವಾಲಂಕೃಥ ರಥದಲ್ಲಿ ಶ್ರೀ ಸ್ವಾಮಿಯವರನ್ನು ಪ್ರತಿಷ್ಠಾಪಿಸಿ ಸಹಸ್ರಾರು ಭಕ್ತರು ಉದ್ಘೋಷದೊಂದಿಗೆ ರಥವನ್ನೆಳೆಯಲಾಯಿತು.



ಸುಡುವ ಬಿಸಿಲನ್ನೂ ಲೆಕ್ಕಿಸದೆ ಬೆಳಿಗ್ಗೆಯಿಂದಲೇ ಕಿಕ್ಕಿರಿದು ನೆರೆದಿದ್ದ ಭಕ್ತರು ಜಯಘೋಷದೊಂದಿಗೆ ಸುಮಾರು ಐವತ್ತು ಅಡಿಗೂ ಎತ್ತರದ ರಥವನ್ನು ಎಳೆದರಲ್ಲದೆ ಮಂಡಕ್ಕಿ, ಬಾಳೆಹಣ್ಣುಗಳನ್ನು ರಥಕ್ಕೆ ಎಸೆಯುವ ಮೂಲಕ ತಮ್ಮ ಭಕ್ತಿ ಸಮರ್ಪಿಸಿದರು. ದೂರದೂರುಗಳಿಂದ ಆಗಮಿಸಿದ ಭಕ್ತರು ಸ್ವಾಮಿಗೆ ಹಣ್ಣುಕಾಯಿ ಮಾಡಿಸಿದರು, ಎಲ್ಲೆಲ್ಲೂ ಜಾತ್ರೆಯ ಸಡಗರ ತುಂಬಿ ತುಳುಕುತಿತ್ತು.

## ಗಡಿ ಭಾಗದಲ್ಲಿ ಮದ್ಯ ಮಾರಾಟ ನಿಷೇಧ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಏಪ್ರಿಲ್ 19ರಂದು ತಮಿಳುನಾಡು ರಾಜ್ಯದಲ್ಲಿ ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಶಾಂತ ರೀತಿಯಲ್ಲಿ ಹಾಗೂ ಮುಕ್ತವಾಗಿ ಮತದಾನ ನಡೆಯುವಂತಾಗಲು ತಮಿಳುನಾಡು ರಾಜ್ಯದ ಗಡಿಗೆ ಹೊಂದಿಕೊಂಡಿರುವ ಕರ್ನಾಟಕ ರಾಜ್ಯದ ಚಾಮರಾಜನಗರ ಜಿಲ್ಲೆಯ ಗಡಿಭಾಗದ ವ್ಯಾಪ್ತಿಯ 5 ಕಿ.ಮೀ ವ್ಯಾಪ್ತಿಯಲ್ಲಿ ಬರುವ ಎಲ್ಲ ಮದ್ಯದ ಅಂಗಡಿಗಳನ್ನು ಏಪ್ರಿಲ್ 17ರ ಸಂಜೆ 5 ಗಂಟೆಯಿಂದ ಏಪ್ರಿಲ್ 19ರ ಮಧ್ಯರಾತ್ರಿ 12 ಗಂಟೆಯವರೆಗೆ ಮುಚ್ಚಲು ಹಾಗೂ ಮದ್ಯ ಮಾರಾಟ, ಸಂಗ್ರಹಣೆ, ಹಂಚಿಕೆ ನಿಷೇಧಿಸಿ ಜಿಲ್ಲಾಧಿಕರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

# ನಾಗರಬಾವಿ ತಿರುವಿನ ರಸ್ತೆ ತಡೆಗೋಡೆ ಸರಿಪಡಿಸಿ

**ವಿಜಯಪುರ:** ಪಟ್ಟಣದ ನಾಗರಬಾವಿ ಬಳಿ ಇರುವ ಮುಖ್ಯರಸ್ತೆಯ ತಿರುವಿನ ಬಳಿ ತಡೆಗೋಡೆ ಬಿದ್ದು ಹೋಗಿದ್ದು, ಕೂಡಲೇ ಅದನ್ನು ಸರಿಪಡಿಸಬೇಕೆಂದು ಸಾರ್ವಜನಿಕರು ಸ್ಥಳೀಯ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಕಳೆದ ಎರಡು ವರ್ಷಗಳ ಹಿಂದೆ ಮಳೆಯ ಆರ್ಭಟಕ್ಕೆ ತಡೆಗೋಡೆಯು ಕೊಚ್ಚಿ ಹೋಗಿದ್ದು ಇಲ್ಲಿ ತಡೆಗೋಡೆ ಇಲ್ಲದ ಕಾರಣ ವಾಹನ ಸವಾರರು ಯಾವ ಸಮಯದಲ್ಲಿಯಾದರು ಸ್ವಲ್ಪ ಗಮನ ಬೇರೆ ಕಡೆ ಹೋದರೂ ಪ್ರಾಣ ಹೋಗುವುದು ಕಟ್ಟಿಟ್ಟ ಬುತ್ತಿಯಾಗಿದ್ದು, ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಈ ನಾಗರಬಾವಿಯ ತಡೆಗೋಡೆ ಸರಿಪಡಿಸಬೇಕೆಂದು ತಿಳಿಸಿರುವರು. ಈ ರಸ್ತೆಯು ವಿಜಯಪುರ ಹಾಗೂ ಶಿಡ್ಲಘಟ್ಟ ಮುಖ್ಯ ರಸ್ತೆಯಾಗಿದ್ದು, ಇಲ್ಲಿಗೆ ಪ್ರತಿನಿತ್ಯವೂ ಶಿಡ್ಲಘಟ್ಟ ಹಾಗೂ ಮಳ್ಳುರು, ಮೇಲೂರು, ರಂಗನಾಥಪುರ, ಹೊಸುರು, ಕೊಮ್ಮಸಂದ್ರ, ಪುರ, ಶಟ್ಟಿಹಳ್ಳಿ ಸೇರಿದಂತೆ ಹೆಚ್ಚು ಗ್ರಾಮಗಳಿಂದ ಪಟ್ಟಣಕ್ಕೆ ಬರುತ್ತಿದ್ದು ಇಲ್ಲಿನ ರಸ್ತೆಯೇ ವಿಜಯಪುರ-ಶಿಡ್ಲಘಟ್ಟದ ರಾಜ್ಯ ಮುಖ್ಯ ರಸ್ತೆಯಾಗಿದ್ದು, ಇಲ್ಲಿ ಅತೀವೇಗ ನಿಯಂತ್ರಣ ಫಲಕವು ಸಮೇತ ಈ ರಸ್ತೆಯಲ್ಲಿ ಅಳವಡಿಸದೇ ಇಲ್ಲಿನ ವೇಗ ನಿಯಂತ್ರಣವು ತೆರವು ಗೊಳಿಸಿದ್ದರಿಂದ ಇಲ್ಲಿ ಅಪಘಾತಗಳು ಸಂಭವಿಸುತ್ತಿವೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಬಂದು ಕ್ರಮಕೈಗೊಳಬೇಕು ಎಂದರು.



ಸ್ಥಳೀಯ ಮುನಿರಾಜ್ ವಿ. ಮಾತನಾಡಿ, ಕಳೆದ ಕೆಲ ದಿನಗಳ ಹಿಂದೆ ಪಟ್ಟಣದಿಂದ ಶಿಡ್ಲಘಟ್ಟ ಮುಖ್ಯ ರಸ್ತೆಗೆ ಹೋಗುವ ರಸ್ತೆಯನ್ನು ಅಗಲೀಕರಣ ಮಾಡಿದಾಗ ಚಂದೇನಹಳ್ಳಿ ಗೇಟ್ ಹಾಗೂ ಶೃಂಗೇರಿ ಶಾಲಾ ಬಳಿಯು ಎರಡು ಕಡೆ ಸ್ಪೀಡ್ ಕಟ್ ನಿರ್ಮಾಣವಾಗಿತ್ತು ಆದರೆ ರಸ್ತೆಯ ಡಾಂಬರೀಕರಣ ಹೊಸದಾಗಿ ನಡೆದಾಗ ಸ್ಪೀಡ್ ಕಟ್ ತೆಗೆದ ಕಾರಣ ಇಲ್ಲಿನ ಮುಖ್ಯ ರಸ್ತೆಯಲ್ಲಿ ಅತಿಯಾದ ವೇಗದಿಂದ ಪ್ರತಿನಿತ್ಯವೂ ಅಪಘಾತಗಳು ಸಂಭವಿಸುತ್ತಿದ್ದು, ಕೂಡಲೇ ಈ ರಸ್ತೆಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸ್ಥಳೀಯ ನಿವಾಸಿ ಚಂದೇನಹಳ್ಳಿ ರಮೇಶ್ ಮಾತನಾಡಿ, ಸ್ಥಳೀಯ ಗ್ರಾಮದ ವ್ಯಕ್ತಿಗಳು ನಡೆದು ಹೋಗಬೇಕಾದರೆ ತುಂಬಾ ಕಷ್ಟದ ಪರಿಸ್ಥಿತಿ ಉಂಟಾಗಿದೆ. ಸಮೀಪದಲ್ಲೇ ಶೃಂಗೇರಿ ಶಾರದಾ ಶಾಲೆ ಇರುವುದರಿಂದ ಪ್ರತಿನಿತ್ಯವೂ ನೂರಾರು ಮಕ್ಕಳು ಇದೆ ರಸ್ತೆಯಲ್ಲಿ ಸಂಚರಿಸುತ್ತಾರೆ. ಇಲ್ಲಿ ವಾಹನಗಳ ಅತಿವೇಗದ ಸಂಚಾರದಿಂದ ರಸ್ತೆಯಿಂದ ರಸ್ತೆಗೆ ಹೋಗಲು ಹರಸಾಹಸ ಮಾಡಬೇಕಾಗುತ್ತದೆ. ಸ್ವಲ್ಪ ಯಾಮಾರಿದರೆ ವಾಹನಗಳೆ ಮೃತ್ಯುವಿಗೆ ಆಹ್ವಾನ ನೀಡಿದಂತಾಗುತ್ತದೆ. ಕೂಡಲೇ ಈ ಕಡೆಗೆ ಅಧಿಕಾರಿಗಳು ಗಮನಹರಿಸಬೇಕು ಎಂದು ಒತ್ತಾಯಿಸಿದರು.

ಸ್ಥಳೀಯ ವಿದ್ಯಾರ್ಥಿ ಮನು ಮಾತನಾಡಿ, ಶಾಲೆಯು ಮುಖ್ಯ ರಸ್ತೆಯ ಸಮೀಪವಿರುವುದರಿಂದ ಇಲ್ಲಿನ ರಸ್ತೆಯಲ್ಲಿ ಅತಿವೇಗದ ವಾಹನಗಳ ಸಂಚಾರದಿಂದ ಮಕ್ಕಳಿಗೆ ತುಂಬಾ ಕಷ್ಟವಾಗುತ್ತಿದ್ದು ಹಿಂದೆ ಇಲ್ಲಿನ ರಸ್ತೆಯಲ್ಲಿ ವೇಗ ನಿಯಂತ್ರಣ ಇದ್ದು, ಯಾವುದೇ ತೊಂದರೆಗಳು ಸಂಭವಿಸುತ್ತಿರಲ್ಲಿಲ್ಲ. ಇಂದು ರಸ್ತೆಯ ಅಗಲೀಕರಣದಿಂದ ವೇಗ ನಿಯಂತ್ರಣ ತೆರವುಗೊಳಿಸಿದ್ದು ಕಾರಣದಿಂದ ಅಪಘಾತಗಳು ಹೆಚ್ಚಾಗುತ್ತೆವೆ ಎಂದರು.

## ಮತದಾನ ಹಿನ್ನೆಲೆ : ಮದ್ಯ ಮಾರಾಟ ನಿಷೇಧ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಏಪ್ರಿಲ್ 26 ರಂದು ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಜಿಲ್ಲೆಯ ಎಲ್ಲಾ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯೊಳಗೆ ಬರುವ ನಗರ ಮತ್ತು ಗ್ರಾಮೀಣ ಪ್ರದೇಶ ಒಳಗೊಂಡಂತೆ ಪೂರ್ಣ ಜಿಲ್ಲಾ ವ್ಯಾಪ್ತಿಯೊಳಗೆ ಏಪ್ರಿಲ್ 24ರ ಸಂಜೆ 5 ಗಂಟೆಯಿಂದ ಏಪ್ರಿಲ್ 26ರ ಮಧ್ಯರಾತ್ರಿ 12 ಗಂಟೆಯವರೆಗೆ ಎಲ್ಲಾ ರೀತಿಯ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

ಸೂಚಿತ ಅವಧಿಯಲ್ಲಿ ಎಲ್ಲಾ ರೀತಿಯ ಮದ್ಯದ ಅಂಗಡಿಗಳನ್ನು ಮುಚ್ಚುವಂತೆ ಹಾಗೂ ಯಾವುದೇ ರೀತಿಯ ಮದ್ಯ ತಯಾರಿಕೆ, ಮಾರಾಟ, ಸಾಗಾಣಿಕೆ, ಸರಬರಾಜು ಮತ್ತು ಹಂಚಿಕೆಯನ್ನು ನಿಷೇಧಿಸಿ ಒಣ ದಿವಸವೆಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶಿಸಿದ್ದಾರೆ.

# ಜಲ ಮೂಲಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ; ಚಿತ್ರ ಕುಮಾರ್

**ವಿಜಯಪುರ:** 2023-24ನೇ ಸಾಲಿನಲ್ಲಿ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸಂಸ್ಥೆಯ ವತಿಯಿಂದ ಜಲಮೂಲಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ರಾಷ್ಟ್ರೀಯ ಅಧ್ಯಕ್ಷರಾದ ಚಿತ್ರ ಕುಮಾರ್ ತಿಳಿಸಿದರು.

ಇಲ್ಲಿಗೆ ಸಮೀಪದ ದಿನ್ನೂರು ಗ್ರಾಮದಲ್ಲಿರುವ ವೆಂಕಟೇಶ್ ರವರ ನಿವಾಸದ ಸಭಾಭವನದಲ್ಲಿ ವಿಜಯಪುರ ಟೌನ್ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಲೀಜನ್‌ನ ನೂತನ ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭವನ್ನು ಉದ್ಘಾಟಿಸಿ, ಮಾತನಾಡುತ್ತಿದ್ದರು.

ಹಲವಾರು ಸಮಾಜ ಸೇವಾ ಕಾರ್ಯಕ್ರಮಗಳಲ್ಲಿ ತೊಡಗಿಕೊಂಡಿರುವ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸಂಸ್ಥೆಯ ರಾಷ್ಟ್ರೀಯ ಗುರಿ ಪರಿಸರ ಸಂರಕ್ಷಣೆ, ಪ್ಲಾಸ್ಟಿಕ್ ನಿರ್ಮೂಲನೆ, ಸಸಿ ನೆಡುವಿಕೆ ಹಾಗೂ ನೀರಿನ ಸ್ವಚ್ಛತಾ ಕಾರ್ಯಕ್ರಮವಾಗಿರುತ್ತದೆ ಎಂದು ತಿಳಿಸಿದರು.

ಸಂಸ್ಥೆಯು ಕಳೆದ 27 ವರ್ಷಗಳಿಂದ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದು, ಸಮಾಜದ ದುರ್ಬಲ ವರ್ಗದ ಅಗತ್ಯಗಳಿಗೆ ಅನುಗುಣವಾಗಿ 400 ಮಂದಿಗೂ ಹೆಚ್ಚು ಗಾಲಿ ಕುರ್ಜಿಗಳನ್ನು, 250ಕ್ಕೂ ಹೆಚ್ಚು ಮಂದಿಗೆ ಕೃತಕ ಕಾಲುಗಳ ಜೋಡಣೆ, ಮಹಿಳಾ ಸಬಲೀಕರಣಕ್ಕಾಗಿ ಹೆಚ್ಚು ಮಂದಿಗೆ ಹೊಲಿಗೆ ಯಂತ್ರಗಳ ವಿತರಣೆ, ಬಡ ವಿದ್ಯಾರ್ಥಿಗಳಿಗೆ ಬೋಧನಾ ಸಲಕರಣೆಗಳು ಹಾಗೂ ವೃತ್ತಿಪರ ಕೋರ್ಸ್ ವಿದ್ಯಾರ್ಥಿಗಳಿಗೆ ತಲಾ ಹತ್ತು ಸಾವಿರದಂತೆ ವಿದ್ಯಾರ್ಥಿ ವೇತನ ನೀಡುವಿಕೆ ಮಾಡುತ್ತಾ ಬಂದಿದ್ದು, ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸಮಾಜದಲ್ಲಿ ತನ್ನದೇ ಛಾಪನ್ನು ಮೂಡಿಸಿದೆ ಎಂದು ತಿಳಿಸಿದರು.



ನೂತನ ಅಧ್ಯಕ್ಷರಾಗಿ ಸೀನಿಯರ್ ಚೇಂಬರ್‌ನ ಅಧಿಕಾರ ಸ್ವೀಕರಿಸಿದ ಕೆ. ವೆಂಕಟೇಶ್ ಅವರು ಮಾತನಾಡುತ್ತಾ, 1999 ರಲ್ಲಿ ಜೆ.ಸಿ.ಐ ಗೆ ಸೇರ್ಪಡೆಗೊಂಡು, 2006ರಲ್ಲಿ ಜೆಸಿಐನ ಅಧ್ಯಕ್ಷರಾಗಿ ಹತ್ತು ಹಲವಾರು ಸೇವಾ ವಿಭಾಗಗಳಲ್ಲಿ ಪದಕಗಳನ್ನು ಗಳಿಸಿದ್ದು, ಇದೀಗ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಲು ಹೆಮ್ಮೆಯಾಗಿದೆ ಎಂದು ಜೆಸಿಐ ಸಂಸ್ಥೆಯು ಸಮಾಜದಲ್ಲಿ ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು. ಸೀನಿಯರ್ ಛೇಂಬರ್‌ನ ನಿರ್ಗಮಿತ ಅಧ್ಯಕ್ಷರಾದ ಎಂ.ಶಿವಕುಮಾರ್‌ರವರು ಮಾತನಾಡಿ, ತಮ್ಮ ಅಧಿಕಾರ ಅವಧಿಯಲ್ಲಿ ಸದಸ್ಯರುಗಳ ಸಹಕಾರದಿಂದ ನೂತನ ವಾಗಿ ದೇವನಹಳ್ಳಿ, ಶಿಡ್ಲಘಟ್ಟ, ಹೊಸಕೋಟೆ ಲೀಜನ್ ಗಳನ್ನು ಪ್ರಾರಂಭಿಸಿದ್ದು, 2023- 24ನೆಯ ಸಾಲಿನಲ್ಲಿ ನೂರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಉತ್ತಮ ಪ್ರಶಸ್ತಿಗಳನ್ನು ಗಳಿಸಿರುವುದರೊಂದಿಗೆ ಈ ಸಾಲಿನಲ್ಲಿ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ನೂತನ ಕಾರ್ಯದರ್ಶಿಯಾಗಿ ಚಿದಾನಂದ ಮೂರ್ತಿ, ಖಜಾಂಚಿಯಾಗಿ ಎಸ್ ರಮೇಶ್ ಹಾಗೂ ಸಂಸ್ಥೆಗೆ 10 ಮಂದಿ ನೂತನ ಸದಸ್ಯರು ಸೇರ್ಪಡೆಗೊಂಡರು.

ಸಂಸ್ಥೆಯ ವತಿಯಿಂದ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧ್ಯಕ್ಷರಾಗಿ ನೂತನವಾಗಿ ನೇಮಕಗೊಂಡ ಶಾಂತಕುಮಾರ್ ಹಾಗೂ ಸದಸ್ಯರುಗಳಾಗಿ ನೇಮಕಗೊಂಡ ಪ್ರಸನ್ನ, ರಾಮಚಂದ್ರಪ್ಪ, ಸೀನಿಯರ್ ಛೇಂಬರ್‌ನ ನಿರ್ಗಮಿತ ಅಧ್ಯಕ್ಷರಾದ ರಾಷ್ಟ್ರ ಪ್ರಶಸ್ತಿ ವಿಜೇತ ಶಿಕ್ಷಕ ಎಂ ಶಿವಕುಮಾರ್ ರವರುಗಳನ್ನು ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಕಮ್ಯುನಿಟಿ ಡೆವಲಪ್ಮೆಂಟ್ ನಿರ್ದೇಶಕರಾದ ಜಯೇಶ್, ರಾಷ್ಟ್ರೀಯ ಸಂಯೋಜಕರಾದ ಎಂ ಜಯರಾಮ್, ಬೆಂ.ಗ್ರಾ. ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ಬಿ. ರಾಜಣ್ಣ, ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷರಾದ ನಾಗೇಶ್, ಎಸ್.ಪಿ.ಮುನಿರಾಜು, ಸಂಸ್ಥಾಪಕ ಅಧ್ಯಕ್ಷರಾದ ಕೆ. ವಿ. ಬೈರೇಗೌಡ, ನಿಕಟ ಪೂರ್ವ ಅಧ್ಯಕ್ಷರಾದ ವಿ ವೆಂಕಟೇಶ್, ಶ್ರೀಕಂಠಸ್ವಾಮಿ, ಚಿಕ್ಕಬಳ್ಳಾಪುರ ಲೀಜನ್ ಶ್ರೀನಿವಾಸ್, ಮೋಹನ್, ಶಿಡ್ಲಘಟ್ಟ ಲೀಜನ್ ಕೆಂಪಣ್ಣ, ದೇವನಹಳ್ಳಿ ಲೀಜನ್ ಸತೀಶ್ ಕುಮಾರ್, ಜೇಸಿಐ ಅಧ್ಯಕ್ಷರಾದ ಎಂ ಬೈರೇಗೌಡ, ಎಸ್ ಸಿ ಐ ಕಾರ್ಯದರ್ಶಿಗಳಾದ ಕೆ ವಸಂತ್ ಕುಮಾರ್, ಮಾಜಿ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಎಲ್ಲಾ ಪಕ್ಷದ ಮುಖಂಡರುಗಳು ಉಪಸ್ಥಿತರಿದ್ದರು

ಸದಸ್ಯರುಗಳಾದ ಪ್ರಸನ್ನ, ರಾಮಚಂದ್ರಪ್ಪ, ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ರಾಷ್ಟ್ರೀಯ ಅಧ್ಯಕ್ಷರಾದ ಚಿತ್ರ ಕುಮಾರ್ ಮತ್ತಿತರರು ಉಪಸ್ಥಿತರಿರುವರು.

## ಮತದಾನ ಜಾಗೃತಿ ಜಾಥಾ

**ಮೈಸೂರು:** ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ವಾಕಾಥಾನ್ ಕಾರ್ಯಕ್ರಮವನ್ನು ಆಯೋಜಿಸಿದ್ದು, ಶ್ರೀ ೧ ಕೋಟೆ ಅಂಜನೇಯ ಸ್ವಾಮಿ ದೇವಸ್ಥಾನದ ಆವರಣದಿಂದ ಪ್ರಾರಂಭಿಸಿ ವೈದ್ಯರ ಭವನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಕಾಲ್ನಡಿಗೆ ಜಾಥಾ ಮೂಲಕ ಸಮಾಪ್ತಿಗೊಳಿಸಲಾಯಿತು.ಜಾಥಾ ಕಾರ್ಯಕ್ರಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರಾದ ಡಾ. ಪುಷ್ಪಲತಾ.ಬಿ.ಎಸ್ ಅವರು ಉದ್ಘಾಟಿಸಿದರು. ಜಾಥಾ ನಂತರ ವೈದ್ಯರ ಭವನದಲ್ಲಿ ಸ್ವೀಪ್ ಮತದಾನದ ಕುರಿತಂತೆ ಪ್ರಮಾಣ ವಚನ ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪ ನಿರ್ದೇಶಕರಾದ ಡಾ. ವಸಂತ ಕುಮಾರ್, ಇ-ಆಸ್ಪತ್ರೆಯ ನೋಡೆಲ್ ಅಧಿಕಾರಿಗಳು, ವಿಭಾಗೀಯ ಜಂಟಿ ನಿರ್ದೇಶಕರ ಕಛೇರಿಯ ಉಪ ನಿರ್ದೇಶಕರಾದ ಡಾ. ಮಲ್ಲಿಕಾ, ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕರಾದ ಡಾ. ಅಮರನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಕುಮಾರಸ್ವಾಮಿ.ಪಿ.ಸಿ., ಕೆಜಿಎಂಓರು ಅಧ್ಯಕ್ಷರಾದ ಡಾ.ಜಗದೀಶ್. ಸಿ.ಎಂ., ಹಾಗೂ ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ವೈದ್ಯಾಧಿಕಾರಿಗಳು, ಜಿಲ್ಲಾ ಐಇಸಿ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಮೃಗಾಲಯದ ಪ್ರಾಣಿಯ ದತ್ತು ಸ್ವೀಕಾರ

**ಮೈಸೂರು:** ಭಾರತ ಕ್ರಿಕೆಟ್ ತಂಡದ ಆಟಗಾರ್ತಿಯಾದ ವೇದಾಕೃಷ್ಣಮೂರ್ತಿ ಅವರು ಭಾವನಾ ಎಂಬ ಚಿರತೆಯನ್ನು ಮಾ.21ರಿಂದ2025ರವರಿಗೆ ಮತ್ತೊಂದು ವರ್ಷದ ಅವಧಿಗೆ ರೂ. 50000ಗಳನ್ನು ಪಾವತಿಸಿ ದತ್ತು ಸ್ವೀಕಾರ ನವೀಕರಿಸಿರುತ್ತಾರೆ ಎಂದು ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ವಿಂಟಲ್ ರಾಗಿಗೆ 3846 ರೂ ನಿಗಧಿ ಮಾಡಿ ಮಾರ್ಚ್ 11 ರಿಂದ ರಾಗಿ ಖರೀದಿ ಆರಂಭಿಸಿತ್ತಾದರೂ ನಾಲ್ಕೇ ದಿನಕ್ಕೆ ಗ್ರೇಡರ್ ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದರಿಂದ ಗ್ರೇಡರ್ ಇಲ್ಲದೆ ಖರೀದಿ ಪ್ರಕ್ರಿಯೆ ಸ್ಥಗಿತಗೊಂಡಿತ್ತು. ಈಗ ಪುನಃ ಹಿಂದಿದ್ದ ಕೃಷಿ ಇಲಾಖೆಯ ಮಲ್ಲಿಕಾರ್ಜುನ್ ಅವರೇ ಗ್ರೇಡರ್ ಆಗಿ ನಿಯೋಜನೆಗೊಂಡಿದ್ದು ಸ್ಥಗಿತಗೊಂಡ ವಾರದ ಬಳಿಕ ಅಂದರೆ ಶುಕ್ರವಾರ ಪುನಃ ಖರೀದಿ ಪ್ರಕ್ರಿಯೆ ಆರಂಭಗೊಂಡಿದೆ. ಆದರೆ ನಿತ್ಯ 500 ಕ್ವಿಂಟಲ್ ಖರೀದಿ ಮಾತ್ರ ಮಾಡಬೇಕಿರುವುದರಿಂದ ಬೆಳಗ್ಗೆಯಿಂದ ಮಧ್ಯಾಹ್ನದ ವರೆವಿಗೆ ಮಲ್ಲಿಕಾರ್ಜುನ್ ಗ್ರೇಡರ್ ಆಗಿ ಮಧ್ಯಾಹ್ನದ ನಂತರ ದೊಡ್ಡಎಣ್ಣೇಗೆರೆಯ ಚುನಾವಣಾ ಚೆಕ್‌ಪೋಸ್ಟ್‌ನಲ್ಲಿ ಚೆಕಿಂಗ್ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಬೇಕಿದೆ.

# ದಿನಕ್ಕೆ 500 ಕ್ವಿಂಟಾಲ್ ಟಾರ್ಗೆಟ್, ಮಧ್ಯಾಹ್ನಕ್ಕೇ ನಿಂತ ರಾಗಿ ಖರೀದಿ

ಎಚ್.ಬಿ.ಕಿರಣ್‌ಕುಮಾರ್ ಹುಳಿಯಾರು

ಸರ್ಕಾರ ದಿನಕ್ಕೊಂದು ನಿಯಮ ಜಾರಿ ಮಾಡುವ ಮೂಲಕ ರಾಗಿ ಬೆಳೆಗಾರರನ್ನು ಗೋಳಿಟ್ಟುಕೊಳ್ಳುತ್ತಿದೆ. ಇದಕ್ಕೆ ಈಗ ನಿತ್ಯ 500 ಕ್ವಿಂಟಲ್ ಮಾತ್ರ ಖರೀದಿ ಮಾಡುವ ಹೊಸ ನಿಯಮ ಸೇರಿಕೊಂಡಿದೆ. ಇದರಿಂದ ರಾಗಿ ಬೆಳೆಗಾರರು ತಮ್ಮ ರಾಗಿ ಮಾರಲು ಇನ್ನೂ ತಿಂಗಳುಗಟ್ಟಲೆ ಕಾಯಲೇ ಬೇಕಾದ ಅನಿವಾರ್ಯತೆ ಸೃಷ್ಠಿಯಾಗಿದೆ. ಅಲ್ಲದೆ ಹಮಾಲರು ಕೈ ತುಂಬ ಕೂಲಿ ಸಿಗದೆ ಮಧ್ಯಾಹ್ನಕ್ಕೆ ಹಿಂದಿರುಗಬೇಕಿದೆ.

ಹೌದು, ಪ್ರತಿ ವರ್ಷವೂ ರಾಗಿ ಬೆಳೆ ಬಂದ ತಕ್ಷಣ ಬೆಂಬಲಬೆಲೆ ಘೋಷಣೆ ಮಾಡದೆ ಸತಾಯಿಸುತ್ತದೆ. ರೈತರ ಒತ್ತಡಕ್ಕೆ ಮಣಿದು ಘೋಷಣೆ ಮಾಡುತ್ತಾದರೂ ಸೂಕ್ತ ಸಮಯದಲ್ಲಿ ಖರೀದಿ ಮಾಡದೆ ದಿನದೂಡುತ್ತದೆ. ಖರೀದಿ ಆರಂಭವಾದಾಗ ಸಣ್ಣ ಹಿಡುವಳಿದಾರರ, ದೊಡ್ಡ ಹಿಡುವಳಿದಾರ ಎಂದು ಭಿನ್ನಬೇದ ಮಾಡುತ್ತದೆ. 1 ಎಕರೆಗೆ ಇಂತಿಷ್ಟೆ ಕ್ವಿಂಟಲ್ ಖರೀದಿ ಎಂದು ನಿಗದಿ ಮಾಡುತ್ತದೆ. ಈಗ ಹೊಸದಾಗಿ ದಿನಕ್ಕೆ 500 ಕ್ವಿಂಟಲ್ ಮಾತ್ರ ಖರೀದಿ ಮಾಡುವ ನಿಯಮ ಜಾರಿ ಮಾಡಿ ಲೋಕಸಭಾ ಚುನಾವಣೆಯ ಸಮೀಪದಲ್ಲಿ ರೈತರ ಕೆಂಗಣ್ಣಿಗೆ ಗುರಿಯಾಗಿದೆ.

ಹುಳಿಯಾರು ನಫೆಡ್ ಕೇಂದ್ರದಲ್ಲಿ 2630 ರೈತರು ನೊಂದಾಯಿಸಿದ್ದು ಇವರಿಂದ ಅಂದಾಜು 68 ಸಾವಿರ ಕ್ವಿಂಟಲ್ ರಾಗಿ ಖರೀದಿ ಮಾಡಬೇಕಿದೆ. ಹಾಗಾಗಿ ಸೋಮವಾರದಿಂದ ನಾಲ್ಕು ದಿನಗಳ ವರೆವಿಗೆ ನಿತ್ಯ 1000 ರಿಂದ 1200 ಕ್ವಿಂಟಲ್ ರಾಗಿ ಖರೀದಿ ಮಾಡಲಾಗುತ್ತಿತ್ತು. ನಂತರದ ದಿನಗಳಲ್ಲಿ ಗ್ರೇಡರ್ ಇಲ್ಲದೆ ಖರೀದಿ ಸ್ಥಗಿತಗೊಂಡಿತು. ಶುಕ್ರವಾರದಿಂದ ಗ್ರೇಡರ್ ಬಂದು ಖರೀದಿ ಆರಂಭಿಸಲಾಯಿತಾದರೂ ದಿನಕ್ಕೆ ಗರಿಷ್ಠ ಖರೀದಿ ಮಿತಿ 500 ಕ್ವಿಂಟಲ್‌ಗೆ ಮಾತ್ರ ನಿಗದಿ ಮಾಡುವ ಮೂಲಕ ಮಧ್ಯಾಹ್ನಕ್ಕೇ ಖರೀದಿ ನಿಲ್ಲಿಸಲಾಗಿತು.

500 ಕ್ವಿಂಟಲ್ ಗರಿಷ್ಟ ಮಿತಿ ಮಾಡಿರುವುದರಿಂದ ರಾಗಿ ಮಾರಲು ನಿತ್ಯ 2 ಸಾವಿರ ರೂಗೆ ಬಾಡಿಗೆ ಟ್ರಾಕ್ಟರ್ ಮಾಡಿಕೊಂಡು ಬರುವ ರೈತರಿಗೆ ಆರ್ಥಿಕ ಹೊರೆಯಾಗಿದೆ. ಈಗಿರುವ ಸರತಿ ಸಾಲಿನಲ್ಲಿ ಟ್ರಾಕ್ಟರ್ ತಂದು ನಿಲ್ಲಿಸಿದರೂ ನಫೆಡ್‌ಗೆ ರಾಗಿ ಬಿಡಬೇಕಾದರೆ ಕನಿಷ್ಟ ಎಂದರೂ ಏಳೆಂಟು ದಿನಗಳು ಬೇಕಾಗುತ್ತದೆ. ಇದರಿಂದ ಅನಗತ್ಯವಾಗಿ ಹತ್ತದಿನೈದು ಸಾವಿರ ಟ್ರಾಕ್ಟರ್ ಬಾಡಿಗೆಯ ಆರ್ಥಿಕ ಹೊರೆ ರೈತನ ಮೇಲೆ ಬೀಳುತ್ತಿದೆ. ಅಲ್ಲದೆ ವಾರಗಟ್ಟಲೆ ಕೆಲಸಕಾರ್ಯ ಬಿಟ್ಟು ನಿದ್ರಾಹರದ ಪರಿವಿಲ್ಲದೆ ಕಾಯುವ ಕರ್ಮ ರೈತನದಾಗಿದೆ.



“ಒಬ್ಬ ಹಮಾಲನಿಗೆ ಒಂದು ಚೀಲಕ್ಕೆ 12 ರೂ. ನೀಡಲಾಗುತ್ತಿತ್ತು. ನಿತ್ಯ 2000 ರಿಂದ 2200 ಚೀಲ ರಾಗಿ ತೂಗುತಿದ್ದರಿಂದ ಕಂಟ್ರಾಕ್ಟರ್ 26 ಸಾವಿರ ರೂ. ಕೂಲಿ ಹಣ ನೀಡುತ್ತಿದ್ದರು. ಈ ಹಣವನ್ನು 40 ಮಂದಿ ಹಮಾಲರಿಗೆ ಹಂಚಿದಾಗ ನಿತ್ಯ 600 ರಿಂದ 700 ರೂ. ಬರುತ್ತಿತ್ತು. ಆದರೆ ಈಗ ಅರ್ಧಕ್ಕರ್ಧ ಕೂಲಿ ಹಣ ಕಡಿಮೆಯಾಗುತ್ತಿದೆ. ಅಂದರೆ ನಿತ್ಯ 1000 ಚೀಲ ರಾಗಿ ತೂಗಿದರೆ 12,000 ರೂ ಕೂಲಿ ಹಣ ಸಿಗುತ್ತದೆ. ಇದನ್ನು 40 ಮಂದಿಗೆ ಹಂಚಿದರೆ 300 ರೂ. ಸಿಗುತ್ತದೆ. ಹಾಗಾಗಿ ಮೊದಲಿನಂತೆ ನಿತ್ಯ 1200 ಕ್ವಿಂಟಲ್ ರಾಗಿ ತೂಗಿ.

**ಸೂರಪ್ಪ**, ಅಧ್ಯಕ್ಷರು, ಹಮಾಲರ ಸಂಘ, ಹುಳಿಯಾರು

“ಹುಳಿಯಾರು ನಫೆಡ್ ಕೇಂದ್ರದಲ್ಲಿ 68 ಸಾವಿರ ರಾಗಿ ಖರೀಧಿ ಮಾಡಬೇಕಿದ್ದು 2 ವಾರದಿಂದ 5 ಸಾವಿರ ಕ್ವಿಂಟಲ್ ರಾಗಿ ಖರೀದಿಸಿದ್ದು ಇನ್ನೂ 63 ಸಾವಿರ ಕ್ವಿಂಟಲ್ ರಾಗಿ ಖರೀದಿಸಬೇಕಿದೆ. ಈಗ ನಿತ್ಯ 500 ಕ್ವಿಂಟಲ್ ಗರಿಷ್ಟ ಮಿತಿ ನಿಗದಿ ಮಾಡಿರುವುದರಿಂದ ಉಳಿದ ರಾಗಿ ಖರೀದಿಸಲು ಬರೋಬ್ಬರಿ 126 ದಿನಗಳು ಬೇಕಾಗುತ್ತದೆ. ಇನ್ನೊಂದು ತಿಂಗಳು ಕಳೆದರೆ ಪೂರ್ವ ಮುಂಗಾರು ಆರಂಭವಾಗುವುದಿದ್ದು ರೈತರು ಕೃಷಿ ಕೆಲಸಗಳನ್ನು ಬಿಟ್ಟು ನಫೆಡ್ ಕೇಂದ್ರದ ಮುಂದೆ ರಾಗಿ ಮಾರಲು ಸರತಿ ಸಾಲಿನಲ್ಲಿ ನಿಲ್ಲಬೇಕಿದೆ. ಇದರಿಂದ ರೈತನ ಕೃಷಿ ಚಟುವಟಿಕೆಗಳ ಮೇಲೆ ಪೆಟ್ಟು ಬೀಳುತ್ತದೆ.

**ಕರಿಯಪ್ಪ** ರೈತ ಸಂಘದ ಕಾರ್ಯಾಧ್ಯಕ್ಷ

“ಈ ವರ್ಷ ಬರಗಾಲ ಬಂದಿದ್ದರಿಂದ ರೈತರು ಹಳೆಯ ರಾಗಿ ಮಾರುವ ಸಾಧ್ಯತೆ ಇದೆ. ಹಳೆ ರಾಗಿಯಲ್ಲಿ ಕಸಕಡ್ಡಿ ಹೆಚ್ಚಿರುವುದರಿಂದ ಹದ್ದಿನ ಕಣ್ಣಿಟ್ಟು ಗುಣಮಟ್ಟದ ರಾಗಿ ಖರೀದಿಗೆ ಸೂಚನೆ ನೀಡಿದೆ. ರಾಗಿಯನ್ನು ಪರಿಶೀಲಿಸಿ ಚರಡಿಯಲ್ಲಿ ಹಾಕಿ ಕಸ ಕಡ್ಡಿ ನೋಡಿ ಲೋಡ ಮಾಡಲು ತಿಳಿಸಿದ್ದಾರೆ. ಅಲ್ಲದೆ ಹುಳಿಯಾರಿಗೆ ನಿತ್ಯ 500 ಕ್ವಿಂಟಲ್, ಚಿ.ನಾ.ಹಳ್ಳಿಗೆ 300 ಕ್ವಿಂಟಲ್ ಗರಿಷ್ಟ ಮಿತಿ ಕೊಟ್ಟದ್ದಾರೆ. ಇಂದು 17 ಚೀಲ ರಿಜೆಕ್ಟ್ ಆಗಿದ್ದು ಪ್ರತಿಯೊಂದು ಚೀಲವನ್ನೂ ಪರಿಶೀಲಿಸಿ ಖರೀದಿಸುವುದರಿಂದ ಸಮಯ ಹಿಡಿಯುತ್ತಿದೆ.

**ವೀರಭದ್ರಯ್ಯ** ಖರೀಧಿ ಅಧಿಕಾರಿ, ಹುಳಿಯಾರು

500 ಕ್ವಿಂಟಲ್ ಮಿತಿ ಮಾಡಿರುವುದು ಹಮಾಲರ ದಿನಕೂಲಿಗೂ ಪೆಟ್ಟು ಬಿದ್ದಿದೆ. ನಫೆಡ್ ಕೇಂದ್ರದಲ್ಲಿ ನಿತ್ಯ 1 ಸಾವಿರ ರೂ. ದುಡಿಯಬಹುದೆಂಬ ಆಸೆಯಿಂದ ಬಂದಿದ್ದ ಹಮಾಲರಿಗೆ ನಿತ್ಯ 300 ರೂ. ಸಿಗುವುದೂ ಸಹ ಕಷ್ಟವಾಗಿದೆ. ಅಲ್ಲದೆ ಅರ್ಧ ದಿನಕ್ಕೆ ಕೆಲಸ ಮುಗಿಯುವುದರಿಂದ ಉಳಿದರ್ದ ದಿನ ವರ್ತಕರ ಅಂಗಡಿಗೂ ಹೋಗಲಾಗದೆ, ಬೇರೆಲ್ಲೂ ಕೂಲಿ ಮಾಡಲಾಗದೆ ಅತ್ರಂತ್ರರಾಗಿದ್ದಾರೆ. ಅರ್ಧ ದಿನ ಮಾತ್ರ ಕೆಲಸ ಮಾಡಿಸಿಕೊಂಡು ಕಳುಹಿಸಿದರೆ ಇನ್ನರ್ಧ ದಿನ ಎಲ್ಲಿ ಹೋಗೋಣ? ಇಡೀ ದಿನ ಪೂರ್ತಿ ಕೆಲಸ ಕೊಡಿ ಎಂದು ಹಮಾಲರು ಖರೀದಿ ಅಧಿಕಾರಿಗಳ ಮುಂದೆ ಪಟ್ಟು ಹಿಡಿದಿದ್ದಾರೆ. ಒಟ್ಟಿನಲ್ಲಿ ಇತ್ತೀಚಿನ ದಿನಗಳಲ್ಲಿ ನಫೇಡ್ ಕೇಂದ್ರಗಳು ರೈತರ ಶೋಷಣಾ ಕೇಂದ್ರವಾಗಿ ಮಾರ್ಪಡುತ್ತಿವೆ. ಬಿಸಿಲು, ಮಳೆ, ಚಳಿ, ರಾತ್ರಿ ಎನ್ನದೆ ದೇಶಕ್ಕೆ ಅನ್ನ ಕೊಡಲು ದುಡಿಯುವ ಅನ್ನದಾತನನ್ನು ನಿಸ್ಕೃಷ್ಟವಾಗಿ ಕಾಣುತ್ತಿದೆ. ದಿನಕ್ಕೊಂದು ನಿಯಮ ತಂದು ನಫೆಡ್ ಕೇಂದ್ರಕ್ಕೆ ಅಲೆಸುವ, ಜಾಗರಣೆ ಮಾಡಿಸುವ, ಉಪವಾಸ ವನವಾಸ ಬೀಳಿಸುತ್ತಿದೆ. ಇನ್ನಾದರೂ ರೈತರನ್ನು ಗೋಳೊಯ್ದುಕೊಳ್ಳುವುದನ್ನು ಬಿಟ್ಟು ನಫೆಡ್ ಕೇಂದ್ರಗಳು ರೈತ ಸ್ನೇಹಿಯಾಗಿ ಮಾರ್ಪಡಬೇಕಿದೆ.

# ಎನ್‌ಡಿಎ ಒಕ್ಕೂಟ ವಿರುದ್ಧ ರೈತ ಸಂಘದ ನಿಲುವು

**ಮೈಸೂರು:** ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ದೇಶದಲ್ಲಿ ಎನ್‌ಡಿಎ ಒಕ್ಕೂಟ ಅಧಿಕಾರಕ್ಕೆ ಬರುವುದನ್ನು ತಡೆಯಲು ರೈತ, ಕಾರ್ಮಿಕ ಮಹಾ ಪಂಚಾಯತ್ ಕರಪತ್ರ, ಮತದಾರರ ಭೇಟಿ ಮೊದಲಾದವುಗಳ ಮೂಲಕ ಶ್ರಮಿಸಲಿದೆ. ಇದರಲ್ಲಿ ರಾಜ್ಯ ರೈತ ಸಂಘವವೂ ಪಾಲ್ಗೊಳ್ಳಲಿದೆ ಎಂದು ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಳೆದ ರಾಜ್ಯ ವಿಧಾನಸಭಾ ಚುನಾವಣೆ ವೇಳೆ ರೈತ, ದಲಿತ, ಕಾರ್ಮಿಕ, ಮಹಿಳಾ, ಯುವಜನ ಮೊದಲಾದ ಸಂಘಟನೆಗಳು ಶ್ರಮಿಸಿದ ಫಲವಾಗಿ ಬಿಜೆಪಿಯನ್ನು ವಿಧಾನಸೌಧದಿಂದ ತೊಲಗಿಸಲಾಯಿತು.

ಈಗಲೂ ಇದೇ ಪ್ರಯತ್ನ ಮತ್ತಷ್ಟು ವಿಸ್ತಾರವಾಗಿ ಮಾಡಲಾಗುತ್ತಿದೆ. ಕಳೆದ 10 ವರ್ಷಗಳ ಮೋದಿ ಆಡಳಿತ ರೈತ, ಕಾರ್ಮಿಕ, ಜನಸಾಮಾನ್ಯರ ನೆಮ್ಮದಿಗೆ ಭಂಗ ತಂದಿದೆ. ಈ ಅವಧಿಯಲ್ಲಿ ಸುಮಾರು ಒಂದು ಲಕ್ಷ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೋದಿ ಸರ್ಕಾರ ಮಾತಿಗೆ ತಪ್ಪಿದೆ,. ವಿದ್ಯಚ್ಛಕ್ತಿ ಕಾಯ್ದೆ ತಿದ್ದುಪಡಿಯನ್ನು ರೈತ ಮುಖಂಡರ ಒಪ್ಪಿಗೆ ಇಲ್ಲದೇ ಸಂಸತ್‌ನಲ್ಲಿ ಮಂಡಿಸಲಾಗಿದೆ. ರೈತರ ಆದಾಯವನ್ನು ದ್ವಿಗುಣಗೊಳಿಸುವುದಾಗಿ ಹೇಳಿದ್ದರಾದರೂ ಅದು ನಡೆದಿಲ್ಲ. ಕೇವಲ ಉತ್ಪಾದನಾ ವೆಚ್ಚ ದ್ವಿಗುಣಗೊಂಡಿದೆ. ರೈತರ ಸಾಲ ಮನ್ನಾ ಮಾಡುವುದಾಗಿ ಭರವಸೆ ನೀಡಿದ್ದರೂ, ಇದಕ್ಕಾಗಿ ಯೋಜನೆ ರೂಪಿಸಿಲ್ಲ. ಕೇವಲ ಕಾರ್ಪೊರೇಟ್ ಕಂಪನಿಗಳ ಸಾಲ ಮಾತ್ರ ಮನ್ನಾ ಮಾಡಲಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಇದೇ ವೇಳೆ, ಬಾಗಲಕೋಟೆ, ಉತ್ತರ ಕನ್ನಡ ಮತ್ತು ಕೆಲವು ಕ್ಷೇತ್ರಗಳಲ್ಲಿ ರೈತ ಸಂಘದ ಮುಖಂಡರು ಸ್ಪರ್ಧಿಸಲು ನಿರ್ಧರಿಸಿದ್ದಾರೆ. ಕಾಲಾವಕಾಶ ಇಲ್ಲದ ಕಾರಣ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಿಂದ ತಾವು ಸ್ಪರ್ಧಿಸುತ್ತಿಲ್ಲ. ಇನ್ನು, ರೈತ ಸಂಘ ಇಂತಹ ಯಾವುದೇ ಪಕ್ಷಕ್ಕೂ ಮತ ಹಾಕುವಂತೆ ಮನವಿ ಮಾಡುವುದಿಲ್ಲ. ಕೇವಲ ಬಿಜೆಪಿಗೆ ಮಾತ್ರ ಹಾಕಬೇಡಿರೆಂದು ಮನವಿ ಮಾಡುತ್ತದೆಂದರು. ಹೊಸಕೋಟೆ ಬಸವರಾಜು, ಪ್ರಸನ್ನ ಎನ್.ಗೌಡ, ಪಿ.ಮರಂಕಯ್ಯ, ನಾಗನಳ್ಳಿ ವಿಜೇಂದ್ರ ಇದ್ದರು.



# ಮೇಕೆದಾಟು ಶೀಘ್ರ ಜಾರಿಯಾಗಲಿ

## ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಹೇಳಿಕೆ

**ಚನ್ನಪಟ್ಟಣ:** ರಾಜ್ಯದ ಕನಸಿನ ಯೋಜನೆಯಾಗಿರುವ ಮೇಕೆದಾಟು ಯೋಜನೆಯನ್ನು ಮಾಡಲು ಬಿಡುವುದಿಲ್ಲ ಎಂದು ತಮಿಳುನಾಡು ಸರ್ಕಾರ ಲೋಕಸಭಾ ಚುನಾವಣೆಯ ಪ್ರಣಾಳಿಕೆಯನ್ನು ಹೊರಡಿಸುವ ಮೂಲಕ ನಮ್ಮ ರಾಜ್ಯದ ಮೇಲೆ ಪಾರಮ್ಯ ಸಾಧಿಸಲು ಮುಂದಾಗಿರುವುದು ಸರ್ಕಾರದ ಬೇಜವಾಬ್ದಾರಿ ತನಕ್ಕೆ ಸಾಕ್ಷಿಯಾಗಿದೆ ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್ ಗೌಡರು ಖಂಡಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಗುರುವಾರ ನಡೆದ 169 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ಮೇಕೆದಾಟು ಯೋಜನೆಯ ಅನುಷ್ಠಾನದ ಹೆಸರಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಇಂದು ಮೇಕೆದಾಟು ಯೋಜನೆಯನ್ನು ಮಾಡಲು ಸಿದ್ದವಿದ್ದರೂ ಕೇಂದ್ರ ಸರ್ಕಾರ ಇದಕ್ಕೆ ಅನುಮತಿ ನೀಡದಂತೆ ತಮಿಳುನಾಡಿ ತಡೆ ಸುಪ್ರಿಂ ಕೋರ್ಟ್ ನಲ್ಲಿ ತಡೆ ಮಾಡಿದೆ. ಆದರೆ ಇದೀಗ ಇಂಡಿಯಾ ಮೈತ್ರಿ ಕೂಟದ ಮೂಲಕ ಲೋಕಸಭಾ ಚುನಾವಣೆ ಎದುರಿಸುವ ನಟ್ಟಿನಲ್ಲಿ ತಮಿಳುನಾಡಿಗೆ ಕಾವೇರಿ ನೀರನ್ನು ಹರಿಯ ಬಿಟ್ಟ ರಾಜ್ಯ ಸರ್ಕಾರದ ನಡೆಯು ಇದೀಗ ತಮಿಳುನಾಡಿಗೆ ಮತ್ತಷ್ಟು ಹಕ್ಕನ್ನು ನೀಡದಂತಾಗಿದ್ದು ನಮ್ಮ ರಾಜ್ಯದಲ್ಲಿ ಅಣೆಕಟ್ಟೆ ಕಟ್ಟಿ ನಮ್ಮ ನೀರನ್ನು ಉಳಿಸಿಕೊಳ್ಳುವುದಕ್ಕೂ ತಮಿಳುನಾಡು ಸರ್ಕಾರ ಬಿಡುವುದಿಲ್ಲ ಎಂದು ಲೋಕಸಭಾ ಚುನಾವಣೆಯ ಪ್ರಣಾಳಿಕೆಯ ಮೂಲಕ ಪ್ರಚಾರಕ್ಕೆ ಇಳಿದಿರುವುದು ನಮ್ಮ ರಾಜ್ಯದ ಸರ್ಕಾರದ ಜನಪ್ರತಿನಿಧಿಗಳು ನಾಚಿಕೆ ಪಡುವ ಸಂಗತಿಯಾಗಿದೆ ಎಂದು ಆರೋಪಿಸಿದರು. ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಅವರು ಕೇಂದ್ರದಲ್ಲಿ ಇಂಡಿಯಾ ಮೈತ್ರಿ ಕೂಟ ಅಧಿಕಾರಕ್ಕೆ ಬಂದರೆ ಮೇಕೆದಾಟು ಯೋಜನೆಯನ್ನು ಶಾಸ್ವತವಾಗಿ ರದ್ದು ಮಾಡಿಸುತ್ತೇವೆ ಎಂದು ಚುನಾವಣಾ ಪ್ರಣಾಳಿಕೆಯನ್ನು ಹೊಡಿಸಿರುವುದು ಅಲ್ಲಿನ ಜನರಿಗೆ ಮತ್ತು ರೈತರ ಹಿತ ಕಾಯಲು ಬದ್ದರಿದ್ದೇವೆ ಎಂದು ಹೇಳಿಕೊಂಡಿರುವ ವಿಚಾರವಾಗಿದೆ. ಆದರೆ ನಮ್ಮಲ್ಲೇ ಹುಟ್ಟಿ ನಮ್ಮಲ್ಲೇ ಹರಿದು ಸಮುದ್ರದ ಪಾಲಾಗುವ ನೀರನ್ನು ನಾವು ಉಳಿಸಿಕೊಳ್ಳುವ ಮೇಕೆದಾಟು ಯೋಜನೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಅನುಮತಿ ಕೊಡಿಸಲು ಮುಂದಾಗದ ಬಿಜೆಪಿ ಸಂಸದರೂ ಸಹ ಲೋಕಸಭಾ ಚುನಾವಣೆಯ ಸ್ವಾರ್ಥ ರಾಜಕಾರಣದಿಂದ ಬಾಯಿಮುಚ್ಚಿ ಕುಳಿತಿದ್ದಾರೆ ಎಂದು ರಮೇಶ್‌ಗೌಡ ಆರೋಪಿಸಿದರು.

ಕಕಜ ವೇದಿಕೆಯ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ ಮಾತನಾಡಿ, ತಮಿಳುನಾಡು ಮುಖ್ಯಮಂತ್ರಿ ಸ್ಟಾಲೀನ್ ಅವರು ಲೋಕಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಇಂಡಿಯಾ ಮೈತ್ರಿ ಕೂಟ ಅಧಿಕಾರಕ್ಕೆ ಬಂದರೆ ಮೇಕೆದಾಟು ಯೋಜನೆನ್ನು ಶಾಸ್ವತವಾಗಿ ರದ್ದು ಮಾಡಿಸುತ್ತೇವೆ ಎಂದು ಪ್ರಚಾರ ಮಾಡುತ್ತಿದ್ದರೂ ನಮ್ಮ ಕಾಂಗ್ರೆಸ್, ಜೆಡಿಎಸ್ ಹಾಗೂ ಬಿಜೆಪಿ ನಾಯಕರು ಮೌನವಾಗಿರುವುದು ಖಂಡನೀಯವಾಗಿದೆ. ಇದೇ ಸ್ಟಾಲೀನ್ ಅವರ ಪುತ್ರ ಉದಯನಿಧಿ ಅವರು ಸನಾತನ ಸಂಸ್ಕೃತಿ ಮತ್ತು ಹಿಂದುತ್ವದ ಬಗ್ಗೆ ಮಾತನಾಡಿದ ವೇಳೆ ಅವರ ವಿರುದ್ದ ಮುಗಿಬಿದ್ದ ರಾಜ್ಯದ ಬಿಜೆಪಿ ನಾಯಕರು ಸಹ ಇಂದು ಮೇಕೆದಾಟು ಯೋಜನೆ ವಿಚಾರದಲ್ಲಿ ಧ್ವನಿ ಎತ್ತುತ್ತಿಲ್ಲ ಎಂದರೆ ತಮಿಳುನಾಡಿನಲ್ಲಿ ಎನ್‌ಡಿಎ ಮೈತ್ರಿಗೆ ಹಿನ್ನಡೆಯಾಗುತ್ತದೆ ಎಂಬ ರಾಜಕೀಯ ಲಾಭದ ಉದ್ದೇಶವೇ ಎಂಬ ಅನುಮಾನಗಳು ಕಾಡುತ್ತಿವೆ. ನಮ್ಮಲ್ಲಿ ಹುಟ್ಟಿ ಹರಿಯುವ ಕಾವೇರಿಯನ್ನು ನಾವು ಉಳಿಸಿಕೊಳ್ಳಲು ಬಿಡುವುದಿಲ್ಲ ಎಂದು ಪಕ್ಕದ ರಾಜ್ಯ ಹೇಳಿದೆ ಎಂದರೆ ಮುಂದಿನ ದಿನದಲ್ಲಿ ರಾಜ್ಯದ ಮೇಲೆ ಮತ್ತಷ್ಟು ಪಾರಮ್ಯ ಸಾಧಿಸುವ ಸಾಧ್ಯತೆಗಳಿದ್ದು ಈಗಲೇ ತಮಿಳುನಾಡು ಸರ್ಕಾರದ ಉದ್ದಟತನಕ್ಕೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ರ್‍ಯಾಂಬೋ ಸೂರಿ, ಪಾನಪುರಿ ಚನ್ನಪ್ಪ, ಬುಕ್ಕಸಾಗರ ಕುಮಾರ್, ಆಟೋ ವೆಂಕಟೇಶ್, ಡಿಎಸೆಸ್ ವೆಂಕಟೇಶ್(ಸೇಟು) ಇತರರು ಇದ್ದರು.



## ದಲಿತ ಸಮುದಾಯ, ನಾಯಕರ ಮಕ್ಕಳಿಗೂ ಅವಕಾಶ ಕೊಡಿ

**ಮೈಸೂರು:** ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಎಲ್ಲ ಪಕ್ಷಗಳು ಮೇಲ್ವರ್ಗದ ಪ್ರಮುಖರ ಮಕ್ಕಳಿಗೆ ಟಿಕೆಟ್ ನೀಡಿದ್ದು, ಈ ಸಂದರ್ಭದಲ್ಲಿ ದಲಿತ ಪ್ರಮುಖರ ಮಕ್ಕಳಿಗೆ ನಿರಾಕರಿಸುತ್ತಿವೆ ಎಂದು ಗಾಂಧಿನಗರದ ದಲಿತ ಮಹಾಸಭಾ ಸಂಸ್ಥೆ ಅಧ್ಯಕ್ಷ ಎಸ್.ರಾಜೇಶ್ ದೂರಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಾಂಗ್ರೆಸ್ ಪಕ್ಷ ಸಹಾ ಇದೇ ಹಾದಿಯಲ್ಲಿ ಸಾಗಿದೆ. ಸತೀಶ್ ಜಾರಕಿಹೊಳಿ, ಲಕ್ಷ್ಮೀಹೆಬ್ಬಾಳ್ಕರ್, ಈಶ್ವರ ಖಂಡ್ರೆ ಅವರ ಮಕ್ಕಳಿಗೆ ಟಿಕೆಟ್ ನೀಡಿದ್ದರೆ, ಕೆ.ಎಚ್. ಮುನಿಯಪ್ಪ, ಡಾ.ಎಚ್.ಸಿ. ಮಹದೇವಪ್ಪ ಅವರ ಪುತ್ರರಿಗೆ ನಿರಾಕರಿಸುವ ಮಾತು ಕೇಳಿಬಂದಿದೆ. ಇನ್ನು ಬಿಜೆಪಿ ಸಹಾ ಈಗಿನ ಸಂಸದ ವಿ. ಶ್ರೀನಿವಾಸ ಪ್ರಸಾದ್ ಅವರ ಅಳಿಯನಿಗೆ ಟಿಕೆಟ್ ನಿರಾಕರಿಸಿದೆ ಎಂದು ದೂರಿದರು. ಬಳಿಕ, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಡಾ.ಎಚ್.ಸಿ. ಮಹದೇವಪ್ಪ ಅವರ ಪುತ್ರ ಸುನಿಲ್ ಬೋಸ್ ಅವರಿಗೆ ಟಿಕೆಟ್ ನೀಡದಿದ್ದಲ್ಲಿ ಸಂಸ್ಥೆ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಸಿದರು.

# ಏ.10ರಿಂದ ರಾಜ್ಯ ಮಟ್ಟದ ಭಜನಾ ಸ್ಪರ್ಧೆ

**ಮೈಸೂರು:** ಹುಬ್ಬಳ್ಳಿಯ ಸಿದ್ಧಾರೂಢ ಸ್ವಾಮೀಜಿಯವರ ಮಠದಲ್ಲಿ ಬರುವ ಏಪ್ರಿಲ್ 10 ರಿಂದ 15 ರವರೆಗೆ ರಾಜ್ಯ ಮಟ್ಟದ ಒಂಭತ್ತನೇ ಭಜನಾ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಸ್ಪರ್ಧಾ ಸಮಿತಿ ಅಧ್ಯಕ್ಷರಾದ ಶಾಮಾನಂಬ ಬಿ. ಪೂಜೇರರಿ ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ. ಏಪ್ರಿಲ್ ಹತ್ತರ ಬೆಳಗ್ಗೆ ಒಂಭತ್ತಕ್ಕೆ ಪ್ರಕ್ರಿಯೆ ಆರಂಭವಾಗಲಿದೆ. ಪ್ರಥಮ ಬಹುಮಾನವಾಗಿ ಒಂದು ಲಕ್ಷ, ದ್ವಿತೀಯ ಬಹುಮಾನವಾಗಿ 80 ಸಾವಿರ, ತೃತೀಯ ಬಹುಮಾನವಾಗಿ 70 ಸಾವಿರ, ಸಮಾಧಾನಕರ ಬಹುಮಾನವಾಗಿ ಒಂಭತ್ತ ಸಾವಿರ ನೀಡಲಾಗುವುದು. 16 ವರ್ಷದ ಒಳಗಿನ ಬಾಲಕ, ಬಾಲಕಿಯರ ತಂಡಗಳಿಗೆ ಪ್ರತಿಭಾ ಪುರಸ್ಕಾರವಾಗಿ ಹತ್ತು ಸಾವಿರ, ಮಹಿಳಾ ಭಜನಾ ತಂಡಕ್ಕೆ ಹತ್ತು ಸಾವಿರ ಪುರಸ್ಕಾರ ನೀಡಲಾಗುವುದು. ಇದೇ ರೀತಿ ವೈಯಕ್ತಿಕ ಬಹುಮಾನಗಳೂ ಇವೆ. ಹೆಸರು ನೋಂದಾಯಿಸಿಕೊಳ್ಳಲು ಏ.9 ಕೊನೆ ದಿನವಾಗಿದ್ದು, ಹೆಚ್ಚಿನ ಮಾಹಿತಿಗೆ ದೂ. 98801 69881 ಸಂಪರ್ಕಿಸಬಹುದಾಗಿದೆ ಎಂದರು. ಶ್ರೀ ಶಿವಾನಂದ ಸ್ವಾಮೀಜಿ, ಆತ್ಮಾನಂದ ಸ್ವಾಮೀಜಿ, ಸಿ.ಬಸವರಾಜ ಇನ್ನಿತರರು ಇದ್ದರು.



## ಪರೀಕ್ಷಾ ಕೇಂದ್ರದ ಕೊಠಡಿಗಳಿಗೆ ಸಿ.ಸಿ.ಕ್ಯಾಮರಾಗಳ ಅಳವಡಿಕೆ

**ವಿಜಯಪುರ:** ಮಾ.25 ರಂದು ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆಯ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಪ್ರತಿಯೊಂದು ಕೊಠಡಿಯಲ್ಲೂ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸುವಂತೆ ಪರೀಕ್ಷಾ ಮಂಡಳಿಯ ಸೂಚನೆಯ ಮೇರೆಗೆ ಪರೀಕ್ಷಾ ಕೊಠಡಿಗಳಿಗೆ ಕ್ಯಾಮೆರಾಗಳು ಅಳವಡಿಸುವ ಕಾರ್ಯ ಭರದಿಂದ ಸಾಗಿದೆ. ಹೋಬಳಿಯಲ್ಲಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಪ್ರಗತಿ ಪ್ರೌಢಶಾಲೆ, ನಾರಾಯಣಪುರ ಸರ್ಕಾರಿ ಪ್ರೌಢಶಾಲೆಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ಮಾಡಿದ್ದು, ನಾಲ್ಕೂ ಕೇಂದ್ರಗಳಲ್ಲಿ ಒಟ್ಟು 941 ಮಂದಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಪರೀಕ್ಷಾ ಕೇಂದ್ರದ ಎಲ್ಲಾ ಕೊಠಡಿಗಳಲ್ಲೂ ಕ್ಯಾಮೆರಾಗಳ ಜೊತೆಗೆ ಫ್ಯಾನುಗಳನ್ನು ಅಳವಡಿಸುವಂತೆ ಸೂಚನೆ ನೀಡಿರುವುದರಿಂದ ಶಾಲಾ ಕೊಠಡಿಗಳಲ್ಲಿ ಸಿ.ಸಿ.ಕ್ಯಾಮೆರಾಗಳು ಮತ್ತು ಫ್ಯಾನುಗಳನ್ನು ಅಳವಡಿಸಲಾಗುತ್ತಿದೆ ಎಂದು ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯಶಿಕ್ಷಕ ರಾಜು ಹವಳೇಕರ್ ತಿಳಿಸಿದರು.



## ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮಂಡ್ಯ ಟೌನ್ ಹಳೆನಗರ ಮೌಲಾನಾ ಆಜಾದ್ ಮಾದರಿ ಶಾಲೆ, ಮತ್ತು ಮಳವಳ್ಳಿ ತಾಲೂಕಿನ ಕಲ್ಕುಣಿ ಗ್ರಾಮದ ಮೌಲಾನಾ ಆಜಾದ್ ಮಾದರಿ ಶಾಲೆ, ಒಟ್ಟು 02 ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ 2024-25ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿಯ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ ಆನ್ ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಏಪ್ರಿಲ್ 14 ಕೊನೆಯ ದಿನಾಂಕವಾಗಿದ್ದು, https://dom.karnataka.gov.in ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ 8277799990, 080-22535902 ಜಿಲ್ಲಾ ಕಛೇರಿ ದೂ. ಸಂ.08232-297240 ಹಾಗೂ ಮಂಡ್ಯ ಜಿಲ್ಲಾ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ನಿಮ್ಮ ಹತ್ತಿರದ ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ತಿಳಿಸಿದ್ದಾರೆ.

## ಪ್ರಧಾನಿ ಮೋದಿ ಆಯಸ್ಸು, ಆರೋಗ್ಯ ವೃದ್ಧಿಗಾಗಿ ಪೂಜೆ

ಮಂಡ್ಯ:ಜಿಲ್ಲಾ ಮಹಿಳಾ ಮೋರ್ಚಾ ವತಿಯಿಂದ ಪ್ರಧಾನಿ ನರೇಂದ್ರಮೋದಿಯವರ ಆಯಸ್ಸು ಹಾಗೂ ಆರೋಗ್ಯ ವೃದ್ಧಿಗಾಗಿ ನಗರದ ಶಕ್ತಿ ದೇವತೆ ಶ್ರೀ ಕಾಳಿಕಾಂಬ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಮಂಗಳಾ ಮಾತನಾಡಿ, ಹೆಣ್ಣು ಎಂದರೆ ಶಕ್ತಿ. ಹೆಣ್ಣು ಎಂದರೆ ಪ್ರಕೃತಿ, ಆದರೆ, ಕಾಂಗ್ರೆಸ್ ಮುಖಂಡರಾದ ರಾಹುಲ್‌ಗಾಂಧಿಯವರು ಜಗತ್ತಿನ ಸೃಷ್ಠಿಗೆ ಕಾರಣರಾದ ಶಕ್ತಿ (ಹೆಣ್ಣು)ಯನ್ನು ಸಂಪೂರ್ಣ ನಾಶ ಮಾಡಬೇಕು ಎಂಬ ಹೇಳಿಕೆಯನ್ನು ನೀಡಿರುವುದು ಬಾಲಿಶತನದಿಂದ ಕೂಡಿದೆ ಎಂದು ಆರೋಪಿಸಿದರು. ಈ ಚುನಾವಣೆ ಶಕ್ತಿಯ ಆರಾಧಕರೂ ಹಾಗೂ ಶಕ್ತಿಯನ್ನು ನಾಶ ಮಾಡುತ್ತೇವೆ ಎಂದು ಫಣ ತೊಟ್ಟಿರುವ ವ್ಯಕ್ತಿಗಳ ನಡುವೆ ನಡೆಯಲಿದೆ. ದೇಶದ ಸಮಸ್ತ ಮಹಿಳೆಯರೂ ಕೂಡ ಈ ಬಾರಿ ನರೇಂದ್ರಮೋದಿಯವರ ಕೈ ಬಲಪಡಿಸುತ್ತಾರೆ ಎಂಬ ಅಚಲವಾದ ನಂಬಿಕೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬೇಟಿ ಬಚಾವೋ, ಬೇಟಿ ಪಡಾವೋ, ಮಹಿಳಾ ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರ ಕೈಗೊಂಡ ಅನೇಕ ಕಾರ್ಯಕ್ರಮಗಳು, ಮಹಿಳಾ ಮೀಸಲಾತಿಗೆ ಬಿಜೆಪಿ ಸರ್ಕಾರ ಕೈಗೊಂಡ ದಿಟ್ಟ ಹೆಜ್ಜೆ, ತ್ರಿವಳಿ ತಲಾಖ್ ಎಲ್ಲರೂ ಕೂಡ ಸ್ತ್ರೀ ಕುಲದ ಒಳಿತಿಗಾಗಿ ನರೇಂದ್ರ ಮೋದಿ ಸರ್ಕಾರ ನೀಡಿದ ಅಮೂಲ್ಯ ಕೊಡುಗೆಯಾಗಿದೆ ಎಂದರು. ಇವೆಲ್ಲವನ್ನೂ ಮನಗಂಡಿರುವ ಮಹಿಳೆಯರು ಈ ಬಾರಿ ದೇಶಾದ್ಯಂತ ನರೇಂದ್ರಮೋದಿ ಕೈ ಹಿಡಿಯುತ್ತಾರೆ ಎಂದು ವಿಶ್ವಾಸದಿಂದ ನುಡಿದರು. ಮುಖಂಡರಾದ ಸಿಂಧು, ಶಿಲ್ಪ, ವಿಜಯಕುಮಾರಿ, ಮಂಜುಳಾ, ಸವಿತಾ, ಮಂಜುಳ, ಶೀಲಾ, ಹೇಮಾ, ಜಯಮಾಲ, ಮಧು, ಪವಿತ್ರ ಹಾಜರಿದ್ದರು.



# ಎಳನೀರು ವ್ಯಾಪಾರ ಬಲು ಜೋರು

- ತಂಪು ಪಾನೀಯಗಳ ದರ ಸಮರಕ್ಕೆ ಗ್ರಾಹಕರು ಹೈರಾಣ
- ಬಿಸಿಲೇರಿದ ಬೆನ್ನಲ್ಲೇ ತಂಪು ಪಾನೀಯಗಳಿಗೆ ಬೇಡಿಕೆ



**ವಿಜಯಪುರ:** ಜಿಲ್ಲೆಯಲ್ಲಿ ಬಿಸಿಲಿನ ಆರ್ಭಟ ನಿದಾನಕ್ಕೆ ಶುರುವಾಗುತ್ತಿದ್ದಂತೆ ಜನಸಾಮಾನ್ಯರು ತತ್ತರಗೊಂಡು ತಂಪು ಪಾನೀಯಗಳಿಗೆ ಮೊರೆಹೋಗುತ್ತಿದ್ದು ಇದರಿಂದಾಗಿಯೇ ತಂಪು ಪಾನೀಯಗಳ ದರ ಸಮರಕ್ಕೆ ಈಗಾಗಲೇ ಜನರ ಕೈ ಸುಟ್ಟುಕೊಳ್ಳುವಂತಾಗಿದೆ. ಜಿಲ್ಲೆಯಲ್ಲಿ ಈ ಬಾರಿಯೂ ಬಿಸಿಲಿನ ತಾಪಮಾನ ಹೆಚ್ಚಾಗಿದ್ದು, ಸೂರ್ಯ ಜನರ ನೆತ್ತಿ ಸುಡುವುದರ ಜೊತೆಗೆ ಮೈಬೆವರನ್ನು ಇಳಿಸುತ್ತಿದ್ದಾನೆ. ಇದರಿಂದ ಜನರು ಸುಸ್ತಾಗಿ ದಾಹ ನೀಗಿಸಿಕೊಳ್ಳಲು ತಂಪು ಪಾನೀಯ, ಕಬ್ಬಿನ ಹಾಲು, ಎಳನೀರು, ಮಜ್ಜಿಗೆ, ನಿಂಬೆಹಣ್ಣಿನ ರಸದ ಮೊರೆಹೋಗಿದ್ದಾರೆ. ಮುಂಗಾರು ಹಿಂಗಾರು ಹಂಗಾಮ ಮುಗಿಯುತ್ತಿದ್ದಂತೆ ಬಯಲು ಸೀಮೆಯ ಜಿಲ್ಲೆಗಳಲ್ಲಿ ಸದ್ಯಕ್ಕೆ ದಗದಗನೆ ಬಿಸಿಲೇರಿ ಜನರ ನೆತ್ತಿ ಸುಡುತ್ತಿದ್ದು, ಮಕ್ಕಳು ಮಹಿಳೆಯರು, ವಯೋವೃದ್ದರು ಬಿಸಿಲಿನ ಪರಿಣಾಮ ಹೊರಗೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಸತತ ಎರಡು ಮೂರು ವರ್ಷಗಳಿಂದ ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದ್ದು ಕೆರೆ, ಕುಂಟೆ ಗಳಲ್ಲಿ ನೀರು ತುಂಬಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಇಲ್ಲದೆ ಇದ್ದರೂ ಬಿಸಿಲಿನ ಆರ್ಭಟ ಮಾತ್ರ ಜನರನ್ನು ಕಂಗೆಡಿಸಿದೆ. ಬೇಸಿಗೆ ಪ್ರಾರಂಭದಲ್ಲಿಯೇ ಉರಿಬಿಸಿಲಿನ ಅನುಭವಕ್ಕೆ ಬೆಚ್ಚಿಬೀಳುತ್ತಿರುವ ನಾಗರಿಕರು ಮಾರ್ಚ್, ಏಪ್ರಿಲ್, ಮೇ ತಿಂಗಳು ಹೇಗಪ್ಪಾ ಕಳೆಯುವುದು ಎಂಬ ಚಿಂತೆಯಲ್ಲಿದ್ದು ಜಿಲ್ಲೆಯ ಜನತೆ ಛತ್ರಿ ಹಿಡಿದು ತಿರುಗಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಬಿಸಿಲಿನ ಜೊತೆಗೆ ಬಿಸಿ ಗಾಳಿಯೂ ಸಹ ಜನರನ್ನು ತತ್ತರಿಸುವಂತೆ ಮಾಡಿದೆ. ನಾಗರೀಕರು ಬಿಸಿಲಿನ ತಾಪಕ್ಕೆ ಧಣಿವಾರಿಸಲು ಎಳನೀರು ಕುಡಿದು ದೇಹವನ್ನು ತಂಪಾಗಿಸಿಕೊಳ್ಳುತ್ತಿರುವುದು ಸಾಮಾನ್ಯವಾಗಿ ಕಂಡುಬರುತ್ತಿದೆ. ಬೇಸಿಗೆ ಬಂದರೆ ಸಾಕು ಜನರು ಎಳನೀರಿನ ಮೊರೆಹೋಗಿ ದೇಹ ತಂಪು ಮಾಡಿಕೊಳ್ಳುವುದು ಸಹಜ ಆದರೆ, ಎಳನೀರಿನ ಬೆಲೆ 40-50 ರವರೆಗೂ ಹೆಚ್ಚಾಗಿದ್ದರೂ, ಬಿಸಿಲಿನ ತಾಪವನ್ನು ತಗ್ಗಿಸಿಕೊಳ್ಳಲು ಜನತೆ ಆರೋಗ್ಯದಾಯಕ ಎಳನೀರಿನ ಮೊರೆ ಹೋಗುತ್ತಿದ್ದಾರೆ. ಇನ್ನೂ ಕೆಲವರು ತಂಪು ಪಾನಿಯ ಹಾಗೂ ಕಬ್ಬಿನ ರಸಕ್ಕೆ ಮೊರೆ ಹೋಗುತ್ತಿದ್ದಾರೆ. ಈಬಾರಿ ರಣ ಬಿಸಿಲಿನಿಂದ ನೆತ್ತಿ ಸುಡುತ್ತಿದ್ದು, ಬಿಸಿಲಿನ ತಾಪ ಮತ್ತಷ್ಟು ತೀವ್ರಗೊಳ್ಳಲಿದೆ. ಬೆಳಿಗ್ಗೆ 7.30ರ ವೇಳೆಯಲ್ಲಿರುವ ಎಳೆ ಬಿಸಿಲು ಜನರ ಮೈಸುಡಲು ಪ್ರಾರಂಭಿಸುತ್ತದೆ. ಸಂಜೆ 5 ಗಂಟೆಯವರೆಗೂ ಬಿಸಿಲಿನ ಜಳ ಇರುವುದರಿಂದ ಮೈ, ಚರ್ಮದ ಜೊತೆ ಬಾಯಿ ಹೊಣಗುವ ಅನುಭವವಾಗುತ್ತದೆ. ಬಿಸಿಲಿನ ತಾಪದ ತೀವ್ರತೆಗೆ ಜನರು ತಂಪು ಪಾನಿಯ, ಪಾನಕ, ಮಜ್ಜಿಗೆ ಎಳನೀರು ಕಡೆ ವಾಲುತ್ತಿದ್ದಾರೆ.

## ಮಜ್ಜಿಗೆಗೆ ಸಾಕಷ್ಟು ಬೇಡಿಕೆ

ಬೇಕರಿ, ಹೋಟೇಲ್‌ಗಳಲ್ಲಿ ತಂಪು ಪಾನಿಯಗಳ ಮಾರಾಟ ಗಣನೀಯವಾಗಿ ಕಾಣುತ್ತದೆ. ಮಜ್ಜಿಗೆಗೆ ಸಾಕಷ್ಟು ಬೇಡಿಕೆ ಕಂಡುಬರುತ್ತಿದೆ. ಬಿಸಿಲಿನ ತಾಪ ಹೆಚ್ಚಾದಂತೆ ರೋಗ-ರುಜಿನುಗಳು ಮನೆ ಮಾಡುತ್ತವೆ. ರಸ್ತೆ ಬದಿಯಲ್ಲಿ ಮಜ್ಜಿಗೆ ಹಾಗೂ ಹೆಸರುಬೇಳೆ, ಕೋಸಂಬರಿ ಮಾರಾಟದ ಅಂಗಡಿಗಳು ತಲೆಎತ್ತುತ್ತಿವೆ. ಕತ್ತರಿಸಿಟ್ಟ ಹಣ್ಣುಗಳು ಯತೇಚ್ಚವಾಗಿ ದೊರೆಯುತ್ತಿದೆ. ಮಾರ್ಚ್ ತ್ತು ಏಪ್ರಿಲ್ ನಲ್ಲಿ ಬಿಸಿಲಿನ ತಾಪಮಾನ 34 ರಿಂದ 35ಡಿಗ್ರಿ ಸೆಂಟಿಗ್ರೇಟ್ ವರೆಗೆ ಏರಿದೆ. ಬಿಸಿಲ ಝಳಕ್ಕೆ ಮಧ್ಯಾಹ್ನದ ವೇಳೆ ರಸ್ತೆಗೆ ಇಳಿಯಲು ಜನರು ಹಿಂದೇಟು ಹಾಕುತ್ತಿದ್ದಾರೆ. ಎಳನೀರನ್ನು ಮಾರುವವರು ವಿವಿಧ ತೋಟಗಳಿಗೆ ತೆರಳಿ ಬೆಳಗಿನ ಜಾವ ಮಾರಾಟ ಮಾಡಲು ಪ್ರಾರಂಭಿಸುತ್ತಾರೆ. ಮಾರುಕಟ್ಟೆಯಲ್ಲಿ ಒಂದು ಎಳನೀರಿನ ಬೆಲೆ 30ರೂ.ಗಳವರೆಗೆ ಮಾರಾಟವಾಗುತ್ತಿದೆ. ಎಳನೀರು ಮಾನವನ ದೇಹಕ್ಕೆ ಬಹು ಮುಖ್ಯವಾದ ಲವಣಾಂಶ ಒಳಗೊಂಡಂತಹ ಪೇಯವಾಗಿದೆ. ಇದರಲ್ಲಿ ಹೆಚ್ಚು ಪೊಟಾಷಿಯಂ ಇರುವ ಕಾರಣ ಹೈಪರ್‌ಟೆಂಕ್ಷನ್ ಕಡಿಮೆ ಮಾಡಲು ಸಹಕಾರಿಯಾಗಿದೆ. ಉತ್ತಮ ಕೊಲೆಸ್ಟ್ರಾಲ್ ವೃದ್ಧಿ ಮಾಡುವ ಅಂಶವಾಗಿದೆ. ಖಾಲಿ ಹೊಟ್ಟೆಯಲ್ಲಿ ಸೇವಿಸುವುದರಿಂದ ದೇಹದ ಅಂಗಾಂಗಗಳಲ್ಲಿ ಟಾಕ್ಸಿನ್ ದೂರವಾಗಿ ಎಸಿಡಿಟಿ ಸಮಸ್ಯೆ ನಿವಾರಣೆಯಾಗುತ್ತದೆ. ನಿಯಮಿತವಾಗಿ ಎಳನೀರು ಸೇವಿಸುವುದರಿಂದ ಕಿಡ್ನಿ ಸ್ಟೋನ್ ಸಮಸ್ಯೆ ಬಗೆಹರಿಸಿಕೊಳ್ಳಬಹುದು.ಮಜ್ಜಿಗೆ ಮತ್ತು ನಿಂಬೆಹಣ್ಣಿನ ರಸ ಒಂದು ಲೋಟಕ್ಕೆ 10ರೂ ಹಾಗೂ ಕಬ್ಬಿನ ಹಾಲಿಗೆ 20ರೂ., ಮೋಸಂಬಿ ಮತ್ತು ಪೈನ್ ಆಪಲ್ ಜ್ಯೂಸ್ ಗಳಿಗೆ 40ರೂ., ಆಫಲ್ ಜ್ಯೂಸಿಗೆ 50ರೂ., ಸಪೋಟ ಜ್ಯೂಸಿಗೆ 45ರೂ., ಡ್ರೈಪ್ರೂಟ್ಸ್ ಜ್ಯೂಸಿಗೆ 65ರೂ. ದೇವನಹಳ್ಳಿ ತಾಲೂಕಿನಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾರಂಭಗೊಂಡ ನಂತರ ಭೂಮಿ ಬೆಲೆ ಹೆಚ್ಚಾಗಿದ್ದರಿಂದ ಲೇಔಟ್ ಮತ್ತು ಬಡಾವಣೆಗಳ ನಿರ್ಮಾಣ ಸರ್ಕಾರದಿಂದ ಕೆಐಡಿಬಿ ಭೂ ಸ್ವಾಧೀನ ಸೇರಿದಂತೆ ಅನೇಕ ಸಮಸ್ಯೆಗಳಿಂದ ಫಲವತ್ತಾದ ಭೂಮಿಗಳು ಭೂಮಾಫಿಯಗೆ ಹೋಗುತ್ತಿದೆ. ಆದರೆ, ವಿಜಯಪುರ-ದೇವನಹಳ್ಳಿಯಲ್ಲಿ ತೆಂಗಿನ ತೋಟಗಳ ಸಂಖ್ಯೆಯಲ್ಲಿ ಜಿಲ್ಲೆಯಲ್ಲಿಯೇ ಅತೀ ಕಡಿಮೆ ಪ್ರದೇಶವನ್ನು ಹೊಂದಿದೆ.

## ಎಳನೀರು ಬೆಳೆಯುವರ ಪ್ರಮಾಣ ಕಡಿಮೆ ಇದೆ...

ಪಟ್ಟಣದ ಎಳನೀರು ವ್ಯಾಪಾರಿ ರಾಮಪ್ಪ ಮಾತಣಾಡಿ ಬೇಸಿಗೆ ಸಂದರ್ಭದಲ್ಲಿ ಎಳನೀರಿಗೆ ಹೆಚ್ಚಿನ ಬೇಡಿಕೆ ಇರುತ್ತದೆ. ಎಳನೀರು ವ್ಯಾಪಾರ ಮಾಡಲಾಗುತ್ತಿದೆ. ಆಸ್ಪತ್ರೆಯಿಂದ ಬರುವ ರೋಗಿಗಳಿಗೆ, ಗರ್ಭಿಣಿಗಳಿಗೆ, ವಯೋವೃದ್ಧರಿಗೆ , 35ರೂಪಾಯಿ ಬೆಲೆಯಲ್ಲಿ ಎಳನೀರನ್ನು ನೀಡುತ್ತಿದ್ದೇವೆ. ತಾಲೂಕಿನ ಮತ್ತು ಜಿಲ್ಲೆಯ ಅಕ್ಕಪಕ್ಕದ ತೋಟಗಳಿಂದ ಎಳನೀರನ್ನು ಖರೀದಿಸಿ ತರಲಾಗುತ್ತಿದೆ. ಜನರ ಬಾಯಾರಿಕೆ ತೀರಿಸಬೇಕಾದರೆ ಅದು ಎಳನೀರಿನಿಂದ ಮಾತ್ರ ಸಾದ್ಯ ಎಂದರು. ಯೋಗಗುರು ರವೀಂದ್ರ ಮಾತಣಾಡಿ ಈ ಬಾರಿ ಬಿಸಿಲಿನ ತಾಪಮಾನ ಹೆಚ್ಚಾಗಿದೆ. ಮಧ್ಯಾಹ್ನದ ವೇಳೆಯಂತೂ ಮರದ ನೆರಳನ್ನು ಹುಡುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಬರೀ ತಲೆಯಲ್ಲಿ ಹೊರಗಡೆ ಹೋದರೆ, ಬಿಸಿಲಿನ ತಾಪಕ್ಕೆ ತಲೆನೋವಿನ ಬಾಧೆ ಹೆಚ್ಚಾಗುತ್ತದೆ. ಎಳನೀರು ಕುಡಿಯುವುದರಿಂದ ಆರೋಗ್ಯ ಉತ್ತಮವಾಗಿರುತ್ತದೆ ಎಂದರು. ಜಿಲ್ಲಾ ತೋಟಗಾರಿಕಾ ಇಲಾಖೆ ಉಪನಿರ್ದೇಶಕ ಗುಣವಂತ ಮಾತಣಾಡಿ ನರೆಗಾ ಯೋಜನೆಯಲ್ಲಿ ಉದ್ಯೋಗ ಚೀಟಿ ಹೊಂದಿದವರಿಗೆ ತೆಂಗಿನ ತೋಟ ಮಾಡುವವರಿಗೆ ಪ್ರೋತ್ಸಾಹವನ್ನು ತೋಟಗಾರಿಕೆ ಇಲಾಖೆಯಿಂದ ನೀಡಲಾಗುತ್ತಿದೆ. ಪ್ರತಿ ಬೇಸಿಗೆ ವೇಳೆಯಲ್ಲಿ ಎಳನೀರಿಗೆ ಹೆಚ್ಚಿನ ಬೇಡಿಕೆ ಉಂಟಾಗುತ್ತದೆ.

ಸಂಜೆ ಮುಗಿಲು
ಶನಿವಾರ
23.3.2024



# ಮುಕೇಶ್ ಅಂಬಾನಿಗೆ ವಾಯ್ಸ್ ಅಂಡ್ ಡೇಟಾದಿಂದ ಜೀವಮಾನ ಸಾಧನೆ ಪ್ರಶಸ್ತಿ



ಮುಂಬೈ, ಭಾರತದ ದೂರಸಂಪರ್ಕ ಕ್ಷೇತ್ರಕ್ಕೆ ನೀಡಿದ ಅಪೂರ್ವ ಕೊಡುಗೆಗಳನ್ನು ಪರಿಗಣಿಸಿ, ರಿಲಯನ್ಸ್ ಇಂಡಸ್ಟ್ರೀಸ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಮುಕೇಶ್ ಅಂಬಾನಿ ಅವರಿಗೆ ವಾಯ್ಸ್ ಅಂಡ್ ಡೇಟಾದಿಂದ ಪ್ರತಿಷ್ಠಿತ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಲಾಗಿದೆ. ನವದೆಹಲಿಯಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಿಲಯನ್ಸ್ ಜಿಯೋ ಇನ್ಫೋಕಾಮ್‌ನ ಅಧ್ಯಕ್ಷ ಮ್ಯಾಥ್ಯೂ ಉಮ್ಮನ್ ಅವರು 2023ನೇ ಇಸವಿಯ ''ಪಾಥ್ ಬ್ರೇಕರ್'' ಪ್ರಶಸ್ತಿಯನ್ನು ನೀಡಿ, ಗೌರವಿಸಲಾಯಿತು. ಈ ಜಂಟಿ ಗೌರವದ ಮೂಲಕ 5ಜಿ ತಂತ್ರಜ್ಞಾನದ ಶೀಘ್ರ ನಿಯೋಜನೆಯನ್ನು ಮುನ್ನಡೆಸುವಲ್ಲಿ, ಭಾರತದ ತಾಂತ್ರಿಕ ಪ್ರಗತಿಯಲ್ಲಿ ಮಹತ್ವದ ಮೈಲುಗಲ್ಲು ಮುಟ್ಟುವಲ್ಲಿ ಉಮ್ಮನ್ ಅವರ ಪ್ರಮುಖ ಪಾತ್ರವನ್ನು ಇದು ಎತ್ತಿ ತೋರಿಸುತ್ತದೆ.

ಮುಕೇಶ್ ಅಂಬಾನಿಯನ್ನು ಜೆಪಿಯು ಜತೆಗೆ ಹೋಲಿಸಿದ ಮ್ಯಾಥ್ಯೂ ಉಮ್ಮನ್, ವಾಯ್ಸ್ ಅಂಡ್ ಡೇಟಾದಿಂದ ಮುಕೇಶ್ ಅಂಬಾನಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿರುವುದರಿಂದ ನಮಗೆ ಗೌರವ ದೊರೆತಂತೆ ಆಗಿದೆ. ಅವರ ಪ್ರಭಾವಶಾಲಿ ನಾಯಕತ್ವ, ಟೆಲಿಕಾಂ, ರೀಟೇಲ್ ವ್ಯಾಪಾರ, ಮಾಧ್ಯಮ ಮತ್ತು ಕ್ರೀಡೆಗಳನ್ನು ವ್ಯಾಪಿಸಿದ್ದು, ಸೇರ್ಪಡೆ ಮಿತಿಗಳನ್ನು ತಳ್ಳಿದ್ದು ಮತ್ತು ಎಲ್ಲರಿಗೂ ಕೈಗೆಟಕುವ ಬೆಲೆ ದೊರೆಯುವಂತೆ ಆಗಿದೆ. ಈ ನೀತಿಯು ರಿಲಯನ್ಸ್ ಪ್ರತಿಪಾದಿಸುವ ಎಲ್ಲದರಲ್ಲೂ ಒಳಗೊಂಡಿರುತ್ತದೆ. ಇಂದಿನ ಪರಿವರ್ತಕ ತಂತ್ರಜ್ಞಾನದ ಯುಗದಲ್ಲಿ ಡಿಜಿಟಲ್ ಜಗತ್ತಿನಲ್ಲಿ ಭಾರತದ ಪಾತ್ರವು ಕ್ರಾಂತಿಕಾರಿ ಆಗಲಿದೆ. ಉದ್ಯಮವಾಗಿ ಮತ್ತು ರಾಷ್ಟ್ರವಾಗಿ ನಮ್ಮ ಕೊಡುಗೆಗಳು ಅಗಾಧವಾದದ್ದು. ಈ ಮೂಲಕ ಭಾರತೀಯರ ಭವಿಷ್ಯನ್ನು ಹೆಚ್ಚು ಸಮಾನ ಮತ್ತು ಸುಸ್ಥಿರತೆಯತ್ತ ಸಾಗುತ್ತವೆ, ಎಂದಿದ್ದಾರೆ.

ಮ್ಯಾಥ್ಯೂ ಉಮ್ಮನ್ ಅವರು ತಮ್ಮ ಪ್ರಶಸ್ತಿ ಸ್ವೀಕಾರ ಭಾಷಣದಲ್ಲಿ, ಈ ಮಾನ್ಯತೆಗಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸಿದರು ಮತ್ತು ತಾಂತ್ರಿಕ ಪ್ರಗತಿಗೆ ಚಾಲನೆ ನೀಡುವಲ್ಲಿ ಸಹಯೋಗದ ಪ್ರಮುಖ ಪಾತ್ರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ''ಇದೇ ಉದ್ಯಮದಲ್ಲಿ ಇರುವಂಥ ಇಬ್ಬರು ಗೌರವಾನ್ವಿತರಾದ ನೀರಜ್ ಮಿತ್ತಲ್ ಮತ್ತು ಗೋಪಾಲ್ ವಿಠ್ಠಲ್ ಅವರೊಂದಿಗೆ ನಾನು ಪಡೆದ ಈ ಗೌರವದಿಂದ ಹೆಚ್ಚು ಸಂತೋಷವಾಗಿದೆ. ಇನ್ನು ಅವರು ಮಾಡುವುದಕ್ಕೆ ಸಾಧ್ಯವಾಗುವ ಎಲ್ಲ ಸಾಧನೆಗೂ ಅಭಿನಂದಿಸಲು ಬಯಸುತ್ತೇನೆ ಎಂದರು.

## ಚುನಾವಣಾ ಪತ್ರದಲಿ 'ಯುದ್ಧಬೇಡ' ಎಂದು ಬರೆದಿದ್ದ ಮಹಿಳೆಗೆ ಜೈಲುಶಿಕ್ಷೆ

**ರಷ್ಯಾ:** ಇತ್ತೀಚೆಗೆ ನಡೆದಿದ್ದ ರಶ್ಯ ಅಧ್ಯಕ್ಷೀಯ ಚುನಾವಣೆಯ ಮತಪತ್ರದಲ್ಲಿ 'ಯುದ್ಧಬೇಡ' ಎಂದು ಬರೆದಿದ್ದ ಮಹಿಳೆಗೆ 8 ದಿನಗಳ ಜೈಲುಶಿಕ್ಷೆ ವಿಧಿಸಲಾಗಿದೆ. ಚುನಾವಣೆಯಲ್ಲಿ ವ್ಲಾದಿಮಿರ್ ಪುಟಿನ್ ಗೆಲುವು ಸಾಧಿಸಿದ್ದು 6ನೇ ಭಾರಿಗೆ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಚುನಾವಣೆಯ ದಿನದಂದು ಮತ ಹಾಕಲು ಬಂದಿದ್ದ ಸೈಂಟ್ ಪೀಟರ್ಸ್‌ಬರ್ಗ್ ನ ಅಲೆಕ್ಸಾಂಡ್ರಾ, ಚಿರ್ಯಟ್ಯೆವಾ ಮತಪತ್ರದ ಹಿಂಬದಿಯಲ್ಲಿ ಕೆಂಪು ಮಾರ್ಕರ್ ಪೆನ್ನಿಂದ 'ಯುದ್ಧಬೇಡ' ಎಂದು ಬರೆದು ಅದನ್ನು ಮತಪೆಟ್ಟಿಗೆಯೊಳಗೆ ಹಾಕಿದ್ದಳು. ಗೂಂಡಾಗಿರಿ ಮತ್ತು ರಶ್ಯದ ಸಶಸ್ತ್ರ ಪಡೆಗಳನ್ನು ಅಪಖ್ಯಾತಿಗೊಳಿಸಿದ ಅಪರಾಧಕ್ಕೆ ಆಕೆಗೆ 40,000 ರೂಬಲ್ಸ್(436 ಡಾಲರ್ಗಳು) ದಂಡ ಮತ್ತು 8 ದಿನಗಳ ಜೈಲುಶಿಕ್ಷೆ ವಿಧಿಸಲಾಗಿದೆ. ಈ ಕೃತ್ಯದ ಮೂಲಕ ಸರಕಾರದ ಆಸ್ತಿಗೆ ಹಾನಿ ಎಸಗಲಾಗಿದೆ ಎಂದು ಸೈಂಟ್ ಪೀಟರ್ಸ್‌ಬರ್ಗ್ ನ ಜಿಲ್ಲಾ ನ್ಯಾಯಾಲಯದ ಆದೇಶ ತಿಳಿಸಿದೆ.



## ವಿಶ್ವಸಂಸ್ಥೆಯಲ್ಲಿ ಮೊದಲ ಜಾಗತಿಕ ಕೃತಕಬುದ್ಧಿಮತ್ತೆ ನಿರ್ಣಯ ಅಂಗೀಕಾರ



**ಜಿನೇವಾ:** ವೈಯಕ್ತಿಕ ಡೇಟಾವನ್ನು ರಕ್ಷಿಸಲು, ಕೃತಕ ಬುದ್ಧಿಮತ್ತೆ(ಎಐ)ಯ ಅಪಾಯದ ಮೇಲೆ ನಿಗಾ ವಹಿಸಲು ಮತ್ತು ಮಾನವ ಹಕ್ಕುಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಎಐ ಕುರಿತ ಪ್ರಥಮ ಜಾಗತಿಕ ನಿರ್ಣಯವನ್ನು ವಿಶ್ವಸಂಸ್ಥೆಯ ಸಾಮಾನ್ಯ ಸಭೆ ಗುರುವಾರ ಸ್ವೀಕರಿಸಿದೆ ಎಂದು ಉನ್ನತ ಮೂಲಗಳು ಹೇಳಿವೆ. ಅಮೆರಿಕ ಪ್ರಸ್ತಾಪಿಸಿದ್ದ ನಿರ್ಣಯವನ್ನು ಚೀನಾ ಸೇರಿದಂತೆ 121 ಇತರ ದೇಶಗಳು ಬೆಂಬಲಿಸಿದ್ದವು. ಆದರೆ ಗೌಪ್ಯತಾ ನೀತಿಗಳನ್ನು ಬಲಪಡಿಸುವುದು ಸೇರಿದಂತೆ ಹಲವು ಸಲಹೆಗಳ ಬಗ್ಗೆ ಸುಮಾರು 3 ತಿಂಗಳ ಸಮಾಲೋಚನೆಯ ಬಳಿಕ ಅಂತಿಮವಾಗಿ ನಿರ್ಣಯವನ್ನು ವಿಶ್ವಸಂಸ್ಥೆ ಸ್ವೀಕರಿಸಿದೆ ಎಂದು ಅಮೆರಿಕದ ಅಧಿಕಾರಿಗಳು ಹೇಳಿದ್ದಾರೆ. 'ಎಐ ಕುರಿತಂತೆ ಪ್ರಪ್ರಥಮ ನೈಜ ಜಾಗತಿಕ ಒಮ್ಮತದ ದಾಖಲೆ ಇದಾಗಿದೆ. ನಾವು ಕ್ಷಿಪ್ರವಾಗಿ ಬದಲಾಗುತ್ತಿರುವ ತಂತ್ರಜ್ಞಾನಗೊಂದಿಗೆ ಪ್ರಕ್ಷುಬ್ಧವಾಗಿರುವ ನೀರಿನಲ್ಲಿ ನೌಕಾಯಾನ ಮಾಡುತ್ತಿದ್ದೇವೆ. ನಮ್ಮ ಮೌಲ್ಯಗಳ ಬೆಳಕಿನಲ್ಲಿ ಮುನ್ನಡೆಯುವುದು ಎಂದಿಗಿಂತಲೂ ಹೆಚ್ಚು ಮುಖ್ಯವಾಗಿದೆ' ಎಂದು ಅಧಿಕಾರಿಗಳು ಪ್ರತಿಪಾದಿಸಿದ್ದಾರೆ. ಕೃತಕ ಬುದ್ಧಿಮತ್ತೆಯನ್ನು (ಆರ್ಟಿಫೀಷಿಯಲ್ ಇಂಟಲಿಜೆನ್ಸ್) ಪ್ರಜಾಪ್ರಭುತ್ವ ಪ್ರಕ್ರಿಯೆಗಳನ್ನು ಅಡ್ಡಿಪಡಿಸಲು ಬಳಸಬಹುದು, ವಂಚನೆಯನ್ನು ಪ್ರೇರೇಪಿಸಲಿದೆ ಮತ್ತು ಭಾರೀ ಪ್ರಮಾಣದಲ್ಲಿ ಉದ್ಯೋಗ ನಷ್ಟಕ್ಕೆ ಕಾರಣವಾಗಲಿದೆ ಎಂಬ ಭೀತಿಯ ನಡುವೆಯೇ ಕೃತಕ ಬುದ್ಧಿಮತ್ತೆಯ ಅಭಿವೃದ್ಧಿಯನ್ನು ರೂಪಿಸಲು ಹಲವು ದೇಶಗಳು ಕೈಗೊಂಡಿರುವ ಸರಣಿ ಉಪಕ್ರಮಗಳಲ್ಲಿ ಇದು ಇತ್ತೀಚಿನ ಪ್ರಕ್ರಿಯೆಯಾಗಿದೆ. ಕೃತಕ ಬುದ್ಧಿಮತ್ತೆ ವ್ಯವಸ್ಥೆಗಳ ಅಸಮರ್ಪಕ ಅಥವಾ ದುರುದ್ದೇಶಪೂರಿತ ವಿನ್ಯಾಸ, ಅಭಿವೃದ್ಧಿ, ನಿಯೋಜನೆ ಮತ್ತು ಬಳಕೆ ಮಾನವ ಹಕ್ಕುಗಳು ಮತ್ತು ಮೂಲಭೂತ ಸ್ವಾತಂತ್ರ್ಯಗಳ ರಕ್ಷಣೆ, ಪ್ರಚಾರಕ್ಕೆ ಅಡ್ಡಿಯಾಗಬಹುದು ಎಂದು ನಿರ್ಣಯದಲ್ಲಿ ಉಲ್ಲೇಖಿಸಲಾಗಿದೆ.

# ಪ್ರಧಾನಿ ಮೋದಿಗೆ ಭೂತಾನ್‌ನ ಅತ್ಯುನ್ನತ ನಾಗರಿಕ ಪ್ರಶಸ್ತಿ

**ಥಿಂಪು:** ಪ್ರಧಾನಿ ಮೋದಿ ಅವರು ಇಂದು ಭೂತಾನ್ನ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಆರ್ಡರ್ ಆಫ್ ದಿ ಡ್ರುಕ್ ಗ್ಯಾಲ್ಪೋವನ್ನು ಸ್ವೀಕರಿಸಿದ್ದು, ಈ ಗೌರವವನ್ನು ಪಡೆದ ಮೊದಲ ಭೂತನ್ ದೇಶದ ಹೊರಗಿನ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಪ್ರಧಾನಿ ಮೋದಿ ಭೂತಾನ್ನ ಪ್ರತಿಷ್ಠಿತ ನಾಗರಿಕ ಗೌರವವನ್ನು ಪಡೆದ ಮೊದಲ ವಿದೇಶಿ ಸರ್ಕಾರದ ಮುಖ್ಯಸ್ಥರಾಗಿದ್ದಾರೆ.

ಉಭಯ ನಾಯಕರು ರಾಜಧಾನಿಯಲ್ಲಿ ಭೇಟಿಯಾದ ನಂತರ ಭೂತಾನ್ನ ರಾಜ ಜಿಗ್ಮೆ ಅವರು ಪಿಎಂ ಮೋದಿಯವರಿಗೆ ಆರ್ಡರ್ ಆಫ್ ದಿ ಡ್ರುಕ್ ಗ್ಯಾಲ್ಪೋ ಪ್ರಶಸ್ತಿಯನ್ನು ನೀಡಿದರು.

ಸ್ಥಾಪಿತವಾದ ಶ್ರೇಯಾಂಕ ಮತ್ತು ಪ್ರಾಶಸ್ತ್ಯದ ಪ್ರಕಾರ, ಆರ್ಡರ್ ಆಫ್ ದ ಡ್ರುಕ್ ಗ್ಯಾಲ್ಪೋ ಅನ್ನು ಜೀವಮಾನದ ಸಾಧನೆಗಾಗಿ ನೀಡುವ ಪ್ರಶಸ್ತಿಯಾಗಿ ಸ್ಥಾಪಿಸಲಾಯಿತು. ಇದು ಭೂತಾನ್ನಲ್ಲಿ ಅತ್ಯುನ್ನತ ಗೌರವವಾಗಿದೆ.



## ರೈಲಿನಲ್ಲಿ ಪ್ರಯಾಣಿಕರಿಗೆ ಆಹಾರ ಒದಗಿಸುವ ಪ್ಯಾಂಟ್ರಿ ಕಾರ್ ಬದಲಿಗೆ ಹೊಸ ಕ್ಲಸ್ಟರ್ ವ್ಯವಸ್ಥೆ

**ಬೆಂಗಳೂರು:** ರೈಲಿನಲ್ಲಿ ಪ್ರಯಾಣಿಕರಿಗೆ ಆಹಾರ ಒದಗಿಸುವ ಪ್ಯಾಂಟ್ರಿ ಕಾರ್ನಲ್ಲಿ ಜೂನ್ ತನಕ ಮಾತ್ರ ಆಹಾರ ಲಭ್ಯವಿರುವುದಾಗಿ ರೈಲ್ವೆ ಸಚಿವಾಲಯ ಮಾಹಿತಿ ನೀಡಿದೆ. ನಿಲ್ದಾಣಗಳಲ್ಲಿರುವ ಖಿಲಅಖಿಲ ಅಡುಗೆ ಕೋಣೆಗಳನ್ನೂ ಮುಚ್ಚುವ ಬಗ್ಗೆ ಮಾಹಿತಿ ನೀಡಿದ ಸಚಿವಾಲಯ, ರೈಲಿನಲ್ಲಿ ಚಹಾ ಮತ್ತು ನೀರು ಬಿಸಿ ಮಾಡುವ ಸೌಲಭ್ಯ ಲಭ್ಯವಿರುತ್ತದೆ ಎಂದಿದೆ. ಈಗ ಇರುವ ಪ್ಯಾಂಟ್ರಿ ಕಾರ್ ಬದಲು ಕ್ಲಸ್ಟರ್ ಆಧಾರಿತ ಪ್ಯಾಂಟ್ರಿ ಕಾರ್ ಪರಿಚಯಿಸಲು ನಿರ್ಧರಿಸಲಾಗಿದ್ದು, ಇದಕ್ಕೆ ಟೆಂಡರ್ ಕರೆಯುವ ನಿರೀಕ್ಷೆಯಿದೆ. ಪ್ರಯಾಣಿಕರಿಗೆ ಗುಣಮಟ್ಟದ ಆಹಾರ ಪೂರೈಸುವ ಸಲುವಾಗಿ ಕ್ಲಸ್ಟರ್ಗಳನ್ನು ನಿಯಮಿತವಾಗಿ ಪರಿಶೀಲಿಸಲಾಗುವುದು ಮತ್ತು ಹಠಾತ್ ದಾಳಿಗಳನ್ನೂ ಮಾಡಲಾಗುವುದು. ಅಗತ್ಯವಿದ್ದಲ್ಲಿ ಆಹಾರ ಶುದ್ಧತೆಯನ್ನು ಪರೀಕ್ಷಿಸಲಾಗುವುದು.



## ಉಕ್ರೇನ್‌ನ ಜಲವಿದ್ಯುತ್ ಸ್ಥಾವರ ಮೇಲೆ ರಷ್ಯಾ ಕ್ಷಿಪಣಿ ದಾಳಿ

**ಉಕ್ರೇನ್:** ಉಕ್ರೇನ್‌ನ ಜಲವಿದ್ಯುತ್ ಸ್ಥಾವರ ಸೇರಿದಂತೆ ದೇಶದ ಬಹುಪಾಲು ವಿದ್ಯುತ್ ಸೌಕರ್ಯಗಳನ್ನು ಗುರಿಯಾಗಿಸಿ ರಷ್ಯಾ ಡ್ರೋನ್ ಮತ್ತು ಕ್ಷಿಪಣಿ ದಾಳಿ ನಡೆಸಿದೆ. ಇದರಿಂದಮೂವರು ನಾಗರಿಕರು ಹತರಾಗಿದ್ದಾರೆ . ಜೊತೆಗೆ ಹಲವೆಡೆ ವಿದ್ಯುತ್ ಪೂರೈಕೆ ವ್ಯತ್ಯಯಗೊಂಡಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ. 'ರಾತ್ರಿ ವೇಳೆ ಡ್ರೋನ್ ಮತ್ತು ರಾಕೆಟ್ ದಾಳಿ ನಡೆದಿದೆ. ಇತ್ತೀಚಿನ ದಿನಗಳಲ್ಲಿ ದೇಶದ ಇಂಧನ ವಲಯಗಳ ಮೇಲೆ ನಡೆದ ಅತ್ಯಂತ ದೊಡ್ಡ ದಾಳಿ ಇದು. ರಷ್ಯಾದ ಗುರಿ ಹಾನಿ ಮಾಡುವುದಷ್ಟೇ ಆಗಿಲ್ಲ, ಕಳೆದ ವರ್ಷದಂತೆ ನಮ್ಮ ಇಂಧನ ವ್ಯವಸ್ಥೆಗೆ ದೊಡ್ಡಮಟ್ಟದಲ್ಲಿ ಅಡಚಣೆ ಮಾಡುವುದಾಗಿದೆ' ಎಂದು ಉಕ್ರೇನ್ ಇಂಧನ ಸಚಿವ ಜರ್ಮನ್ ಗಲುಶ್ಚೆಂಕೊ ತಿಳಿಸಿದ್ದಾರೆ.ಈ ದಾಳಿಯಿಂದ ಯುರೋಪ್ನ ಅತಿ ದೊಡ್ಡ ಝಪೊರಿಝಿಯಾ ಅಣು ವಿದ್ಯುತ್ ಸ್ಥಾವರಕ್ಕೆ ವಿದ್ಯುತ್ ಪೂರೈಸುವ ನಿಪ್ರೊ ಜಲವಿದ್ಯುತ್ ಸ್ಥಾವರದಲ್ಲಿ ಬೆಂಕಿ ಹೊತ್ತಿಕೊಂಡಿದೆ. ಸ್ಥಾವರಕ್ಕೆ ವಿದ್ಯುತ್ ಪೂರೈಸುತ್ತಿದ್ದ 750 ಕೆ.ವಿ ಮಾರ್ಗ ಕಡಿತವಾಗಿದೆ. ಝಪೊರಿಝಿಯಾ ಅಣುಸ್ಥಾವರವನ್ನು ರಷ್ಯಾ ಪಡೆಗಳು ಆಕ್ರಮಿಸಿವೆ. ಸ್ಥಾವರದ ಸುತ್ತಲೂ ಕದನ ನಡೆಯುತ್ತಿದ್ದು, ಸಂಭಾವ್ಯ ಅಣು ದುರಂತದ ಆತಂಕ ಎದುರಾಗಿದೆ.



## ಜರ್ಮನಿಯ ಸಂಶೋಧನಾ ಹಡಗಿಗೆ ನಿಲ್ಲಲು ಶ್ರೀಲಂಕಾ ಅನುಮತಿ

**ಕೊಲಂಬೋ (ಶ್ರೀಲಂಕಾ):** ಶ್ರೀಲಂಕಾವು ಮತ್ತೊಮ್ಮೆ ತನ್ನ ಬಂದರಿನಲ್ಲಿ ಸಂಶೋಧನೆ ಮಾಡುವ ನೌಕೆಗಳನ್ನು ನಿಲ್ಲಿಸಲು ಅನುಮತಿ ನೀಡಿದೆ. ಜರ್ಮನಿಯ ಒಂದು ನೌಕೆಗೆ ಈಗ ಅನುಮತಿ ನೀಡಿದೆ. ಈ ಬಗ್ಗೆ ಚೀನಾವು ಶ್ರೀಲಂಕಾವನ್ನು ಟೀಕಿಸಿದೆ. ಶ್ರೀಲಂಕಾದ ಚೀನಾದ ರಾಯಭಾರಿಯು ಇದನ್ನು ಖಂಡಿಸುತ್ತಾ, 'ಫೆಬ್ರವರಿಯಲ್ಲಿ ನಮ್ಮ ನೌಕೆಯನ್ನು ಶ್ರೀಲಂಕಾ ಬಂದರಿನಲ್ಲಿ ನಿಲ್ಲಿಸಲು ಅನುಮತಿಸಲಿಲ್ಲ, ಆದರೆ ಜರ್ಮನ್ ನೌಕೆಯನ್ನು ನಿಲ್ಲಿಸಲು ಏಕೆ ಅನುಮತಿ ಕೊಟ್ಟಿರಿ?' ಆ ಸಮಯದಲ್ಲಿ ಭಾರತವು ಆಕ್ಷೇಪಿಸಿದ ನಂತರ ಶ್ರೀಲಂಕಾವು ಸಂಶೋಧನೆಯ ಹೆಸರಿನಲ್ಲಿ ಬೇಹುಗಾರಿಕೆ ಮಾಡುವ ಚೀನಾ ನೌಕೆಗೆ ಅನುಮತಿ ನಿರಾಕರಿಸಿ ಸಂಶೋಧನೆ ಮಾಡುವ ಎಲ್ಲಾ ವಿದೇಶಿ ನೌಕೆಗಳ ಮೇಲೆ ನಿಷೇಧ ಹೇರಿತ್ತು.



## ಸುಡಾನ್‌ಗೆ 47 ದಶಲಕ್ಷ ಡಾಲರ್ ನೆರವು ಘೋಷಿಸಿದ ಅಮೆರಿಕ

**ವಾಷಿಂಗ್ಟನ್:** ಯುದ್ಧದಿಂದ ಜರ್ಝರಿತಗೊಂಡಿರುವ ಸುಡಾನ್ ಹಾಗೂ ಎರಡು ನೆರೆಯ ದೇಶಗಳಿಗೆ 47 ದಶಲಕ್ಷ ಡಾಲರ್ಗೂ ಹೆಚ್ಚಿನ ಮಾನವೀಯ ನೆರವನ್ನು ಅಮೆರಿಕ ಘೋಷಿಸಿದೆ.



ಸುಡಾನ್ನಲ್ಲಿ ಕಳೆದ 1 ವರ್ಷದಿಂದ ಮುಂದುವರಿದಿರುವ ಸಂಘರ್ಷದ ಕಾರಣ ಕನಿಷ್ಠ 1 ದಶಲಕ್ಷ ಜನತೆ ಅಲ್ಲಿಂದ ದಕ್ಷಿಣ ಸುಡಾನ್ ಮತ್ತು ಚಾಡ್ ದೇಶಗಳಿಗೆ ಪಲಾಯನ ಮಾಡಿದ್ದಾರೆ. ಈ ಮೂರೂ ದೇಶಗಳಲ್ಲಿ ಸಂಕಷ್ಟದಲ್ಲಿರುವ ಸುಮಾರು 25 ದಶಲಕ್ಷ ಜನತೆಗೆ(ನಿರಾಶ್ರಿತರ ಸಹಿತ) ಈ ನೆರವಿನ ಪ್ಯಾಕೇಜ್ನಿಂದ ಸಹಾಯವಾಗಲಿದೆ. ಅಮೆರಿಕದ ಮಾನವೀಯ ನೆರವು ಸುಡಾನ್ ಜನತೆಗೆ ಆಹಾರ, ನೀರು ಮತ್ತು ನೈರ್ಮಲ್ಯ ವ್ಯವಸ್ಥೆ, ಆಶ್ರಯ, ವೈದ್ಯಕೀಯ ಸೇವೆ(ಮಾನಸಿಕ ಆರೋಗ್ಯ ನೆರವು ಸೇರಿದಂತೆ) ಮತ್ತು ರಕ್ಷಣೆಯನ್ನು ಒದಗಿಸಲಿದೆ. ಇದರೊಂದಿಗೆ ಕಳೆದ ವರ್ಷದಿಂದ ಸುಡಾನ್ಗೆ 968 ದಶಲಕ್ಷ ಡಾಲರ್ ಗೂ ಹೆಚ್ಚಿನ ಮೊತ್ತದ ನೆರವನ್ನು ಅಮೆರಿಕ ಒದಗಿಸಿದಂತಾಗಿದೆ ಎಂದು ಅಮೆರಿಕದ ವಿದೇಶಾಂಗ ಇಲಾಖೆ ಹೇಳಿದೆ. ಸುಡಾನ್ನಲ್ಲಿ ಕಳೆದ ಎಪ್ರಿಲ್ನಲ್ಲಿ ಜನರಲ್ ಅಬ್ದುಲ್ ಫತಾಹ್ ಬುರ್ಹಾನ್ ನೇತೃತ್ವದ ಸೇನೆ ಮತ್ತು ಮುಹಮ್ಮದ್ ಹಮ್ದನ್ ಡಗಾಲೊ ನೇತೃತ್ವದ ಅರೆಸೇನಾ ಪಡೆಯ ನಡುವೆ ಉಂಟಾದ ಬಿಕ್ಕಟ್ಟು ಉಲ್ಬಣಿಸಿ ಎರಡೂ ಪಡೆಗಳ ನಡುವೆ ಆಂತರಿಕ ಯುದ್ಧಕ್ಕೆ ಕಾರಣವಾಗಿದೆ. ಸಂಘರ್ಷದಲ್ಲಿ ಸಾವಿರಾರು ಮಂದಿ ಮೃತಪಟ್ಟಿರುವ ವರದಿಯಿದ್ದು 9 ದಶಲಕ್ಷಕ್ಕೂ ಅಧಿಕ ಮಂದಿ ಆಂತರಿಕವಾಗಿ ಸ್ಥಳಾಂತರಗೊಂಡಿದ್ದು 1.5 ದಶಲಕ್ಷ ನಿರಾಶ್ರಿತರು ನೆರೆಯ ದೇಶಗಳಿಗೆ ಪಲಾಯನ ಮಾಡಿದ್ದಾರೆ ಎಂದು ಅಂದಾಜಿಸಲಾಗಿದೆ.

## ಅರುಣಾಚಲ ಪ್ರದೇಶ ಭಾರತದ ಅವಿಭಾಜ್ಯ ಅಂಗ: ಅಮೆರಿಕ

**ದೆಹಲಿ:** ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಅಂಗ ಎಂದ ಅಮೆರಿಕದ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿರುವ ಚೀನಾ, 'ವಾಷಿಂಗ್ಟನ್ಗೆ ಭಾರತ ಮತ್ತು ಚೀನಾ ಗಡಿ ವಿವಾದ ಕುರಿತು ತಲೆಕೆಡಿಸಿಕೊಳ್ಳುವ ಅಗತ್ಯವಿಲ್ಲ' ಎಂದಿದೆ.



'ಅರುಣಾಚಲ ಪ್ರದೇಶ ಭಾರತದ ಅವಿಭಾಜ್ಯ ಅಂಗ' ಎಂಬ ಅಮೆರಿಕದ ವಕ್ತಾರ ವೇದಾಂತ ಪಟೇಲ್ ಅವರ ಹೇಳಿಕೆ ಹೊರಬಿದ್ದ ಬೆನ್ನಲ್ಲೇ ಪ್ರತಿಕ್ರಿಯಿಸಿರುವ ಚೀನಾ, 'ತನ್ನ ಸ್ವಾರ್ಥ ಭೌಗೋಳಿಕ ರಾಜಕೀಯ ಹಿತಾಸಕ್ತಿಗಾಗಿ ಇತರ ರಾಷ್ಟ್ರಗಳ ವಿವಾದಗಳನ್ನು ಪ್ರಚೋದಿಸುವ ಕಾರ್ಯವನ್ನು ಬಿಡಬೇಕು' ಎಂದು ಎಚ್ಚರಿಸಿದೆ. 'ವಾಸ್ತವಿಕ ನಿಯಂತ್ರಣ ರೇಖೆಯಾದ್ಯಂತ ತನಗೆ ಸೇರಿದ ಜಾಗವೆಂದು ಏಕಪಕ್ಷೀಯವಾಗಿ ಹಕ್ಕುಸಾಧಿಸುವ ಚೀನಾದ ಪ್ರಯತ್ನವನ್ನು ಅಮೆರಿಕ ಬಲವಾಗಿ ವಿರೋಧಿಸುತ್ತದೆ' ಎಂದು ಪಟೇಲ್ ಹೇಳಿದ್ದರು. ಈ ಹೇಳಿಕೆಗೆ ಪ್ರತಿಕ್ರಿಯಿಸಿದ್ದ ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್, 'ಅಮೆರಿಕದ ಹೇಳಿಕೆಯನ್ನು ಚೀನಾ ಕಡಾಖಂಡಿತವಾಗಿ ತಿರಸ್ಕರಿಸುತ್ತದೆ. ಭಾರತ ಮತ್ತು ಚೀನಾ ನಡುವಿನ ಗಡಿ ಗುರುತಿಸುವ ಕಾರ್ಯ ಪೂರ್ಣಗೊಂಡಿಲ್ಲ. ಝಾಂಗ್ನಾನ್ (ಅರುಣಾಚಲ ಪ್ರದೇಶಕ್ಕೆ ಚೀನಾ ಇಟ್ಟಿರುವ ಹೆಸರು) ಎಂದೆಂದಿಗೂ ಚೀನಾದ ಭಾಗ. ಇದನ್ನು ಯಾರೂ ನಿರಾಕರಿಸಲಾಗದ ಮೂಲ ಸತ್ಯ' ಎಂದಿದ್ದಾರೆ.

## ಸುಧಾರಣೆಯ ಹಾದಿಯಲ್ಲಿ ಶ್ರೀಲಂಕಾದ ಅರ್ಥವ್ಯವಸ್ಥೆ

**ವಾಷಿಂಗ್ಟನ್:** ಸಾಲದ ಸುಳಿಯಲ್ಲಿ ಸಿಲುಕಿರುವ ಶ್ರೀಲಂಕಾದಲ್ಲಿ ಆರ್ಥಿಕ ಪರಿಸ್ಥಿತಿ ಕ್ರಮೇಣ ಸುಧಾರಿಸುತ್ತಿದೆ ಎಂದು ಅಂತರಾಷ್ಟ್ರೀಯ ಹಣಕಾಸು ಸಂಸ್ಥೆ(ಐಎಂಎಫ್) ಹೇಳಿದೆ. 2022ರಲ್ಲಿ 70%ಕ್ಕೆ ತಲುಪಿದ್ದ ದೇಶದ ಹಣದುಬ್ಬರ ಪ್ರಮಾಣ ಕಳೆದ ತಿಂಗಳು 5.9%ಕ್ಕೆ ಇಳಿದಿದೆ ಮತ್ತು ಆರ್ಥಿಕತೆಯು ಕಳೆದ ವರ್ಷದ ದ್ವಿತೀಯಾರ್ಧದಲ್ಲಿ ವಿಸ್ತರಿಸಿದೆ. 2023ರ ಮೂರನೇ ತ್ರೈಮಾಸಿಕದಲ್ಲಿ ಶ್ರೀಲಂಕಾದ ವರ್ಷದಿಂದ ವರ್ಷಕ್ಕೆ ಆರ್ಥಿಕ ಪ್ರಗತಿ 1.6%ದಷ್ಟಿತ್ತು ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ 4.5%ದಷ್ಟಿತ್ತು ಎಂದು ಐಎಂಎಫ್ ಹೇಳಿದೆ. ಶ್ರೀಲಂಕಾದ ಆರ್ಥಿಕ ಸುಧಾರಣೆಯ ಕುರಿತ ಎರಡನೇ ಅವಲೋಕನ ನಡೆಸುವ ಬಗ್ಗೆ ಐಎಂಎಫ್ ಅಧಿಕಾರಿಗಳ ಜತೆ ಒಪ್ಪಂದಕ್ಕೆ ಬರಲಾಗಿದೆ ಎಂದು ಶ್ರೀಲಂಕಾ ಸರಕಾರ ಹೇಳಿದೆ. ಈ ಒಪ್ಪಂದವನ್ನು ಐಎಂಎಫ್ ಆಡಳಿತ ಮಂಡಳಿ ಅನುಮೋದಿಸಿದರೆ ಶ್ರೀಲಂಕಾಕ್ಕೆ ನೀಡಲಿರುವ ಸಾಲದ ಅಂತಿಮ ಕಂತಾದ 337 ದಶಲಕ್ಷ ಡಾಲರ್ ಮೊತ್ತವನ್ನು ಐಎಂಎಫ್ ಬಿಡುಗಡೆಗೊಳಿಸಲಿದೆ. 2022ರ ಆರಂಭದಲ್ಲಿ ಅತ್ಯಂತ ತೀವ್ರ ಆರ್ಥಿಕ ಬಿಕ್ಕಟ್ಟಿನ ಸುಳಿಯಲ್ಲಿ ಸಿಲುಕಿದ್ದ ಶ್ರೀಲಂಕಾದಲ್ಲಿ ಆಹಾರ, ಔಷಧ, ಇಂಧನ, ವಿದ್ಯುತ್ ಮುಂತಾದ ದೈನಂದಿನ ಅಗತ್ಯದ ವಸ್ತುಗಳ ಕೊರತೆ ಹೆಚ್ಚಿತ್ತು. 2022ರ ಎಪ್ರಿಲ್ನಲ್ಲಿ 83 ಶತಕೋಟಿ ಡಾಲರ್ ಸಾಲ ಪಾವತಿಸಲಾಗದೆ ಶ್ರೀಲಂಕಾ ದಿವಾಳಿತನವನ್ನು ಘೋಷಿಸಿತು.



## 50 ವರ್ಷಗಳಿಂದ ಕಲ್ಲಿನ ಮಗು ಹೊತ್ತಿದ್ದ ಮಹಿಳೆ ಶಸ್ತ್ರಚಿಕಿತ್ಸೆ ಬಳಿಕ ಸಾವು..!

**ನವದೆಹಲಿ:** ಮಹಿಳೆಯೊಬ್ಬರು 50 ವರ್ಷಗಳಿಂದ ಹೊಟ್ಟೆಯಲ್ಲಿ 'ಕಲ್ಲಿನ ಮಗುವನ್ನು' ಇಟ್ಟುಕೊಂಡಿದ್ದು, ಕಲ್ಲಿನ ಮಗುವನ್ನು ಹೊರತೆಗೆಯಲು ವೈದ್ಯರು ಶಸ್ತ್ರಚಿಕಿತ್ಸೆ ನಡೆಸಿದ ನಂತರ 81 ವರ್ಷದ ಮಹಿಳೆ ಸಾವನ್ನಪ್ಪಿದ್ದಾರೆ. ಅಲ್ಮೇಡಾ ವೆರಾ ಎಂಬ ಮಹಿಳೆಯ ದೇಹದಲ್ಲಿ ಕ್ಯಾಲ್ಸಿಫೈಡ್ ಭ್ರೂಣವನ್ನು ವೈದ್ಯರು ಪತ್ತೆಹಚ್ಚಿದ್ದರು. ನಂತರ ಅವರನ್ನು ತುರ್ತು ಶಸ್ತ್ರಚಿಕಿತ್ಸೆಗೆ ಕರೆದೊಯ್ಯಲಾಯಿತು. ಲಿಥೋಪೆಡಿಯನ್ ಎಂದೂ ಕರೆಯಲ್ಪಡುವ ಇದು 56 ವರ್ಷಗಳಿಂದ ಅವರ ದೇಹದಲ್ಲಿತ್ತು ಮತ್ತು ಇದು ಇದುವರೆಗೆ ದಾಖಲಾದ 300 ಪ್ರಕರಣಗಳಲ್ಲಿ ಒಂದಾಗಿದೆ. ಏಳು ಮಕ್ಕಳ ತಾಯಿ ಕೊನೆಯ ಬಾರಿಗೆ 1968 ರಲ್ಲಿ ಗರ್ಭಿಣಿಯಾಗಿದ್ದರು ಮತ್ತು ನಂತರ ಭ್ರೂಣವನ್ನು ತೆಗೆದುಹಾಕಲು ಬ್ರೆಜಿಲ್ನಲ್ಲಿ ಶಸ್ತ್ರಚಿಕಿತ್ಸೆಗೆ ಕರೆದೊಯ್ಯಲಾಯಿತು. ಆದರೆ, ಮರುದಿನ, ಅವರು ಐಸಿಯುನಲ್ಲಿ ನಿಧನರಾದರು.ಶಸ್ತ್ರಚಿಕಿತ್ಸೆಯ ನಂತರ, ಅಪರೂಪದ 'ಕಲ್ಲಿನ ಮಗುವನ್ನು' ಪರೀಕ್ಷೆಗೆ ಕಳುಹಿಸಲಾಯಿತು.



**ಸ್ಟೋನ್ ಬೇಬಿ ಎಂದರೇನು?:** ಸ್ಟೋನ್ ಬೇಬಿ ಎಂಬುದು ಲಿಥೋಪೆಡಿಯನ್ ಅನ್ನು ವಿವರಿಸಲು ಬಳಸುವ ಪದವಾಗಿದೆ . ಮಹಿಳೆ ಎಕ್ಟೋಪಿಕ್ ಗರ್ಭಧಾರಣೆಯನ್ನು ಅನುಭವಿಸಿದಾಗ ಈ ಸ್ಥಿತಿ ಉಂಟಾಗುತ್ತದೆ, ಇದರಲ್ಲಿ ಭ್ರೂಣವು ಸಾಯುತ್ತದೆ , ಆದರೆ ದೇಹಕ್ಕೆ ಪುನಃ ಹೀರಿಕೊಳ್ಳಲು ತುಂಬಾ ದೊಡ್ಡದಾಗಿರುತ್ತದೆ. ಈ ಗರ್ಭಧಾರಣೆಗಳು ಫಲೋಪಿಯನ್ ನಾಳಗಳು ಅಥವಾ ಗರ್ಭಾಶಯದ ಹೊರಗೆ ಭ್ರೂಣವು ಬೆಳೆದಾಗ ಸಂಭವಿಸುತ್ತದೆ. ಕಲ್ಲಿನ ಶಿಶುಗಳು ಅಸಹಜ ಎಕ್ಟೋಪಿಕ್ ಗರ್ಭಧಾರಣೆಯ ಪರಿಣಾಮವಾಗಿದೆ, ಇದರಲ್ಲಿ ಭ್ರೂಣವು ಹೊಟ್ಟೆಯಲ್ಲಿ ಬೆಳೆಯುತ್ತದೆ ಎಂದು ಹೇಳಲಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮನಾಲಿ ಮಂಜಿನಲ್ಲಿ 'ಮ್ಯಾಟ್ನಿ' ಚಿತ್ರದ ಸಾಂಗ್ ಶೂಟ್



ಮ್ಯಾಟ್ನಿ ಸತೀಶ್ ನಿನಾಸಂ, ರಚಿತಾ ರಾಮ್ ಹಾಗೂ ಅದಿತಿ ಪ್ರಭುದೇವ ಅಭಿನಯದ ಸಿನಿಮಾ. ಸತೀಶ್ ಮತ್ತು ರಚಿತಾ ಎರಡನೇ ಬಾರಿ ಜೊತೆಯಾಗಿದ್ದು ಅಯೋಗ್ಯ ನಂತ್ರ ಮತ್ತೆ ಈ ಜೋಡಿ ತೆರೆ ಮೇಲೆ ಒಟ್ಟಿಗೆ ಮಿಂಚಲಿದೆ. ಈಗಾಗಲೇ ಸಾಂಗ್ ಮೂಲಕ ಸದ್ದು ಮಾಡ್ತಿರೋ ಮ್ಯಾಟ್ನಿ ತಂಡ ಈಗ ಮತ್ತೊಂದು ರೋಮ್ಯಾಟಿಕ್ ಹಾಡಿನ ಮೂಲಕ ಪ್ರೇಕ್ಷಕರ ಮುಂದೆ ಬಂದಿದೆ.

ಸದ್ಯ ಬಿಡುಗಡೆಯಾಗಿರೋ ನಿನಗಾಗಿ ಮಿಡಿಯುವುದು ಈ ಹೃದಯ ಅನ್ನೋ ಹಾಡಿನಲ್ಲಿ ಸತೀಶ್ ನಿನಾಸಂ ಹಾಗೂ ಅದಿತಿ ಪ್ರಭುದೇವಾ ಕಾಣಿಸಿಕೊಂಡಿದ್ದಾರೆ. ಈ ಕಂಪ್ಲೀಟ್ ಹಾಡನ್ನು ಮನಾಲಿಯಲ್ಲಿ ಚಿತ್ರೀಕರಣ ಮಾಡಿದ್ದು ಹಾಡು ಸಖತ್ ಬ್ಯೂಟಿಫುಲ್ ಹಾಗೂ ರೋಮ್ಯಾಂಟಿಕ್ ಆಗಿ ಮೂಡಿ ಬಂದಿದೆ.

ಇನ್ನು ಈ ಹಾಡನ್ನು ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಬಿಡುಗಡೆ ಮಾಡುವ ಮೂಲಕ ಮ್ಯಾಟ್ನಿ ಸಿನಿಮಾತಂಡಕ್ಕೆ ಆಲ್ ದ ಬೆಸ್ಟ್ ಹೇಳಿದ್ದಾರೆ. ನಿನಗಾಗಿ ಮಿಡಿಯುವುದು ಹಾಡಿನ ಜೊತೆಗೆ ಮೇಕಿಂಗ್ ಅನ್ನು ಬಿಡುಗಡೆ ಮಾಡಿರೋ ತಂಡ ಮೂರು ದಿನಗಳ ಕಾಲ ಮನಾಲಿ ಚಿತ್ರೀಕರಣ ಹೇಗಿತ್ತು ಅದರ ಜೊತೆ ಚಿತ್ರತಂಡ ಮನಾಲಿಯಲ್ಲಿ ಏನೆಲ್ಲಾ ಸಾಹಸ ಮಾಡಿ ಚಿತ್ರೀಕರಣ ಮಾಡಿದೆ ಅನ್ನೋದನ್ನ ಮೇಕಿಂಗ್ ಮೂಲಕ ತಿಳಿಸಿದ್ದಾರೆ.

ಮ್ಯಾಟ್ನಿ ಸಿನಿಮಾವನ್ನ ಮನೋಹರ್ ಕಾಂಪಲ್ಲಿ ನಿರ್ದೇಶನ ಮಾಡಿದ್ದು ಪಾರ್ವತಿ ಎಸ್ ಗೌಡ ಚಿತ್ರಕ್ಕೆ ಎಫ್ ಥ್ರೀ ಪ್ರೊಡಕ್ಷನ್ಸ್ ಮೂಲಕ ಬಂಡವಾಳ ಹೂಡಿದ್ದಾರೆ. ಇನ್ನು ಈ ಹಾಡಿಗೆ ಕೀರ್ತನ್ ಪೂಜಾರಿ ಕ್ಯಾಮೆರಾ ವರ್ಕ್ ಮಾಡಿದ್ದು, ಸಂತು ಮಾಸ್ಟರ್ ಕೋರಿಯೋಗ್ರಾಫ್ ಮಾಡಿದ್ದಾರೆ. ಪೂರ್ಣಚಂದ್ರ ತೇಜಸ್ವಿ ಸಂಗೀತ ನಿರ್ದೇಶನ ಮಾಡಿರೋ ಮ್ಯಾಟ್ನಿ ಸಿನಿಮಾದ ಈ ರೋಮ್ಯಾಂಟಿಕ್ ಹಾಡನ್ನ ಹೇಮಂತ್ ಕುಮಾರ್ ಗಂಜಂ ಬರೆದಿದ್ದು ಸಾದ್ವಿನಿ ಕೊಪ್ಪ ಹಾಡನ್ನ ಹಾಡಿದ್ದಾರೆ.

ಮ್ಯಾಟ್ನಿ ಸಿನಿಮಾದಲ್ಲಿ ಸತೀಶ್ ನಿನಾಸಂ , ರಚಿತಾ ರಾಮ್, ಅದಿತಿ ಪ್ರಭುದೇವಾ ಸೇರಿದಂತೆ ದೊಡ್ಡ ತಾರಾ ಬಳಗವೇ ಇದೆ. ಶಿವರಾಜ್ ಕೆ ಆರ್ ಪೇಟೆ, ನಾಗಭೂಷನ್, ಪೂರ್ಣ ಮೈಸೂರು, ದಿಗಂತ್ ಸೇರಿದಂತೆ ತಬಲ ನಾಣಿ, ಪ್ರಕಾಶ್ ತುಂಬಿನಾಡು,ಗೋಪಿ ಮಿಮಿಕ್ರಿ,ತುಳಸಿ ಶಿವಮಣಿ ಇನ್ನು ಅನೇಕರು ಅಭಿನಯಿಸಿದ್ದಾರೆ ಏಪ್ರಿಲ್ 5 ರಂದು ಮ್ಯಾಟ್ನಿ ಸಿನಿಮಾ ರಾಜ್ಯಾದ್ಯಂತ ತೆರೆಗೆ ಬರ್ತಿದೆ.

# ಅವಳಿ ಮಕ್ಕಳ ತಾಯಿ ಆಗುತ್ತಿದ್ದಾರೆ ನಟಿ ಅಮಲಾ ಪೌಲ್

ಕನ್ನಡವೂ ಸೇರಿದಂತೆ ಹಲವಾರು ಭಾಷೆಗಳ ಸಿನಿಮಾದಲ್ಲಿ ನಟಿಸಿರುವ ಅಮಲಾ ಪೌಲ್, ತಮ್ಮ ಅಭಿಮಾನಿಗಳಿಗೆ ಮತ್ತೊಂದು ಸಿಹಿ ಸುದ್ದಿ ನೀಡಿದ್ದಾರೆ. ತಾವು ಅವಳಿ ಮಕ್ಕಳ ತಾಯಿ ಆಗುತ್ತಿರುವುದಾಗಿ ಮಾಹಿತಿ ನೀಡಿದ್ದಾರೆ. ಈ ಸುದ್ದಿಯನ್ನು ಕೇಳಿದ ಅವರ ಅಭಿಮಾನಿಗಳಿಗೆ ಶುಭ ಹಾರೈಸಿದ್ದಾರೆ.



ಒಂದು ಕಡೆ ಅವಳಿ ಮಕ್ಕಳ ತಾಯಿ ಆಗುತ್ತಿರುವುದು ಖುಷಿ ಇದ್ದರೆ, ಮತ್ತೊಂದು ಕಡೆ ಅಮಲಾ ನಟನೆಯ 'ಆಡುಜೀವಿತಂ' ಸಿನಿಮಾ ಬಿಡುಗಡೆಗೆ ಸಿದ್ಧವಾಗಿದೆ. ಈ ಚಿತ್ರದಲ್ಲಿ ಪೃಥ್ವಿರಾಜ್ ಸುಕುಮಾರ್‌ಗೆ ಅಮಲಾ ನಾಯಕಿಯಾಗಿದ್ದಾರೆ. ಈ ಸಿನಿಮಾದ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ ಬೋಲ್ಡ್ ಬಟ್ಟೆಯಲ್ಲಿ ಕಾಣಿಸಿಕೊಂಡ ಅಮಲಾಗೆ ನೆಟ್ಟಿಗರು ಕಾಲೆಳೆದಿದ್ದಾರೆ. ಬಟ್ಟೆ ಮ್ಯಾಟರ್‌ಗೆ ನಟಿಯ ಹಿಗ್ಗಾಮುಗ್ಗಾ ಟ್ರೋಲ್ ಮಾಡಿದ್ದಾರೆ.

ಇತ್ತೀಚೆಗೆ ನಟಿ ಅಮಲಾ ಅವರು ಉದ್ಯಮಿ ಜಗತ್ ದೇಸಾಯಿ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಮದುವೆಯಾಗಿ ಒಂದು ತಿಂಗಳ ನಂತರ ತಾಯಿಯಾಗಿರುವ ಗುಡ್ ನ್ಯೂಸ್ ತಿಳಿಸಿದ್ದರು. ಚೊಚ್ಚಲ ಮಗುವಿನ ಆಗಮನಕ್ಕೆ ಎದುರು ನೋಡ್ತಿರುವಾಗ ತಾವು ನಟಿಸಿರುವ ಸಿನಿಮಾಗೂ ಪ್ರಚಾರಕ್ಕೆ ನಟಿ ಸಾಥ್ ನೀಡುತ್ತಿದ್ದಾರೆ.

ಇದೀಗ ಸಂದರ್ಶನಕ್ಕೆ ಬರುವಾಗ ಕಡುನೀಲಿ ಬಣ್ಣದ ಸ್ಲೀವ್‌ಲೆಸ್ ಡ್ರೆಸ್ ಧರಿಸಿ ಬಂದಿದ್ದರು. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದಂತೆ ನೆಟ್ಟಿಗರು ನೆಗೆಟಿವ್ ಕಾಮೆಂಟ್ ಹಾಕಿದ್ದಾರೆ. ಇದೆಂಥಾ ಡ್ರೆಸ್ ಬೆಡ್‌ನಿಂದ ಎದ್ದ ಕೂಡಲೇ ಬಾತ್‌ರೂಮ್‌ಗೆ ಹಾಕಿಕೊಂಡು ಹೋಗುವ ಡ್ರೆಸ್ ಎಂದು ನೆಟ್ಟಿಗರೊಬ್ಬರು ಕುಟುಕಿದ್ದಾರೆ. ನಾನು ಅಮಲಾ ಪೌಲ್ ದೊಡ್ಡ ಅಭಿಮಾನಿಯಾಗಿದ್ದೆ. ಈಗ ಅಭಿಮಾನಿಯಲ್ಲ ಎಂದು ಮತ್ತೊಬ್ಬರು ಹೇಳಿದ್ದಾರೆ. ನಟಿಯ ವಿಡಿಯೋ ಸಿಕ್ಕಾಪಟ್ಟೆ ಟ್ರೋಲ್ ಆಗುತ್ತಿದೆ. ಆದರೆ ನೆಗೆಟಿವ್ ಕಾಮೆಂಟ್‌ಗೆ ನಟಿ ಕ್ಯಾರೆ ಎನ್ನದೇ ತಮ್ಮ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ.



ರಾಷ್ಟ್ರ ಪ್ರಶಸ್ತಿ ವಿಜೇತ ನಿರ್ದೇಶಕ ಬ್ಲೆಸ್ಸಿ ನಿರ್ದೇಶನದ ಈ 'ಆಡುಜೀವಿತಂ' ಚಿತ್ರದ ಕಥೆ ಇಮಿಗ್ರೆಟ್ಸ್ ಸುತ್ತವೇ ಸಾಗುತ್ತದೆ. ತನ್ನ ಹೊಟ್ಟೆ ಪಾಡಿಗಾಗಿ ಕೆಲಸ ಅರಸಿ ಸೌದಿ ಅರೇಬಿಯಾಗೆ ವಲಸೆ ಹೋಗುವ ನಸೀಬ್ ಮೊಹಮ್ಮದ್ ಎನ್ನುವ ಕೇರಳದ ವ್ಯಕ್ತಿ ಅಲ್ಲಿ ಅನುಭವಿಸುವ ಕಷ್ಟ, ಎದುರಿಸುವ ಸಮಸ್ಯೆ ಹೈಲೆಟ್. ಇನ್ನು ಆತನ ಪಾಸ್ಪೋರ್ಟ್ ಕಸಿದು ಆತನಿಗೆ ಕೊಡುವ ಹಿಂಸೆಗಳು ಆ ಬಿಸಿಲಿನ ಮರುಭೂಮಿಯಲ್ಲಿ ಆತ ಪಡುವ ಯಾತನೆ ಕುರಿತು ಸಾಗುವ ಕಥೆ ಇಲ್ಲಿದೆ.

ನಿರ್ದೇಶಕ ಬ್ಲೆಸ್ಸಿ ಅವರ 15 ವರ್ಷದ ಕನಸಿನ ಕಥೆ ಇದು. ಅವರ ಕಲ್ಪನೆಯ ಪಾತ್ರದಲ್ಲಿ ವಲಸಿಗ ವ್ಯಕ್ತಿಯಾಗಿ ಹೊಸ ಲುಕ್ ಮೂಲಕ ಕಾಣಿಸಿಕೊಂಡಿರುವ ಪೃಥ್ವಿರಾಜ್ ಸುಕುಮಾರನ್, ಹಲವಾರು ವರ್ಷಗಳಿಂದ ಈ ಚಿತ್ರಕ್ಕಾಗಿ ದುಡಿದಿದ್ದಾರೆ. ಇಡೀ ಚಿತ್ರತಂಡ ಹಗಲು ರಾತ್ರಿ ಎನ್ನದೆ ಚಿತ್ರದ ಔಟ್ಪುಟ್ ಗಾಗಿ ದುಡಿದಿದೆ. ಪೃಥ್ವಿರಾಜ್ ನಿರೀಕ್ಷೆಯ ಚಿತ್ರ ಇದಾಗಿದ್ದು, ಬ್ಲೆಸ್ಸಿ ನಿರ್ದೇಶನದ ; ಆಡುಜೀವಿತಂ' 2008ರಲ್ಲಿ ಬೆನ್ಯಾಮಿನ್ ಬರೆದ ಅದೇ ಹೆಸರಿನ ಮಲಯಾಳಂ ಕಾದಂಬರಿ ಸಿನಿಮಾ ಇದು.

# ನಿರ್ದೇಶಕನ ಜೊತೆ ಕಮಲ್ ಹಾಸನ್ ಪುತ್ರಿಯ ಪ್ರಣಯ

ಖ್ಯಾತ ನಟ ಕಮಲ್ ಹಾಸನ್ ಪುತ್ರಿ ಶ್ರುತಿ ಹಾಸನ್ ಮತ್ತು ಹೆಸರಾಂತ ನಿರ್ದೇಶಕ ಲೋಕೇಶ್ ಕನಕರಾಜು ರೊಮ್ಯಾಂಟಿಕ್ ಆಗಿ ಕಾಣಿಸಿಕೊಂಡಿರುವ ವಿಡಿಯೋವೊಂದು ತಮಿಳು ಚಿತ್ರ ರಂಗದಲ್ಲಿ ಸಾಕಷ್ಟು ಸದ್ದು ಮಾಡುತ್ತಿದೆ. ಕಲಾವಿದರಿಗೆ ಆಕ್ಷನ್ ಕಟ್ ಹೇಳುತ್ತಿದ್ದ ಲೋಕೇಶ್, ಇದೇನು ಹೊಸ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ ಎನ್ನುವ ಪ್ರಶ್ನೆ ಮೂಡಿದೆ.



ಹೌದು, ಸದ್ಯ ಬಿಡುಗಡೆ ಆಗಿರುವ ಇನಿಮಲ್ ಹೆಸರಿನ ವಿಡಿಯೋದಲ್ಲಿ ಶ್ರುತಿ ಹಾಸನ್ ಮತ್ತು ಲೋಕೇಶ್ ಕನಕರಾಜು ಮೈ ಚಳಿ ಬಿಟ್ಟು ನಟಿಸಿದ್ದಾರೆ. ಅದರಲ್ಲೂ ರೊಮ್ಯಾಂಟಿಕ್ ದೃಶ್ಯದಲ್ಲಿ ಸಖತ್ತಾಗಿ ಕಾಣಿಸಿಕೊಂಡಿದ್ದಾರೆ. ಇದ್ಯಾವ ವಿಡಿಯೋ? ಯಾವುದಕ್ಕೆ ಮಾಡಿದ್ದು ಎನ್ನುವ ವಿವರಗಳು ಲಭ್ಯವಿಲ್ಲ. ಆದರೆ, ಇದೇ 25ನೇ ತಾರೀಖು ಎಲ್ಲದಕ್ಕೂ ಉತ್ತರ ಸಿಗಲಿದೆ.

ಬಲ್ಲ ಮೂಲಗಳ ಪ್ರಕಾರ ಇದೊಂದು ವಿಡಿಯೋ ಸಾಂಗ್ ಎಂದು ಹೇಳಲಾಗುತ್ತಿದೆ. ಈ ವಿಡಿಯೋ ಸಾಂಗ್ ಗೆ ಕಮಲ್ ಹಾಸನ್ ಅವರೇ ಸಾಹಿತ್ಯ ಬರೆದಿದ್ದಾರೆ. ಸಂಗೀತ ಸಂಯೋಜನೆ ಮತ್ತು ನಿರ್ದೇಶನವನ್ನು ಶ್ರುತಿ ಹಾಸನ್ ಮಾಡಿದ್ದಾರೆ. ಲೋಕೇಶ್ ಇದೇ ಮೊದಲ ಬಾರಿಗೆ ಶ್ರುತಿ ಜೊತೆ ಬಣ್ಣ ಹಚ್ಚಿದ್ದಾರೆ.

ಸ್ವತಃ ಕಮಲ್ ಹಾಸನ್ ಅವರೇ ಈ ವಿಡಿಯೋವನ್ನು ನಿರ್ಮಾಣ ಮಾಡಿದ್ದಾರೆ. ಸೋಮವಾರದಿಂದ ಹೆಚ್ಚಿನ ಮಾಹಿತಿಯೊಂದಿಗೆ ಈ ವಿಡಿಯೋ ರಿಲೀಸ್ ಆಗಲಿದೆ.

# ತವರಿನಲ್ಲಿ ಚಾಲೆಂಜ್ ಗೆದ್ದ ಚೆನ್ನೈ

ಸಂಘಟಿತ ಬ್ಯಾಟಿಂಗ್ ಹಾಗೂ ಮುಸ್ತಫಿಜುರ್ ರೆಹಮಾನ್ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್ 6 ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ ಸಿಎಸ್‌ಕೆ ಋತುರಾಜ್ ಗಾಯಕ್ವಾಡ್ ಅವರ ನಾಯಕತ್ವದಲ್ಲಿ ಗೆಲುವಿನ ಶುಭಾರಂಭ ಕಂಡಿದೆ.



ಇಲ್ಲಿನ ಚೆನ್ನೈನ ಚಿದಂಬರಂ (ಚೆಪಾಕ್) ಕ್ರೀಡಾಂಗಣದಲ್ಲಿ ನಡೆದ ಉದ್ಘಾಟನಾ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ 173 ರನ್ ಗಳಿತ್ತು. 174 ರನ್‌ಗಳ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ತಂಡ 18.4 ಓವರ್‌ಗಳಲ್ಲಿ 176 ರನ್ ಬಾರಿ 17ನೇ ಆವೃತ್ತಿಯಲ್ಲಿ ಗೆಲುವಿನ ಖಾತೆ ತೆರೆದಿದೆ.

ಚೇಸಿಂಗ್ ಆರಂಭಿಸಿದ ಚೆನ್ನೈ ತಂಡ ಸ್ಫೋಟಕ ಪ್ರದರ್ಶನದ ಹೊರತಾಗಿಯೂ ವಿಕೆಟ್‌ಗಳನ್ನ ಕಳೆದುಕೊಳ್ಳುತ್ತಾ ಸಾಗಿತ್ತು. ಆರಂಭಿಕ ಆಟಗಾರ ರಚಿನ್ ರವೀಂದ್ರ 15 ಎಸೆತಗಳಲ್ಲಿ 37 ರನ್ ಚಚ್ಚಿದರೆ, ಅಜಿಂಕ್ಯಾ ರಹಾನೆ 27 ರನ್, ಡೇರಿಲ್ ಮಿಚೆಲ್ 22 ರನ್, ನಾಯಕ ಋತುರಾಜ್ ಗಾಯಕ್ವಾಡ್ 15 ರನ್ ಬಾರಿಸಿ ಪೆವಿಲಿಯನ್‌ಗೆ ಮರಳಿದರು. ಮಧ್ಯಮ ಕ್ರಮಾಂಕದಲ್ಲಿ ಬೌಲಿಂಗ್ ಹಿಡಿತ ಸಾಧಿಸಿದ್ದಾಗ ಆರ್‌ಸಿಬಿ ಮೇಲೆ ಗೆಲುವಿನ ನಿರೀಕ್ಷೆ ಇತ್ತು.

ದುಬೆ-ಜಡೇಜಾ ಸಂಘಟಿತ ಬ್ಯಾಟಿಂಗ್:

ಮಧ್ಯಮ ಕ್ರಮಾಂಕದಲ್ಲಿ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದ ಶಿವಂ ದುಬೆ ಹಾಗೂ ರವೀಂದ್ರ ಜಡೇಜಾ 37 ಎಸೆತಗಳಲ್ಲಿ 67 ರನ್‌ಗಳ ಜೊತೆಯಾಟ ನೀಡಿದರು. ದುಬೆ 28 ಎಸೆತಗಳಲ್ಲಿ 34 ರನ್ ಗಳಿಸಿದರೆ, ಜಡೇಜಾ 17 ಎಸೆತಗಳಲ್ಲಿ 25 ರನ್ ಬಾರಿಸಿ ಗೆಲುವಿಗೆ ನೆರವಾದರು.

**ಕಳಪೆ ಬೌಲಿಂಗ್:** ಮಧ್ಯಮ ಕ್ರಮಾಂಕದಲ್ಲಿ ಸುಧಾರಿತ ಪ್ರದರ್ಶನ ನೀಡಿದ್ದ ಆರ್‌ಸಿಬಿ ಬಳಿಕ ಮತ್ತಷ್ಟು ಕಳಪೆ ಬೌಲಿಂಗ್ ಪ್ರದರ್ಶನ ತೋರಿತು. ವೈಡ್, ಲೆಗ್‌ಬೈಸ್‌ನಿಂದಲೇ 16 ರನ್ ಬಿಟ್ಟುಕೊಟ್ಟಿತು. ಇದು ಚೆನ್ನೈ ತಂಡಕ್ಕೆ ಮತ್ತಷ್ಟು ಸಹಕಾರವಾಯಿತು. ಆರ್‌ಸಿಬಿ ಪರ ಕ್ಯಾಮರೂನ್ ಗ್ರೀನ್ 2 ವಿಕೆಟ್ ಕಿತ್ತರೆ, ಯಶ್ ದಯಾಳ್, ಕರ್ಣ್ ಶರ್ಮಾ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ 20 ಓವರ್‌ಗಳಲ್ಲಿ 173 ರನ್ ಬಾರಿಸಿತ್ತು. ಆರ್‌ಸಿಬಿ ಪರ ನಾಯಕ ಫಾಫ್ ಡು ಪ್ಲೆಸಿಸ್ ಆರಂಭದಲ್ಲೇ ಸ್ಫೋಟಕ ಇನ್ನಿಂಗ್ಸ್ ಕಟ್ಟಲು ಮುಂದಾದರು. ಮೊದಲ ವಿಕೆಟ್‌ಗೆ ಕೊಹ್ಲಿ ಹಾಗೂ ಡುಪ್ಲೆಸಿಸ್ ಜೋಡಿ 27 ಎಸೆತಗಳಲ್ಲಿ 41 ರನ್ ಗಳ ಜೊತೆಯಾಟ ನೀಡಿತ್ತು. ಆದ್ರೆ ಡುಪ್ಲೆಸಿಸ್ 23 ಎಸೆತಗಳಲ್ಲಿ 35 ರನ್ (8 ಬೌಂಡರಿ) ಬಾರಿಸಿ ಔಟಾಗುತ್ತಿದ್ದಂತೆ, ಒಂದೊಂದೇ ವಿಕೆಟ್ ಬೀಳಲಾರಂಭಿಸಿದವು. ಮುಂದಿನ 37 ರನ್ ಗಳಿಸುವಷ್ಟರಲ್ಲಿ ಅಗ್ರ ಕ್ರಮಾಂಕದ ಐದು ಬ್ಯಾಟರ್ ಗಳನ್ನ ಕಳೆದುಕೊಂಡು ಸಂಕಷ್ಟಕ್ಕೀಡಾಯಿತು.

ಮಧ್ಯಮ ಕ್ರಮಾಂಕದಲ್ಲಿ ಉತ್ತಮ ಇನ್ನೀಂಗ್ಸ್ ಕಟ್ಟಿದ ದಿನೇಶ್ ಕಾರ್ತಿಕ್ ಮತ್ತು ಅನೂಜ್ ರಾವತ್ ಜೋಡಿ ಉತ್ತಮ ಇನ್ನಿಂಗ್ಸ್ ಕಟ್ಟುವಲ್ಲಿ ಯಶಸ್ವಿಯಾದರು. 50 ಎಸೆತಗಳಲ್ಲಿ ಈ ಜೋಡಿ 95 ರನ್ ಬಾರಿಸುವ ಮೂಲಕ ತಂಡದ ಮೊತ್ತ 170 ರನ್ ಗಳ ಗಡಿ ದಾಟುವಂತೆ ಮಾಡಿತು. ಆರ್‌ಸಿಬಿ ಪರ ಅನೂಜ್ ರಾವತ್ 48 ರನ್ (25 ಎಸೆತ, 4 ಬೌಂಡರಿ, 3 ಸಿಕ್ಸರ್), ದಿನೇಶ್ ಕಾರ್ತಿಕ್ 38 ರನ್ (26 ಎಸೆತ, 3 ಬೌಂಡರಿ, 2 ಸಿಕ್ಸರ್) ಗಳಿಸಿದ್ರೆ, ಡುಪ್ಲೆಸಿಸ್ 35 ರನ್, ಕೊಹ್ಲಿ 21 ರನ್, ಕ್ಯಾಮರೂನ್ ಗ್ರೀನ್ 18 ರನ್ ಗಳಿಸಿದರು. ಹೆಚ್ಚುವರಿ 13 ರನ್ ತಂಡಕ್ಕೆ ಸೇರ್ಪಡೆಯಾಯಿತು.

ಚೆನ್ನೈ ಸೂಪರ್ ಕಿಂಗ್ಸ್ ಪರ ಮುಸ್ತಫಿಜುರ್ ರೆಹಮಾನ್ 4 ಓವರ್‌ಗಳಲ್ಲಿ 9 ರನ್ ಬಿಟ್ಟುಕೊಟ್ಟು 4 ವಿಕೆಟ್ ಕಿತ್ತರೆ, ದೀಪಕ್ ಚಹಾರ್ 1 ವಿಕೆಟ್‌ಗೆ ತೃಪ್ತಿಪಟ್ಟುಕೊಂಡರು.

# 21 ರನ್ ಬಾರಿಸಿದ್ರೂ ಎರಡೆರಡು ದಾಖಲೆ ಬರೆದ ಕಿಂಗ್ ಕೊಹ್ಲಿ!



17ನೇ ಆವೃತ್ತಿ ಐಪಿಎಲ್‌ನ ಉದ್ಘಾಟನಾ ಪಂದ್ಯದಲ್ಲೇ ಆರ್ ಸಿಬಿ ಸ್ಟಾರ್ ಪ್ಲೇಯರ್ ವಿರಾಟ್ ಕೊಹ್ಲಿ 21 ರನ್ ಬಾರಿಸುವ ಮೂಲಕ ಎರಡೆರಡು ದಾಖಲೆಗಳನ್ನ ಉಡೀಸ್ ಮಾಡಿದ್ದಾರೆ.

ಉದ್ಘಾಟನಾ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಮಾಡುವ ಅವಕಾಶವನ್ನು ಸಿಎಸ್‌ಕೆಗೆ ಬಿಟ್ಟುಕೊಟ್ಟಿತು. ಆರ್‌ಸಿಬಿ ಪರ ನಿಧಾನಗತಿಯ ಬ್ಯಾಟಿಂಗ್ ಮಾಡಿ 1 ಸಿಕ್ಸರ್ ಜೊತೆಗೆ 21 ರನ್ ಗಳಿಸಿದ ಕೊಹ್ಲಿ, ಟಿ20 ಕ್ರಿಕೆಟ್‌ನಲ್ಲಿ ಎರಡು ತಂಡಗಳ (ಡೆಲ್ಲಿ ಕ್ಯಾಪಿಟಲ್ಸ್ ಸಿಎಸ್‌ಕೆ) ವಿರುದ್ಧ 1,000 ಸಾವಿರ ರನ್ ಪೂರೈಸಿದ ಮೊದಲ ಭಾರತೀಯ ಬ್ಯಾಟರ್ ಎಂಬ ಖ್ಯಾತಿಗೆ ಪಾತ್ರರಾದರು. ಅಲ್ಲದೇ ಟಿ20 ಕ್ರಿಕೆಟ್‌ನಲ್ಲಿ ವೇಗವಾಗಿ 12,000 ರನ್ ಪೂರೈಸಿದ ಮೊದಲ ಭಾರತೀಯ ಹಾಗೂ ವಿಶ್ವದ 2ನೇ ಆಟಗಾರ ಸಹ ಎನಿಸಿಕಕೊಂಡರು.

ವೆಸ್ಟ್ ಇಂಡೀಸ್ ತಂಡದ ಮಾಜಿ ಆಟಗಾರ ಕ್ರಿಸ್ ಗೇಲ್ 343 ಇನ್ನಿಂಗ್ ್ಸಗಳಲ್ಲಿ 12,000 ರನ್ ಪೂರೈಸಿದ್ದರೆ, ವಿರಾಟ್ 360 ಇನ್ನಿಂಗ್ಸ್‌ಗಳಲ್ಲಿ ಈ ಸಾಧನೆ ಮಾಡಿದ್ದಾರೆ.

ಸದ್ಯ ಚೆನ್ನೈನ ಚಿದಂಬರಂ (ಚೆಪಾಕ್) ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉದ್ಘಾಟನಾ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ 173 ರನ್ ಗಳಿಸಿ. ಸಿಎಸ್‌ಕೆಗೆ 174 ರನ್ ಗಳ ಗುರಿ ನೀಡಿದೆ.

## ಕಾಂಗ್ರೆಸ್‌ನಿಂದ ಆಯನೂರು ಮಂಜುನಾಥ್‌ಗೆ ಟಿಕೆಟ್

# ನೈರುತ್ಯ ಪದವೀಧರ ಕ್ಷೇತ್ರ

**ಬೆಂಗಳೂರು :** ವಿಧಾನ ಪರಿಷತ್‌ನ ನೈರುತ್ಯ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗುರುವಾರ ರಾತ್ರಿ ಘೋಷಿಸಲಾಗಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ತೊರೆದಿದ್ದ ಹಿರಿಯ ಮುಖಂಡ ಆಯನೂರು ಮಂಜುನಾಥ್ ಅವರಿಗೆ ಹೈಕಮಾಂಡ್ ಮಣೆ ಹಾಕಿದೆ. ಈ ಮೂಲಕ ಕಾಂಗ್ರೆಸ್‌ನ ಇನ್ನೊಬ್ಬರ ಆಕಾಂಕ್ಷಿ ಎಸ್. ಪಿ ದಿನೇಶ್ ಅವರಿಗೆ ಹಿನ್ನಡೆಯಾಗಿದೆ. ದಿನೇಶ್ ಅವರು ಹಿಂದಿನ ಎರಡು ಬಾರಿ ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಆ ವೇಳೆ ಬಿಜೆಪಿಯಲ್ಲಿದ್ದ ಆಯನೂರು ವಿರುದ್ಧ ಸೋತಿದ್ದರು. ಇದೀಗ ಕಾಂಗ್ರೆಸ್‌ನಿಂದ ಆಯನೂರು ಕಣಕ್ಕೆ ಇಳಿದಿದ್ದಾರೆ. ನೈರುತ್ಯ ಪದವೀಧರರ ಕ್ಷೇತ್ರದ ಅಭ್ಯರ್ಥಿಯನ್ನು ಲೋಕಸಭಾ ಚುನಾವಣೆಯ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ನಡುವೆ ಪ್ರಕಟಿಸಿ ಸಿದ್ಧತೆ ಆರಂಭಿಸಿದೆ ಕಾಂಗ್ರೆಸ್.



ನೈಋತ್ಯ ಶಿಕ್ಷಕರ ಕ್ಷೇತ್ರದಿಂದ ಕೊಡಗಿನ ಕೆ.ಕೆ. ಮಂಜುನಾಥ್‌ಗೆ ಕೆಪಿಸಿಸಿ ಅವಕಾಶ ಕೊಟ್ಟಿತ್ತು. ಆದರೆ, ಪದವೀಧರ ಕ್ಷೇತ್ರಕ್ಕೆ ಉಳಿಸಿಕೊಂಡಿತ್ತು. ಲೋಕಸಭೆ ಚುನಾವಣೆ ಅಬ್ಬರ ಆರಂಭಗೊಂಡ ನಂತರ ಪರಿಷತ್ ಚುನಾವಣೆಗೆ ಗೌಣವಾಗುತ್ತದೆ ಎಂಬ ಕಾರಣಕ್ಕೆ ತಕ್ಷಣವೇ ಅಭ್ಯರ್ಥಿಗಳನ್ನು ಘೋಷಿಸಿ ಎಂಬುದು ಆಕಾಂಕ್ಷಿಗಳ ಬೇಡಿಕೆಯಾಗಿತ್ತು. ಆದರೆ, ತೀವ್ರ ಪೈಪೋಟಿ ಇದ್ದ ಕಾರಣ ಅಂತಿಮ ಲೆಕ್ಕಾಚಾರ ಹಾಕಿ ಆಯನೂರು ಅವರಿಗೆ ಟಿಕೆಟ್ ಕೊಟ್ಟಿದೆ.

ಎಸ್.ಪಿ.ದಿನೇಶ್ ಹಿಂದಿನ ಎರಡು ಚುನಾವಣೆಗಳಲ್ಲಿ ಕಾಂಗ್ರೆಸ್‌ನಿಂದ ಅವಕಾಶ ಪಡೆದುಕೊಂಡು ಪರಾಭವಗೊಂಡಿದ್ದರೂ, ಈ ಬಾರಿ ಉತ್ತಮ ವಾತಾವರಣವಿರುವುದರಿಂದ ಮತ್ತೊಂದು ಅವಕಾಶ ನೀಡುವಂತೆ ಕೋರಿಕೆ ಸಲ್ಲಿಸಿದ್ದರು. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವ ಆಯನೂರು ಮಂಜುನಾಥ್ ಕಾಂಗ್ರೆಸ್ ಸೇರುವಾಗಲೇ ಟಿಕೆಟ್ ಬೇಡಿಕೆ ಇಟ್ಟಿದ್ದರು. ಹೀಗಾಗಿ ಟಿಕೆಟ್ ಅವರಿಗೇ ಕೊಡಲಾಗಿದೆ.

ನೈಯತ್ಯ ಪದವೀಧರ ಕ್ಷೇತ್ರ ಅಸ್ತಿತಕ್ಕೆ ಬಂದಾಗಿನಿಂದಲೂ ಬಿಜೆಪಿ ಇಲ್ಲಿ ಪಾರಮ್ಯ ಸಾಧಿಸಿದೆ. ಆಯನೂರು ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಹೊರತಾಗಿಯೂ ಬಿಜೆಪಿ ಕ್ಷೇತ್ರ ಉಳಿಸಿಕೊಳ್ಳುವ ವಿಶ್ವಾಸದಲ್ಲಿದೆ. ವಿಧಾನಸಭೆ ಚುನಾವಣೆ ಸಮಯದಲ್ಲಿ ಪಕ್ಷ ತೊರೆದು ಹೋಗಿದ್ದ ಆಯನೂರು ಜೆಡಿಎಸ್ ಸೇರಿದ್ದರು ಅಲ್ಲಿ ಪರಾಭವಗೊಂಡು ಬಳಿಕ ಕಾಂಗ್ರೆಸ್‌ಗೆ ಸೇರ್ಪಡೆಗೊಂಡಿದ್ದರು. ಇದೀಗ ಬಿಜೆಪಿ ವಿರುದ್ಧವೇ ತೊಡೆ ತಟ್ಟಿದ್ದಾರೆ. ಈ ಕ್ಷೇತ್ರವು ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಉಡುಪಿ, ದಕ್ಷಿಣ ಕನ್ನಡ, ದಾವಣಗೆರೆ(ಚನ್ನಗಿರಿ ಮತ್ತು ಹೊನ್ನಾಳಿ ತಾಲೂಕು ಮಾತ್ರ) ಸೇರಿಕೊಂಡು ಒಟ್ಟಾರೆ 5 ಲೋಕಸಭೆ, 30 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿ ಹೊಂದಿದೆ.

# ದಲಿತರನ್ನು ಮುಗಿಸುವುದರಲ್ಲಿ ಸಿದ್ದರಾಮಯ್ಯ ಬಹಳ ಸ್ಟ್ರಾಂಗ್

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಅವರನ್ನು ದುರ್ಬಲ ಪಿಎಂ ಎಂದು ಟೀಕಿಸಿರುವ ಸಿಎಂ ಸಿದ್ದರಾಮಯ್ಯಗೆ ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣ ಸ್ವಾಮಿ ತಿರುಗೇಟು ನೀಡಿದ್ದು, ದಲಿತರನ್ನು ಮುಗಿಸುವುದರಲ್ಲಿ ಅವರು ಸ್ಟ್ರಾಂಗ್ ಎಂದು ವ್ಯಂಗ್ಯವಾಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಛಲವಾದಿ ನಾರಾಯಣ ಸ್ವಾಮಿ, ನಾನೇ ಸ್ಟ್ರಾಂಗ್ ಸಿಎಂ ಅಂತ ಸಿದ್ದರಾಮಯ್ಯ ಹೇಳಿಕೊಂಡು ಓಡಾಡುತ್ತಾರೆ. ಇವರಿಗೆ ಸ್ಟ್ರಾಂಗ್ ಸಿಎಂ ಅಂತ ಸರ್ಟಿಫಿಕೇಟ್ ಕೊಟ್ಟವರು ಯಾರು? ದಲಿತರನ್ನು ಮುಗಿಸುವುದರಲ್ಲಿ ಸಿದ್ದರಾಮಯ್ಯ ಬಹಳ ಸ್ಟ್ರಾಂಗ್ ಇರಬಹುದು ಎಂದರು.



'ಕಾಂಗ್ರೆಸ್ ಪಕ್ಷ ಮುಗಿಸುವುದರಲ್ಲಿ ನೀವು (ಸಿದ್ದರಾಮಯ್ಯ) ಬಹಳ ಸ್ಟ್ರಾಂಗ್ ಇದ್ದೀರಿ. ಮೋದಿ ಕಾಲಿನ ಧೂಳಿಗೂ ನೀವು ಸಮವಲ್ಲ. ಮೇಕೆದಾಟು ವಿರೋಧ ಮಾಡುವ ಡಿಎಂಕೆ ವಿರುದ್ಧ ಯಾವಾಗ ಪಾದಯಾತ್ರೆ ಮಾಡುತ್ತೀರಿ' ಎಂದು ಛಲವಾದಿ ನಾರಾಯಣ ಸ್ವಾಮಿ ಪ್ರಶ್ನಿಸಿದರು.

**ಪ್ರಿಯಾಂಕ್ ಖರ್ಗೆ ಬೀದಿ ಬಸವನಂತೆ: ನಾರಾಯಣಸ್ವಾಮಿ:** ಕಾಂಗ್ರೆಸ್ ಪಕ್ಷದವರು ಸಾಂದರ್ಭಿಕವಾಗಿ ನಾಟಕ ಮಾಡುತ್ತಾರೆ. ಸಿದ್ದರಾಮಯ್ಯ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ದಲಿತ ಸಮುದಾಯಕ್ಕೆ ಅನ್ಯಾಯ ಮಾಡಿದ್ದಾರೆ. ಪ್ರಿಯಾಂಕ್ ಖರ್ಗೆ ಬೀದಿ ಬಸವ ಇದ್ದ ಹಾಗೆ. ಎಲ್ಲಾದರೂ ಸಿಕ್ಕ ಸಿಕ್ಕ ಕಡೆ ಮೇಯ್ದುಕೊಂಡು ಬರಬಹುದು. ಗೃಹ ಸಚಿವರು ಮಾತನಾಡುವ ಮೊದಲೇ ಖರ್ಗೆ ತಾವೇ ಮಾತನಾಡುತ್ತಾರೆ. ಮೋದಿ ಅವರನ್ನು ಪ್ರಿಯಾಂಕ್ ಖರ್ಗೆ ಚೋರ್ ಗುರು ಎನ್ನುತ್ತಾರೆ. ನಿಜವಾದ ಚೋರ್ ಗುರು ಸಿದ್ದರಾಮಯ್ಯ ಎಂದು ಅವರು ಕಿಡಿ ಕಾರಿದರು.

ಪ್ರಿಯಾಂಕ್ ಖರ್ಗೆ ಅಪ್ಪನ ಹೆಸರಿನಲ್ಲಿ ಬಂದು ಬಿಟ್ಟಿದ್ದಾರೆ. ಚಂಡಾಳ ಅಂದರೆ ಅಸಾಂವಿಧಾನಿಕ ಪದ. ಪ್ರಜಾಪ್ರಭುತ್ವದ ಬಗ್ಗೆ ಸಿದ್ದರಾಮಯ್ಯಗೆ ಗೌರವ ಇದ್ರೆ, ಬೀದಿ ಬಸವ ಪ್ರಿಯಾಂಕ್ ಖರ್ಗೆ ಅವರನ್ನು ಸಂಪುಟದಿಂದ ವಜಾ ಮಾಡಬೇಕು. ಇಲ್ಲ ಅಂದರೆ ನೀವೇ ಚೋರ್ ಗುರು, ಪ್ರಿಯಾಂಕ್ ಖರ್ಗೆ ಚಂಡಾಳ ಶಿಷ್ಯ ಎಂದು ಛಲವಾದಿ ಆಕ್ರೋಶ ವ್ಯಕ್ತಪಡಿಸಿದರು.

**'ಸದಾನಂದ ಗೌಡ ಯಾರನ್ನೂ ಉದ್ದೇಶಿಸಿ ಹೇಳಿಲ್ಲ':** ಬಿಜೆಪಿ ಶುದ್ಧೀಕರಣ ಕುರಿತು ಮಾಜಿ ಸಿಎಂ ಸದಾನಂದ ಗೌಡ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಛಲವಾದಿ ನಾರಾಯಣಸ್ವಾಮಿ, ಸದಾನಂದ ಗೌಡರು ಯಾರ ಹೆಸರನ್ನೂ ಹೇಳಿಲ್ಲ. ಅರ್ಥ ಮಾಡಿಕೊಂಡಿರುವವರು ತಪ್ಪು ಅರ್ಥ ಮಾಡಿಕೊಂಡಿದ್ದಾರೆ. ಅದನ್ನು ಸದಾನಂದ ಗೌಡರೇ ಸ್ಪಷ್ಟಪಡಿಸಿದ್ದಾರೆ. ನಾನು ಬೆಳಗ್ಗೆಯಷ್ಟೇ ಸದಾನಂದ ಗೌಡರ ಜೊತೆಗೆ ಮಾತನಾಡಿದ್ದೇನೆ. ಯಾವುದೇ ಗೊಂದಲ ಇಲ್ಲ, ಏನಾದರೂ ಇದ್ದರೆ ಹೈಕಮಾಂಡ್ ನಾಯಕರನ್ನೇ ಕೇಳಬೇಕು. ಟಿಕೆಟ್ ಸಿಕ್ಕಿದವರು ಸಹ ಯಡಿಯೂರಪ್ಪನವರಿಂದಲೇ ನಮಗೆ ಟಿಕೆಟ್ ಸಿಕ್ಕಿದೆ ಅಂತ ಯಾರೂ ಹೇಳುತ್ತಿಲ್ಲ ಎಂದು ಅವರು ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com